ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 65
23-8-2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 65

## ಅಗ್ನಿವೀರ್ ಸ್ಪೋರ್ಟ್ಸ್‌ಮ್ಯಾನ್ ನೇಮಕಾತಿ

**ದಾವಣಗೆರೆ :** :ಮದ್ರಾಸ್ ಇಂಜಿನಿಯರ್ ಗ್ರೂಪ್ ಮತ್ತು ಸೆಂಟರ್ ಬೆಂಗಳೂರು, ಇಲ್ಲಿ ಯುಹೆಚ್‌ಕ್ಯೂ ಕೋಟಾದಡಿಯಲ್ಲಿ ಮಾಜಿ ಸೈನಿಕರ ಮಕ್ಕಳು ಮತ್ತು ಅವಲಂಭಿತರಿಗಾಗಿ ಅಕ್ಟೋಬರ್ 6 ರಂದು ಅಗ್ನಿವೀರ್ ಸ್ಪೋರ್ಟ್ಸ್‌ಮ್ಯಾನ್ ನೇಮಕಾತಿ ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ಮದ್ರಾಸ್ ಇಂಜಿನಿಯರ್ ಗ್ರೂಪ್ ಮತ್ತು ಸೆಂಟರ್ ಬೆಂಗಳೂರು ಇವರನ್ನು ಸಂಪರ್ಕಿಸಲು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ಜೀವತಾವಧಿ ಪ್ರಮಾಣ ಪತ್ರ ಸಲ್ಲಿಕೆಗೆ ಸೂಚನೆ

**ದಾವಣಗೆರೆ :** ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ಮಾಸಾಶನ ಪಡೆಯುತ್ತಿರುವ ಸಾಹಿತಿ, ಕಲಾವಿದರುಗಳು ಪ್ರತಿ ವರ್ಷ ಕಡ್ಡಾಯವಾಗಿ ಮಾರ್ಚ್, ಸೆಪ್ಟೆಂಬರ್ ಮಾಹೆಯಲ್ಲಿ ತಮ್ಮ ಪಿಂಚಣಿ ಪುಸ್ತಕದ ಪ್ರತಿ, ಬ್ಯಾಂಕ್ ಪಾಸ್ ಬುಕ್ ಪ್ರತಿಯೊಂದಿಗೆ ಜೀವಿತಾವಧಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಬ್ಯಾಂಕ್ ಮ್ಯಾನೇಜರ್ ಸಹಿ ಪಡೆದು ಸಹಾಯಕ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾಡಳಿತ ಭವನ ಕೊಠಡಿ ಸಂಖ್ಯೆ:27 ದಾವಣಗೆರೆ ಇಲ್ಲಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬಹುದೆಂದು ಇಲಾಖೆಯ ಸಹಾಯಕ ನಿರ್ದೇಶಕರಾದ ರವಿಚಂದ್ರ ತಿಳಿಸಿದ್ದಾರೆ.

## ಇಂದು-ನಾಳೆ ವಿದ್ಯುತ್ ವ್ಯತ್ಯಯ

**ದಾವಣಗೆರೆ :** : 66/11 ಕೆವಿ ಪಲ್ಲಾಗಟ್ಟೆ ವಿ.ವಿ.ಕೇಂದ್ರ-ಕ್ಕೆ ಸಂಬಂಧಿಸಿದ ಎನ್‌ಜೆವೈ ಮತ್ತು ಐ.ಪಿ 11 ಕೆವಿ ಮಾರ್ಗಗಳಲ್ಲಿ ಆಗಸ್ಟ್ 23 ಮತ್ತು 24 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

## ಪ್ರವಾಸೋದ್ಯಮ ಇಲಾಖೆಯಿಂದ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಅರ್ಜಿ ಆಹ್ವಾನ

**ದಾವಣಗೆರೆ :** ಪ್ರವಾಸೋದ್ಯಮ ಇಲಾಖೆಯಿಂದ ಪ್ರಸಕ್ತ ಸಾಲಿನ ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆ ಅಡಿಯಲ್ಲಿ ಪ್ರವಾಸೋದ್ಯಮ, ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲು ಬಾಕಿ ಉಳಿದಿರುವ ಗುರಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಗೆ ಪರಿಶಿಷ್ಟ ಜಾತಿ 1, ಪರಿಶಿಷ್ಟ ಪಂಗಡದ 1 ಅಭ್ಯರ್ಥಿಗಳ ಗುರಿ ಹೊಂದಲಾಗಿದೆ. ತರಬೇತಿ ಪಡೆಯುವ ಆಸಕ್ತರು ಅಗತ್ಯ ದಾಖಲೆಗಳೊಂದಿಗೆ ಆಗಸ್ಟ್ 25 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ದಾವಣಗೆರೆ ದೂ.ಸಂ:08192-230123 ನ್ನು ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರಾದ ಕಾವ್ಯ ತಿಳಿಸಿದ್ದಾರೆ.

## ಗೇಮಿಂಗ್ ಆ್ಯಪ್‌ಗಳಿಗೆ ಅಕ್ರಮ ಹಣ ವರ್ಗಾವಣೆ

# ಕಾಂಗ್ರೆಸ್ ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ಸ್ಥಳಗಳ ಮೇಲೆ ಇ.ಡಿ ದಾಳಿ

**ಚಿತ್ರದುರ್ಗ:** ಕಾಂಗ್ರೆಸ್ ಶಾಸಕ ಕೆಸಿ ವೀರೇಂದ್ರ ಪಪ್ಪಿ ಹಾಗೂ ಅವರ ಸಹೋದರರ, ಚಳ್ಳಕೆರೆ ಪಟ್ಟಣದಲ್ಲಿರುವ 4 ನಿವಾಸಗಳ ಮೇಲೆ ಜಾರಿ ನಿರ್ದೇಶನಾಲಯ ಅಧಿಕಾರಿಗಳು ಶುಕ್ರವಾರ ಬೆಳಗ್ಗೆ ದಾಳಿ ನಡೆಸಿ ಪರಿಶೀಲನೆ ಮಡುತ್ತಿದ್ದಾರೆ.

ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಮತ್ತು ಇತರರ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ ಬೆಂಗಳೂರು ವಲಯ ಕಚೇರಿಯು 30 ಸ್ಥಳಗಳಲ್ಲಿ ಶೋಧ ನಡೆಸಿದೆ. ಚಿತ್ರದುರ್ಗ-ರ್ಗ ಜಿಲ್ಲೆಯಾದ್ಯಂತ (ಆರು ಸ್ಥಳ), ಬೆಂಗಳೂರು ನಗರ (10 ಸ್ಥಳ), ಜೋಧ್‌ಪುರ (ಮೂರು ಸ್ಥಳ), ಹುಬ್ಬಳ್ಳಿ (ಒಂದು ಸ್ಥಳ), ಮುಂಬೈ (ಎರಡು ಸ್ಥಳ) ಮತ್ತು ಗೋವಾ (ಐದು ಕ್ಯಾಸಿನೊಗಳು ಸೇರಿದಂತೆ ಎಂಟು ಸ್ಥಳ - ಪಪ್ಪೀಸ್ ಕ್ಯಾಸಿನೊ ಗೋಲ್ಡ್, ಓಷನ್ ರಿವರ್ಸ್ ಕ್ಯಾಸಿನೊ, ಪಪ್ಪೀಸ್ ಕ್ಯಾಸಿನೊ ಪ್ರೈಡ್, ಓಷನ್ 7 ಕ್ಯಾಸಿನೊ ಮತ್ತು ಬಿಗ್



ಡ್ಯಾಡಿ ಕ್ಯಾಸಿನೊ) ಮೇಲೆ ದಾಳಿ ನಡೆಸುತ್ತಿದೆ.

ಮೂಲಗಳ ಪ್ರಕಾರ, ವೀರೇಂದ್ರ ಅವರು ಕಿಂಗ್ 567, ರಾಜ 567, ಪಪ್ಪೀಸ್ 003, ರತ್ನ ಗೇಮಿಂಗ್ ಮುಂತಾದ ಆನ್‌ಲೈನ್ ಬೆಟ್ಟಿಂಗ್ ಸೈಟ್‌ಗಳನ್ನು ನಡೆಸುತ್ತಿದ್ದಾರೆ ಎಂದು ಆರೋಪಿಸಲಾಗಿದೆ ಮತ್ತು ಅವರ ಸಹೋದರ ಕೆ ಸಿ ತಿಪ್ಪೇಸ್ವಾಮಿ ದುಬೈನಿಂದ ಡೈಮಂಡ್ ಸಾಫ್ಟೆಕ್, ಟಿಆರ್‌ಎಸ್ ಟೆಕ್ನಾಲಜೀಸ್ ಮತ್ತು ಪ್ರೈಮ್ 9 ಟೆಕ್ನಾಲಜೀಸ್ ಎಂಬ ಮೂರು ವ್ಯವಹಾರ ಸಂಸ್ಥೆಗಳನ್ನು "ನಿರ್ವಹಿಸುತ್ತಿದ್ದಾರೆ" ಎಂದು ಆರೋಪಿಸಲಾಗಿದೆ.

ಈ ಸಂಸ್ಥೆಗಳು ಕಾಲ್ ಸೆಂಟರ್ ಸೇವೆಗಳು ಮತ್ತು ವೀರೇಂದ್ರ ಅವರ ಗೇಮಿಂಗ್ ವ್ಯವಹಾರಕ್ಕೆ "ಸಂಬಂಧಪಟ್ಟಿವೆ".

ಏಜೆನ್ಸಿ ಮೂಲಗಳ ಪ್ರಕಾರ, ಬೆಂಗಳೂರಿನಲ್ಲಿರುವ ಕಾಂಗ್ರೆಸ್ ನಾಯಕಿ ಕುಸುಮಾ ಎಚ್ (ಕಾಂಗ್ರೆಸ್ ಟಿಕೆಟ್‌ನಲ್ಲಿ ರಾಜರಾಜೇಶ್ವರಿನಗರ ವಿಧಾನಸಭಾ ಸ್ಥಾನಕ್ಕೆ ಸ್ಪರ್ಧಿಸಿ ಸೋತಿದ್ದರು) ಅವರ ಸಹೋದರ ಅನಿಲ್ ಗೌಡ ಎಂಬ ವ್ಯಕ್ತಿಯ ಸ್ಥಳವನ್ನೂ ಸಹ ಶೋಧಿಸಲಾಗಿದೆ.

**2016ರಲ್ಲಿಯೂ ದಾಳಿ :** 20ಕ್ಕೂ ಹೆಚ್ಚು ವಾಹನದಲ್ಲಿ ಬಂದಿರುವ 40ಕ್ಕೂ ಹೆಚ್ಚು ಇಡಿ ಅಧಿಕಾರಿಗಳು ಮನೆಗಳಲ್ಲಿ ಪರಿಶೀಲನೆ ನಡೆಸುತ್ತಿದ್ದಾರೆ. ಈ ಹಿಂದೆ ಅಂದರೆ 2016ರ ಡಿಸೆಂಬರ್ 11 ರಂದು ಕೆಸಿ ವೀರೇಂದ್ರ ಮನೆ ಮೇಲೆ ಐಟಿ ದಾಳಿ ನಡೆದಿತ್ತು. ವಿರೇಂದ್ರ ಮನೆಯ ಬಾತ್ ರೂಂನಲ್ಲಿ 5 ಕೋಟಿ ರೂಪಾಯಿಗೂ ಹೆಚ್ಚು ಹಣ, 30 ಕೆಜಿಗೂ ಹೆಚ್ಚು ಚಿನ್ನ ಪತ್ತೆ ಆಗಿತ್ತು.

## ತಮಿಳುನಾಡಿಗೆ ನಿಗದಿಗಿಂತ ಹೆಚ್ಚು ನೀರು ಬಿಟ್ಟಿದ್ದೇವೆ; ಹೆಚ್ಚುವರಿ ನೀರು ಸಂಗ್ರಹಿಸಲು ಮೇಕೆದಾಟು ಅಗತ್ಯ:

**ಬೆಂಗಳೂರು:** ರಾಜ್ಯದ ಕಾವೇರಿ ಜಲಾನಯನ ಪ್ರದೇಶದಲ್ಲಿ ಕಳೆದ ಮೂರು ತಿಂಗಳುಗಳಿಂದ



ಭರ್ಜರಿ ಮಳೆಯಾಗುತ್ತಿರುವುದರಿಂದ ತಮಿಳುನಾಡಿಗೆ ಅಗತ್ಯಕ್ಕಿಂತಲೂ ಹೆಚ್ಚಿನ ಕಾವೇರಿ ನೀರು ಹರಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಹೇಳಿದ್ದಾರೆ.

ಕರ್ನಾಟಕವು ನೆರೆಯ ರಾಜ್ಯಕ್ಕೆ ನಿಗದಿ ಮಾಡಿದ್ದಕ್ಕಿಂತ ಹೆಚ್ಚಿನ ನೀರನ್ನು ಬಿಡುಗಡೆ ಮಾಡುತ್ತಿದೆ. ಹೆಚ್ಚವರಿ ನೀರು ಸಂಗ್ರಹಿಸಲು ಕಾವೇರಿ ನದಿಗೆ ಅಡ್ಡಲಾಗಿ ಮೇಕೆದಾಟುವಿನಲ್ಲಿ ಸಮತೋಲನ ಜಲಾಶಯ ನಿರ್ಮಾಣ ಮಾಡುವ ಅಗತ್ಯ ಇದೆ ಎಂದು ಸಿದ್ದರಾಮಯ್ಯ ಅವರು ಇಂದು ವಿಧಾನಸಭೆಗೆ ತಿಳಿಸಿದರು.

"ಸಾಮಾನ್ಯ ಮಳೆಯ ಸಮಯದಲ್ಲಿ ನಾವು ತಮಿಳುನಾಡಿಗೆ 177.25 ಟಿಎಂಸಿ ನೀರು ಬಿಡುಗಡೆ ಮಾಡಬೇಕಾಗಿದೆ. ಆದರೆ ನಾವು ನಿಗದಿಗಿಂತ ಹೆಚ್ಚಿನ ನೀರನ್ನು ಈಗಾಗಲೇ ಬಿಡುಗಡೆ ಮಾಡಿದ್ದೇವೆ. ಅದಕ್ಕಾಗಿಯೇ ನಾವು ಮೇಕೆದಾಟುನಲ್ಲಿ ಸಮತೋಲನ ಜಲಾಶಯ ನಿರ್ಮಾಣಕ್ಕೆ ಒತ್ತಾಯಿಸುತ್ತಿದ್ದೇವೆ" ಎಂದು ಸಿದ್ದರಾಮಯ್ಯ ಮುಂಗಾರು ಅಧಿವೇಶನದ ಕೊನೆಯ ದಿನವಾದ ಇಂದು ವಿಧಾನಸಭೆಗೆ ತಿಳಿಸಿದರು.ತಮಿಳುನಾಡು ಇದನ್ನು ಏಕೆ ವಿರೋಧಿಸುತ್ತಿದೆ ಎಂದು ನನಗೆ ಅರ್ಥವಾಗುತ್ತಿಲ್ಲ. ಅವರು ಕೇವಲ 177.25 ಟಿಎಂಸಿ ನೀರಿಗೆ ಮಾತ್ರ ಅರ್ಹರು. ಸುಪ್ರೀಂ ಕೋರ್ಟ್ ಕೂಡ ಅದನ್ನೇ ಹೇಳಿದೆ. ನಾವು ಮೇಕೆದಾಟು ಜಲಾಶಯ ನಿರ್ಮಿಸಿದರೆ, 67 ಟಿಎಂಸಿ ನೀರನ್ನು ಹಿಡಿದಿಟ್ಟುಕೊಳ್ಳಬಹುದು. ಇದು ನಮಗೆ ಕುಡಿಯುವ ನೀರಿಗೆ ಸಹಾಯ ಮಾಡುತ್ತದೆ ಮತ್ತು ಬರಗಾಲದ ಸಮಯದಲ್ಲಿಯೂ ಸಹ ಅದನ್ನು ಬಿಡುಗಡೆ ಮಾಡಬಹುದು" ಎಂದು ಮುಖ್ಯಮಂತ್ರಿಗಳು ಹೇಳಿದರು.

# ಬಾಲ್ಯವಿವಾಹ ಮುಕ್ತ ಜಿಲ್ಲೆಗೆ ಶ್ರಮಿಸಲು ಕರೆ

### ಬಾಲ್ಯ ವಿವಾಹ ನಿಷೇಧ ಕುರಿತ ಚಿಂತನಾ-ಮಂಥನ ಕಾರ್ಯಗಾರದಲ್ಲಿ ನ್ಯಾ.ಮಹಾವೀರ ಮ. ಕರೆಣ್ಣವರ್

**ದಾವಣಗೆರೆ :** ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಪೋಕ್ಸೋ ಪ್ರಕರಣಗಳನ್ನು ಗುರುತಿಸಿ ಸೂಕ್ತ ಕ್ರಮ ಕೈಗೊಳ್ಳುವ ಮೂಲಕ ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಅಧಿಕಾರಿಗಳು ಅವಿರತವಾಗಿ ಶ್ರಮಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರಣ್ಣವರ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಾರ್ಮಿಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಸ್ಫೂರ್ತಿ ಸಂಸ್ಥೆ ಸಹಯೋಗದಲ್ಲಿ ಶುಕ್ರವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ಒಂದು ದಿನದ ಬಾಲ್ಯವಿವಾಹ ನಿಷೇಧ ಕುರಿತು ಚಿಂತನಾ ಮಂಥನ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಒಟ್ಟು 6 ತಾಲ್ಲೂಕು ಹೊಂದಿದ್ದು, ಗ್ರಾಮೀಣ, ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ 2 ಸಾವಿರ ಬಾಲ್ಯವಿವಾಹ ನಿಷೇಧಾಧಿಕಾರಿಗಳಿದ್ದಾರೆ. ಆದರೆ ಬಾಲ್ಯ ವಿವಾಹ ಪ್ರಕರಣ ತಡೆಯುವಲ್ಲಿ ವಿಫಲರಾಗುತ್ತಿದ್ದಾರೆ. ಯಾವುದೇ ಗ್ರಾಮ ಅಥವಾ ಸ್ಥಳೀಯ ಮಟ್ಟದ ಅಧಿಕಾರಿಗಳಿಗೆ ವಿವಾಹ ಸಿದ್ದತೆ,




ಪೂರ್ವ ತಯಾರಿ ಕುರಿತು ಮಾಹಿತಿ ಲಭ್ಯವಿಲ್ಲದೇ ಇರುವುದಿಲ್ಲ. ಆದರೂ ಇಂತಹ ಪ್ರಕರಣಗಳು ಇಂದಿಗೂ ದಾಖಲಾಗುತ್ತಿರುವುದು ವಿಷಾಧನೀಯ. ಬಾಲ್ಯ ವಿವಾಹ ಮತ್ತು ಪೋಕ್ಸೋ ತಡೆದಲ್ಲಿ ಒಂದು ಮಗುವಿನ ಸರ್ವಾಂಗೀಣ ಬೆಳವಣಿಗೆಗೆ ಕಾರಣವಾಗಬಹುದು. ದೇಶದ ಭವಿಷ್ಯ ಯುವ ಸಮುದಾಯದ ಮೇಲಿದೆ, ದೇಶ ಸುಭದ್ರತೆ ಮತ್ತು ಬಲಿಷ್ಠ, ಆರೋಗ್ಯಯುತ ಸಮಾಜ ನಿರ್ಮಾಣ ಮಾಡಲು ಆರೋಗ್ಯವಂತ ಯುವ ಪೀಳಿಗೆ ಬೆಳೆಯಬೇಕು ಎಂದ ಅವರು, ಪ್ರಸ್ತುತ ಮಾನವನ ಜೀವನ ಶೈಲಿ ಬದಲಾವಣೆಯಾಗಿದೆ. ಮಾನವೀಯ ಮೌಲ್ಯಗಳು ಕೂಡ ಕ್ಷೀಣಿಸುತ್ತಿವೆ. ಆದ್ದರಿಂದ ಪ್ರತಿಯೊಬ್ಬರೂ ಸಾಮಾಜಿಕ ಜವಾಬ್ದಾರಿ ಅರಿತು ಕೆಲಸ ಮಾಡಬೇಕಿದೆ ಎಂದರು.

ನಿಸರ್ಗವು ಯಾವ ಕಾಲಕ್ಕೆ, ಯಾವ ಸಂದರ್ಭಕ್ಕೆ ಹೂ ಬಳ್ಳಿ, ಹಣ್ಣು, ಕಾಯಿ ಕೊಡಬೇಕು ಎಂದು ನಿರ್ಧರಿಸಿ ಫಲ ಕೊಡುತ್ತಿದೆ. ಅದರಂತೆ ಏನು ಅರಿಯದ, ಜೀವನ ನಡೆಸುವ ಪದ್ಧತಿಯೇ ಗೊತ್ತಿಲ್ಲದ ಮಕ್ಕಳಿಗೆ ಬಡತನ, ಆರ್ಥಿಕ ಹಾಗೂ ಸಾಮಾಜಿಕ ಅಸಮಾನತೆಯ ಕಾರಣಗಳಿಂದ ಬಾಲ್ಯವಿವಾಹ ಎಂಬ ಸಂಕೋಲೆಗಳಿಗೆ ದೂಡುತ್ತಾರೆ. ಇದರಿಂದ ಮಕ್ಕಳ ಭವಿಷ್ಯದ ಮೇಲೆ ಪರಿಣಾಮ ಬೀರುವುದಲ್ಲದೇ, ಶಿಶು ಮರಣ ಮತ್ತು ತಾಯಿ ಮರಣ ಪ್ರಕರಣಗಳು ಹೆಚ್ಚಾಗಲು ಕಾರಣವಾಗುತ್ತದೆ. ಈ ನಿಟ್ಟಿನಲ್ಲಿ ಬಾಲ್ಯ ವಿವಾಹ ನಿಲ್ಲಬೇಕಾಗಿದೆ.

ಬಾಲ್ಯವಿವಾಹ ನಿರ್ಮೂಲನೆಗೆ ಗ್ರಾಮೀಣ ಮಟ್ಟದಿಂದ ಅನೇಕ ಸಮಿತಿಗಳನ್ನು ಅನುಷ್ಠಾನಗೊಳಿಸಿದೆ. ಆದರೆ ಅವುಗಳು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಅಧಿಕಾರಿಗಳು ನಿರ್ಲಕ್ಷ್ಯವಹಿಸದೇ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕು. ಸಾರ್ವಜನಿಕರಿಗೆ ಮತ್ತಷ್ಟು ಅರಿವು ಮೂಡಿಸುವ ಕೆಲಸ ಮಾಡಬೆಕು ಎಂದು ತಾಕೀತು ಮಾಡಿದರು.

ಮಹಿಳೆ ಮತ್ತು ಮಕ್ಕಳ ಮೇಲೆ ಲೈಂಗಿಕ, ದೈಹಿಕ ದೌರ್ಜನ್ಯ, ಪೋಕ್ಸೋ ಕುರಿತು ಮಾಹಿತಿ ತಿಳಿದು ಬಂದಲ್ಲಿ ಸಂಬಂಧಪಟ್ಟ ಇಲಾಖೆ, ಮಕ್ಕಳ ಸಹಾಯವಾಣಿ ಸಂಖ್ಯೆ 1098 ಅಥವಾ ಪೊಲೀಸ್ ಸಹಾಯವಾಣಿ 112ಗೆ ಸಂಪರ್ಕಿಸಿ ಮಾಹಿತಿ ನೀಡಿದಲ್ಲಿ ನಿರ್ಧಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಬಾಲ್ಯವಿವಾಹ ಮತ್ತು ಪೋಕ್ಸೋ ಕಾಯ್ದೆ ಕುರಿತ ಕಾನೂನಾತ್ಮಕವಾಗಿ ಸಂಕ್ಷಿಪ್ತವಾಗಿ ಮಾಹಿತಿ ನೀಡಿ, ಅಧಿಕಾರಿಗಳ ಕೇಳಿದ ಪ್ರಶ್ನೆಗಳಿಗೆ ಹಾಗೂ ಅವರಲ್ಲಿನ ಗೊಂದಲ, ಸಮಸ್ಯೆಗಗಳಿಗೆ ಸೂಕ್ತ ಪರಿಹಾರ ನೀಡಿ-ದರು.

## ಧರ್ಮಸ್ಥಳದ ಘನತೆಗೆ ದಕ್ಕೆ ತರುತ್ತಿರುವವರನ್ನು ತಕ್ಷಣ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಮನವಿ

**ಜಗಳೂರು:** ಧರ್ಮಸ್ಥಳದ ಘನತೆಗೆ ದಕ್ಕೆ ತರುತ್ತಿರುವವರನ್ನು ತಕ್ಷಣ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಜಗಳೂರು ಪಟ್ಟಣದಲ್ಲಿ ಶುಕ್ರುವಾರ ಯುವ ಬ್ರಿಗೇಡ್ ತಾಲೂಕು ಸಂಚಾಲಕ ಲೋಹಿತಾಶ್ವ ನೇತೃತ್ವದಲ್ಲಿ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಯುವ ಬ್ರಿಗೇಡ್ ತಾಲೂಕು ಸಂಚಾಲಕ ಲೋಹಿತಾಶ್ವ ಮಾತನಾಡಿ ಭಾರತದ ಪ್ರತಿಷ್ಠಿತ ಧಾರ್ಮಿಕ ಶ್ರದ್ಧಾ ಕೇಂದ್ರಗಳಲ್ಲಿ ಪ್ರಮುಖವಾಗಿರುವ ಧರ್ಮಸ್ಥಳ ಶ್ರೀ ಮಂಜುನಾಥ ಸ್ವಾಮಿಯ ದೇವಾಲಯ ದಶಕಗಳಿಂದ ಸಮಾಜಮುಖಿ ಕಾರ್ಯಗಳ ಮೂಲಕ ಧಾರ್ಮಿಕ



ಶ್ರದ್ದೆಯ ಸಂಕೇತವಾಗಿ ಗುರುತಿಸಿಕೊಂಡಿದೆ. ಧಾರ್ಮಿಕ ಕಾರ್ಯಕ್ರಮಗಳು ಕ್ಷೇತ್ರಗಳ ಜೀರ್ಣೋದ್ದಾರ ಹಾಗೂ ಸಾಮಾಜಿಕ ಸೇವ ಕಾರ್ಯಗಳಿಂದ ಧರ್ಮಸ್ಥಳವು ಕೋಟ್ಯಾಂತರ ಭಕ್ತರ ಭರವಸೆಯ ಕೇಂದ್ರವಾಗಿದೆ.

ಇತ್ತೀಚಿನ ದಿನಗಳಲ್ಲಿ ಪಟ್ಟಬದ್ಧ ಹಿತಾಸಕ್ತಿಗಳು ಹಾಗೂ ಹಿಂದೂ ವಿರೋಧಿ ಶಕ್ತಿಗಳು ಸಂಘಟಿತವಾಗಿ ಅಪಪ್ರಚಾರ ನಡೆಸುತ್ತಿದ್ದು ಧರ್ಮಸ್ಥಳದ ಗೌರವ ಹಾಗೂ ಘನತೆ ಗೆದ್ದಕ್ಕೆ ತರುವಂತ ಕೆಲಸಗಳಲ್ಲಿ ತೊಡಗಿಕೊಂಡಿದ್ದಾರೆ ಇದು ಕೋಟ್ಯಾಂತರ ಕನ್ನಡಿಗರ ಭಾವನೆಗಳಿಗೆ ನೋವನ್ನುಂಟು ಮಾಡುವುದರೊಂದಿಗೆ ಸಮಾಜದ ಶಾಂತಿ ಸೌಹಾರ್ದತೆಗೂ ಧಕ್ಕೆ ತರುತ್ತಿದೆ ಎಂದರು.

## ವೈಭವದಿಂದ ಜರುಗಿದ ಹಿರೇಕಲ್ಮಠದ ಶ್ರೀ ಚನ್ನಪ್ಪಸ್ವಾಮೀಜಿ ಮಹಾರಥೋತ್ಸವ



**ಹೊನ್ನಾಳಿ :** ಧಾರ್ಮಿಕಾ ಪುರಾಣ ಪ್ರಸಿದ್ದ ಹೊನ್ನಾಳಿ ಪಟ್ಟಣದ ಹಿರೇಕಲ್ಮಠದ ಶ್ರೀ ಚನ್ನಪ್ಪಸ್ವಾಮೀಜಿ ಮಹಾರಥೋತ್ಸವ ಶುಕ್ರವಾರ ಸಾವಿರಾರು ಭಕ್ತ ಸಮೂಹದ ನಡುವೆ ಅದ್ದೂ-ರಿಯಾಗಿ ನೆರವೇರಿತು.

ಕಳೆದ ಒಂದು ವಾರದಿಂದ ತಾಲೂಕಿನಲ್ಲಿ ಮಳೆಯ ಅರ್ಭಟವಿದ್ದು ಮಹಾರಥೋತ್ಸವಕ್ಕೆ ಬಹಳ ತೊಂದರೆ-ಯಾಗುತ್ತದೆ ಎಂದು ಶ್ರೀಮಠದ ಭಕ್ತರಲ್ಲಿ ಅತಕ್ಕವಿತ್ತು ಶ್ರೀ ಚನ್ನಪ್ಪ ಸ್ವಾಮಿಯ ಆರ್ಶಿವದದಿಂದ ಕಳೆದ ಎರೆಡು ದಿನಗಳಿಂದ ಮಳೆ ಬಿಡುವು ನಿಡಿದ್ದರಿಂದ ಮಹಾರಥೋತ್ಸವ ಬಹಳ ಅದ್ದೂರಿಯಾಗಿ ನಡೆಯಿತು.

ಅರೆ ಮಲೆನಾಡು ಮಧ್ಯ ಕರ್ನಾಟಕದಲ್ಲೇ ಧಾರ್ಮಿಕ ಕ್ಷೇತ್ರ ಹಾಗೂ ಹೊನ್ನಿನ ಮಳೆ ಸುರಿಸಿದ್ದ ಪುರಾಣ ಇತಿಹಾಸ ಪ್ರಸಿದ್ದ ಪುಣ್ಯಕ್ಷೇತ್ರವಾದ ಶ್ರಿ ಚನ್ನಪ್ಪ ಸ್ವಾಮೀಜಿ ಹಿರೇಕಲ್ಮಠದಲ್ಲಿ ಕಳೆದ ಒಂದು ತಿಂಗಳ ಕಾಲ ಶ್ರಾವಣ ಮಾಸದ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಗಳ ಜೋತೆಗೆ ಪೂಜಾ ಕೈಂಕರ್ಯಗಳು ನಡೆಯುತ್ತಿದ್ದವು.

ಶುಕ್ರವಾರ ಪ್ರಾತಃಕಾಲದಲ್ಲೇ ಶ್ರೀಚನ್ನಪ್ಪಸ್ವಾಮೀಜಿ ಹಿರೇಕಲ್ಮಠದ ಪೀಠಾಧ್ಯಕ್ಷ ಶ್ರೀಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮೀಜಿಯ ಸಮ್ಮುಖದಲ್ಲಿ ಕ್ಷೇತ್ರದ ಶ್ರೀಜಗದ್ಗುರುಗಳ ಕರ್ತೃಗದ್ದುಗೆಗಳಿಗೆ ಹಾಗೂ ಶ್ರೀ ಒಡೆ-ಯರ್ ಮತ್ಯುಂಜಯ ಶಿವಾಚಾರ್ಯ ಮಹಾಸ್ವಾಮೀಜಿ, ಶ್ರೀಒಡೆಯರ್ ಚಂದ್ರಶೇಖರ್ ಶಿವಾಚಾರ್ಯ ಮಹಾಸ್ವಾಮೀಜಿಯ ಕರ್ತೃಗದ್ದುಗೆಗಳಿಗೆ ಹಾಗೂ ಶ್ರೀ ವೀರಭದ್ರೇಶ್ವರಮೂರ್ತಿಗೆ ಸಾಕ್ಷಿಗಣಪತಿಗೆ,ಶ್ರೀ ಶೈಲಮಲ್ಲಿಕಾರ್ಜುನ ಶಿವಲಿಂಗಕ್ಕೆ ಮಹಾ ರುದ್ರಾಭಿಷೇಕ,ಬಿಲ್ವಾರ್ಚನೆ ದೀಪೋತ್ಸವ ಮಹಾಮಂಗಳಾರತಿಯ ವಿಶೇಷ ಪೂಜಾ ಕೈಕರ್ಯಗಳು ನಡೆದವು.ನಂತರ ಮಠದ ಮುಂಭಾಗದಲ್ಲಿ ವೀರಭದ್ರದೇವರ ಕೆಂಡದರ್ಚನೆಯು ನಡೆಯಿತು.

ವೀರಭದ್ರದೇವರ ಕೆಂಡದರ್ಚನೆಯ ನಂತರ 12 ಗಂಟೆಗೆ ಹಿರೇಕಲ್ಮಠದ ಪೀಠಾಧ್ಯಕ್ಷ ಶ್ರೀಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿಯವರನ್ನು ಕುದುರೆಯಲ್ಲಿ ಕುಳುರಿಸಿ ಶ್ರೀಮಠದಿಂದ ಮಂಗಳವಾದ್ಯದದೊಂದಿಗೆ ಮಠದ ದ್ವಾರ ಭಾಗಿಲಿನ ಮುಭಾಂಗಕ್ಕೆ ಕರೆತಂದರು,ನಂತರ ಪಂಚಪೀಠದ ಧ್ವಜ,ವಿವಿಧ ಹೊವುಗಳು,ಹಸಿರುತಳಿರು ತೋರಣಗಳಿಂದ ಭವ್ಯ ವಾಗಿ ಅಲಂಕೃತಗೊಂಡಿದ್ದ ಶ್ರೀಚನ್ನಪ್ಪಸ್ವಾಮೀಜಿ ಮಹಾರಥೋತ್ಸವಕ್ಕೆ ಪುರೋಹಿತರ ವೇದಮಂತ್ರಗಳ ಘೋಷಣೆಯೊಂದಿಗೆ ಮಹಾಪೂಜೆ,ರಥದ ಗಾಲಿಗೆ ಬಲಿಅನ್ನ ಸೇರಿದಂತೆ ವಿವಿಧ ಧಾರ್ಮಿಕ ಪೂಜೆಗಳು ನಡೆದವು.

ಸ್ವಾಮೀಜಿ ರಥಾರೋಹಣ ಗೈಯುತ್ತಿದ್ದಂತೆಯೇ ನೆರೆದಿದ್ದ ಸಾವಿರಾರು ಭಕ್ತರು ಜಗದ್ಗುರು ಪಂಚಾಚಾರ್ಯ ಮಹಾರಾಜಕೀ ಜೈ, ಶ್ರೀಚನ್ನಪ್ಪಸ್ವಾಮೀಜಿಗೆ ಜೈ, ಒಡೆಯರ್ ಚಂದ್ರಶೇಖರ್ ಶಿವಾಚಾರ್ಯ ಮಹಾಸ್ವಾಮೀಜಿಕೀ ಜೈ ಮಾನವ ಧರ್ಮಕ್ಕ ಜಯವಾಗಲಿ ಧರ್ಮದಿಂದ ವಿಶ್ವಕ್ಕೆ ಶಾಂತಿ ಎಂದು ಜಯಕಾರಗಳ ಘೋಷಣೆಯನ್ನು ಕೂಗಿದರು.

ನಂತರ ಮಧ್ಯಹ್ನ 12.30 ಗಂಟೆಗೆ ಭವ್ಯವಾಗಿ ಆಲಂಕೃತಗೊಂಡ ಮಹಾ ರಥೋತ್ಸವ ಮಠದ ದ್ವಾರ ಭಾಗಿಲಿನ ಮುಂಭಾಗದಿಂದ ಪಟ್ಟಣದ ವೀರ ಸಂಗೋಳ್ಳಿ ರಾಯಣ್ಣ ವೃತ್ತದವರೆಗೆ ಸಾವಿರಾರು ಭಕ್ತರು ಮಹಾ ರಥೋತ್ಸವವನ್ನು ಎಳೆದು ಪುನೀತರಾದದರು.

## ಸಾರಥಿ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ಸಾಮಾಜಿಕ ಭದ್ರತಾ ಯೋಜನೆಗಳ ಸ್ಯಾಚುರೇಷನ್ ಅಭಿಮಾನ

**ದಾವಣಗೆರೆ :** ಜಿಲ್ಲೆಯ ಹರಿಹರ ತಾಲೂಕಿನ ಸಾರಥಿ ಗ್ರಾಮದಲ್ಲಿ ಆಗಸ್ಟ್ 22,2025 ರಂದು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ವತಿಯಿಂದ ಗ್ರಾಮ ಪಂಚಾಯಿತಿ ಮಟ್ಟದ ಸಾಮಾಜಿಕ ಭದ್ರತಾ ಯೋಜನೆಗಳ ಸ್ಯಾಚುರೇಷನ್ ಅಭಿಮಾನವನ್ನು ನಡೆಸಲಾಯಿತು.

ದಾವಣಗೆರೆ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ರೇಷ್ಮಾ ಕೌಸರ್ ಈ ಅಭಿಯಾನಕ್ಕೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಪಿಎಂ ಜನ್ ಧನ್ ಖಾತೆ ಸೇರಿದಂತೆ ಜೀವ ವಿಮೆ ಆಧಾರಿತ ಯೋಜನೆಗಳ ಮಾಡಿಸಿಕೊಂಡರೆ ಅಪಘಾತ ಮತ್ತು ಜೀವಕ್ಕೆ ಸುರಕ್ಷತಾ ಆರ್ಥಿಕ ನೆರವು ಪಡೆಯಲು ಸಹಾಯಕವಾಗಲಿದೆ. ಈ ಬಗ್ಗೆ ಜನರಲ್ಲಿ ಅರಿವು ಮೂಡಿಸುವ




ಮತ್ತು ಯೋಜನೆಗಳ ಸದುಪಯೋಗಕ್ಕೆ ಅಭಿಯಾನ ಮಾಡಲಾಗುತ್ತಿದೆ. 194 ಗ್ರಾಮ ಪಂಚಾಯತಿಗಳಲ್ಲಿ 85 ಗ್ರಾಮ ಪಂಚಾಯತಿಗಳಲ್ಲಿ ಈ ರೀತಿ ಅಭಿಯಾನ ಹಮ್ಮಿಕೊಳ್ಳಲಾಗಿತ್ತು. ಜನರು ಈಗಾಗಲೇ ಈ ಅಭಿಯಾನ ಬಗ್ಗೆ ಜಾಗೃತಿ ಹೊಂದಿದ್ದು, ಯೋಜನೆ ಸದುಪಯೋಗಕ್ಕೆ ಮನಸ್ಸು ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಬೆಂಗಳೂರು ಜಿ.ಎಂ.ಎಸ್. ಎಲ್. ಬಿ.ಸಿಯ ಎಂ. ಭಾಸ್ಕರ್ ಚಕ್ರವರ್ತಿ, ದಾವಣಗೆರೆ ಎಲ್ ಡಿ ಎಂ. ಪಾಡ್ಡಯ್ಯ ಸಿ. ಹಿರೇಮಠ್, ಸಾರಥಿ ಗ್ರಾಮ ಪಂಚಾಯತ್ ಅಧ್ಯಕ್ಷ ಗೋಣಿಬಸಪ್ಪ, ಗ್ರಾಮ ಪಂಚಾಯಿತಿ ಪಿಡಿಓ ಬೀರೇಶ್, ಯುಬಿಐ ಆರ್ ಓ. ಸುಬ್ಬರಾವ್, ದಾವಣಗೆರೆ ಕೆನರಾ ಬ್ಯಾಂಕ್ ಡಿಜಿಎಂ ತನ್ಮಯ ದಾಸ್ ಸೇರಿದಂತೆ ಸಾರಥಿ ಗ್ರಾಮಸ್ಥರು ಉಪಸ್ಥಿತರಿದ್ದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಮನೆಯಲ್ಲಿ ಕೆಲಸ ಮಾಡುವಾಗ ವಿಶೇಷ ಎಚ್ಚರ ವಹಿಸಿ. ಮನೆ ಬಳಕೆಯ ವಸ್ತುಗಳ ಯಾವುದೇ ಅಸಡ್ಡೆಯ ಬಳಕೆ ನಿಮಗೆ ಸಮಸ್ಯೆ ಉಂಟುಮಾಡಬಹುದು. ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ. ವಿಶೇಷವಾಗಿ ನಿಮ್ಮ ಹಣದಚೀಲವನ್ನು ಎಚ್ಚರಿಕೆಯಿಂದಿಡಿ.

### ವೃಷಭ ರಾಶಿ

ಆರೋಗ್ಯ ಚೆನ್ನಾಗಿರುತ್ತದೆ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಮಕ್ಕಳು ನೀವು ಅವರೆಡೆಗೆ ಗಮನ ಹರಿಸಬೇಕೆಂಬ ಬೇಡಿಕೆಯಿಟ್ಟರೂ ಅವರು ನಿಮಗೆ ಸಂತೋಷ ತರುತ್ತಾರೆ. ಒಮ್ಮೆ ನಿಮ್ಮ ಜೀವನಸಂಗಾತಿಯನ್ನು ನೀವು ಭೇಟಿಯಾದ ಮೇಲೆ, ಬೇರೇನೂ ಬೇಕಾಗಿರುವುದಿಲ್ಲ. ನೀವು ಇಂದು ಈ ಸತ್ಯವನ್ನು ಅರಿತುಕೊಳ್ಳುತ್ತೀರಿ. ಸಹಭಾಗಿತ್ವದ ಅವಕಾಶಗಳು ಚೆನ್ನಾಗಿ ಕಂಡರೂ ಎಲ್ಲವನ್ನೂ ಸ್ಪಷ್ಟವಾಗಿ ತಿಳಿದುಕೊಳ್ಳಿ.

### ಮಿಥುನ ರಾಶಿ

ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಒಬ್ಬ ಹಳೆಯ ಸ್ನೇಹಿತರು ಸಂಜೆ ನಿಮಗೆ ಕರೆ ಮಾಡುತ್ತಾರೆ ಮತ್ತು ಹಳೆಯ ನೆನಪುಗಳನ್ನು ತೆರೆದಿಡುತ್ತಾರೆ. ನಿಮ್ಮ ಸಂಗಾತಿಯ ಪ್ರೀತಿ ನಿಜವಾಗಿಯೂ ಭಾವಪೂರ್ಣವಾಗಿದೆ ಎಂದು ಇಂದು ನೀವು ತಿಳಿದುಕೊಳ್ಳುತ್ತೀರಿ. ಕೆಲಸದಲ್ಲಿ ಇಂದು ಎಲ್ಲವೂ ನಿಮ್ಮ ಪರವಾಗಿರುತ್ತವೆ

### ಕರ್ಕ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ಕೌಟುಂಬಿಕ ಸಮಸ್ಯೆಗೆ ಮೊದಲ ಆದ್ಯತೆ ನೀಡಬೇಕು.ನೀವು ವಿಳಂಬವಿಲ್ಲದೇ ಇದನ್ನು ಚರ್ಚಿಸಬೇಕು, ಏಕೆಂದರೆ ಒಮ್ಮೆ ಇದನ್ನು ಬಗೆಹರಿಸಿದ ನಂತರ ಮನೆಯಲ್ಲಿನ ಜೀವನ ನಡೆಸಲು ಹೆಚ್ಚು ಸುಲಭವಾಗುತ್ತದೆ

### ಸಿಂಹ ರಾಶಿ

ಪತ್ನಿ ನೀವು ಹುರಿದುಂಬಿಸಬಹುದು. ನಿಮ್ಮ ಸ್ನೇಹಿತರೊಬ್ಬರು ಇಂದು ದೊಡ್ಡ ಸಾಲವನ್ನು ಕೇಳಬಹುದು, ನೀವು ಅವರಿಗೆ ಈ ಹಣವನ್ನು ಕೊಟ್ಟರೆ, ನೀವು ಆರ್ಥಿಕ ತೊಂದರೆಗೊಳಗಾಗಬಹುದು. ಹೊಸ ಕೌಟುಂಬಿಕ ಉದ್ಯಮವನ್ನು ಆರಂಭಿಸಲು ಪವಿತ್ರವಾದ ದಿನ. ಇದನ್ನು ಒಂದು ದೊಡ್ಡ ಯಶಸ್ಸಾಗಿಸಲು ಇತರ ಸದಸ್ಯರ ಸಹಾಯ ತೆಗೆದುಕೊಳ್ಳಿ. ನಿಮ್ಮ ಪ್ರೀತಿಪಾತ್ರರ. ವೃತ್ತಿಪರ ರಂಗದಲ್ಲಿ ಜವಾಬ್ದಾರಿ ಹೆಚ್ಚಾಗುವ ಸಾಧ್ಯತೆಯಿದೆ.

### ಕನ್ಯಾ ರಾಶಿ

ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗಗೊಳಿಸುವ ಹೂವಿನ ಹಾಗೆ ಅರಳುತ್ತದೆ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ. ಕುಟುಂಬದ ಬಾಧ್ಯತೆಗಳನ್ನು ಮರೆಯಬೇಡಿ. ಅನಿರೀಕ್ಷಿತ ಪ್ರಣಯ ಭಾವ. ಸಹ ಕಾರ್ಮಿಕರು ಮತ್ತು ಕೈಕೆಳಗೆ ಕೆಲಸ ಮಾಡುವವರು ಚಿಂತೆ ಹಾಗೂ ಒತ್ತಡದ ಕ್ಷಣಗಳನ್ನು ತರುತ್ತಾರೆ.

### ತುಲಾ ರಾಶಿ

ನೀವು ಮನಸ್ಸಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ, ಜಾಣತನ ಮತ್ತು ಸಭ್ಯತೆಯನ್ನು ಬಳಸಬೇಕಾಗುತ್ತದೆ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ, ಪರಿಸ್ಥಿತಿ
ಶೀಘ್ರದಲ್ಲೇ ಸುಧಾರಿಸುತ್ತದೆ. ಕುಟುಂಬದ ಸದಸ್ಯರೊಂದಿಗೆ ಒಂದು ಶಾಂತಿಯುತ ಮತ್ತು ಶಾಂತ ದಿನವನ್ನು ಆನಂದಿಸಿ ಜನರು ಸಮಸ್ಯೆಗಳೊಡನೆ ನಿಮ್ಮನ್ನು ಸಮೀಪಿಸಿದರೆ – ಅವರನ್ನು ನಿರ್ಲಕ್ಷಿಸಿ ಮತ್ತು ನಿಮ್ಮ ಮನಸ್ಸಿನಲ್ಲಿ ಈ ಚಿಂತೆ ಬೇರೂರಲು ಅವಕಾಶ ನೀಡಬೇಡಿ.

### ವೃಶ್ಚಿಕ ರಾಶಿ

ನಿಮ್ಮ ಸಂಜೆ ವಿಭಿನ್ನ ಪ್ರತಿಕ್ರಿಯೆಗಳಿಂದ ಗುರುತಿಸಲ್ಪಡುತ್ತದೆ ಹಾಗೂ ಇದು ನಿಮ್ಮನ್ನು ಉದ್ವಿಗ್ನವಾಗಿರಿಸಬಹುದು. ಆದರೆ ಹೆಚ್ಚು ಚಿಂತಿಸುವ ಅಗತ್ಯವಿಲ್ಲ – ನಿಮ್ಮ ಸಂತೋಷ ನಿಮಗೆ ನಿರಾಸೆಗಿಂತ ಹೆಚ್ಚು ಆನಂದ ನೀಡುತ್ತದೆ. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ ಎಂಬುದನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಿ . ಆದ್ದರಿಂದ ಇಂದು ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ.

### ಧನು ರಾಶಿ

ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ಕೌಟುಂಬಿಕ ಜವಾಬ್ದಾರಿಗಳು ಹೆಚ್ಚಾಗುತ್ತವೆ ಇವು ನಿಮ್ಮ ಮನಸ್ಸಿನ ಮೇಲೆ ಒತ್ತಡ ತರುತ್ತವೆ.

### ಮಕರ ರಾಶಿ

ನಿಮ್ಮ ಹಠಮಾರಿ ಧೋರಣೆ ಕೇವಲ ಸಮಯ ವ್ಯರ್ಥವಾದದ್ದರಿಂದ ಆದನ್ನು ನಿಮ್ಮ ಸಂತೋಷದ ಜೀವನದ ಸಲುವಾಗಿ ತೊರೆದುಬಿಡಿ. ಇಂದು ನೀವು ಅನಗತ್ಯವಾಗಿ ಹಣವನ್ನು ಖರ್ಚು ಮಾಡುವುದನ್ನು ನಿಲ್ಲಿಸಬೇಕು, ಇಲ್ಲದಿದ್ದರೆ ಅಗತ್ಯವಾದ ಸಮಯದಲ್ಲಿ ನಿಮ್ಮ ಹತ್ತಿರ ಹಣದ ಕೊರತೆ ಇರಬಹುದು. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ಯಾರಿಗಾದರೂ ಅವರ ಪ್ರೀತಿ ಯಶಸ್ವಿಯಾಗುವುದನ್ನು ಸ್ವತಃ ದೃಢೀಕರಿಸುವುದು ಸಹಾಯ ಮಾಡಿ.


### ಕುಂಭ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.ಇದರ ಕಾರಣದಿಂದ ನಿಮ್ಮ ವಿಶೇಷ ಹಣ ಖರ್ಚಾಗಬಹುದು.

### ಮೀನ ರಾಶಿ

ನೀವು ಮಾನಸಿಕವಾಗಿ ಅತ್ಯಂತ ದುರ್ಬಲರಾಗಿರುತ್ತೀರಿ – ಆದ್ದರಿಂದ ನೀವು ನೋವಿಗೀಡಾಗಬಹುದಾದ ಸಂದರ್ಭಗಳಿಂದ ದೂರ ಉಳಿಯಿರಿ. ನಿಮ್ಮ ಆರ್ಥಿಕ ಸ್ಥಿತಿ ಸುಧಾರಿಸಿದರೂ ಹಣದ ಹೊರಹರಿವು ನಿಮ್ಮ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ತೊಂದರೆಯುಂಟುಮಾಡುತ್ತದೆ. ಮನೆಯ ಸಮಸ್ಯೆಗಳಿಗೆ ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ.

# ಬೆನಕನಹಳ್ಳಿ ಗ್ರಾ.ಪಂ. ಅಧ್ಯಕ್ಷರಾಗಿ ಡಿ.ಎಸ್. ದೀಪಾರಘು ಅವಿರೋಧವಾಗಿ ಆಯ್ಕೆ



**ಹೊನ್ನಾಳಿ :** ತಾಲೂಕಿನ ಬೆನಕನಹಳ್ಳಿ ಗ್ರಾ.ಪಂ. ಅಧ್ಯಕ್ಷರಾಗಿ ಡಿ.ಎಸ್. ದೀಪಾರಘು ಅವರು ಅವಿರೋಧವಾಗಿ ಆಯ್ಕೆಯಾದರು.

ನಿಕಟಪೂರ್ವ ಅಧ್ಯಕ್ಷರಾಗಿದ್ದ ಎ.ಕೆ. ರೇಷ್ಮಾ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಗುರುವಾರ ಚುನಾವಣೆ ನಡೆಯಿತು ಅಧ್ಯಕ್ಷ ಸ್ಥಾನ ಬಯಸಿ ಡಿ.ಎಸ್. ದೀಪಾ ಅವರು ತಮ್ಮ ಉಮೇದುವಾರಿಕೆ ಸಲ್ಲಿಸಿದ್ದರು. ಇತರೆ ಯಾವುದೇ ನಾಮಪತ್ರಗಳ ಸಲ್ಲಿಕೆಯಾಗದಿದ್ದರಿಂದ ಡಿ.ಎಸ್. ದೀಪಾ ಅವರನ್ನು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಜ್ಯೋತಿ ಅವರು ಘೋಷಣೆ ಮಾಡಿದರು.

ಒಟ್ಟು 15 ಸದಸ್ಯ ಬಲದಲ್ಲಿ 4 ಸದಸ್ಯರು ಗೈರಾಗಿದ್ದರು ಚುನಾವಣಾ ಪ್ರಕ್ರಿಯೆಯಲ್ಲಿ ಗ್ರಾ.ಪಂ. ಸದಸ್ಯರಾದ ಪುಷ್ಪಾಬಾಯಿ, ಕೆ. ಭಾಗ್ಯಮ್ಮ, ಎ.ಕೆ. ಗದ್ದಿಗೇಶ್, ಎಂ. ಸುಧಾ, ಎಚ್.ಜಿ. ರವಿಕುಮಾರ್, ಎಚ್.ಪಿ. ಹಾಲೇಶ್, ಕೆ. ವಸಂತ, ಸಿ. ಶಿವಕುಮಾರ್, ಪಿ. ಕಾವ್ಯ, ಪಿ. ಮಂಜುನಾಥ್ ಹಾಗೂ ಪಿಡಿಒ ಎಂ.ವಿ. ರವಿ, ಕಾರ್ಯದರ್ಶಿ ರಮೇಶನಾಯ್ಕ, ಗ್ರಾಮದ ಮುಖಂಡ ಡಿ.ಜಿ. ರಘು, ವಿಶ್ವಾಸ್ ಹಾಗೂ ಸಿಬ್ಬಂದಿ ವರ್ಗದವರಾದ ಎಸ್.ಕೆ. ವಿಶ್ವನಾಥ್, ಶಂಕರನಾಯ್ಕ ಭಾಗಿಯಾಗಿದ್ದರು.

# ಗಣಪತಿ ಪೆಂಡಾಲ್‌ನಲ್ಲಿ ಅಗ್ನಿ ನಿರೋಧಕ ಜಿಂಕ್‌ಶೀಟ್ ಬಳಸಲು ಸಲಹೆ

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಗಣಪತಿ ಹಬ್ಬದ ಹಿನ್ನೆಲೆಯಲ್ಲಿ ಪೆಂಡಾಲ್ ಚಪ್ಪರವನ್ನು ನಿರ್ಮಿಸುವಾಗ ಅಗ್ನಿ ನಿರೋಧಕ ವಸ್ತುಗಳಾದ ಜಿಂಕ್‌ಶೀಟ್ ಇತ್ಯಾದಿಗಳನ್ನು ಬಳಸಬೇಕು. ಹಾಗೆಯೇ ಅಗ್ನಿ ನಿರೋಧಕ ವಸ್ತುಗಳನ್ನು ಉಪಯೋಗಿಸಿ ಪೆಂಡಾಲ್‌ನ ಒಳ ಅಲಂಕಾರ ಮಾಡಬೇಕು ಎಂದು ಅಗ್ನಿಶಾಮಕ ಇಲಾಖೆ ಸೂಚಿಸಿದೆ.

ಈ ಕುರಿತು ಕೆಲವು ಸಲಹೆಗಳನ್ನು ಇಲಾಖೆ ನೀಡಿದ್ದು, ಪೆಂಡಾಲ್ ನಿರ್ಮಿಸುವಾಗ ಅನುಸರಿಸಲು ಕರ್ನಾಟಕ ರಾಜ್ಯ ಅಗ್ನಿಶಾಮಕ 3 ತುರ್ತು ಸೇವೆಗಳ ಇಲಾಖೆಯಿಂದ ನಿರ್ದಿಷ್ಟವಾಗಿ ಕೆಲವು ನಿರ್ದೇಶನಗಳನ್ನು ನೀಡಲಾಗಿದೆ. ಅದರಂತೆ ಜಿಲ್ಲಾ ವ್ಯಾಪ್ತಿಯಲ್ಲಿ ಯಾವುದೇ ಪ್ರದೇಶದಲ್ಲಿ ಗಣಪತಿ ಪೆಂಡಾಲ್‌ಗಳನ್ನು ನಿರ್ಮಿಸುವಾಗ ಈ ಸಲಹೆಗಳನ್ನು ಕಡ್ಡಾಯವಾಗಿ ಅನುಸರಿಸಲು ತಿಳಿಸಲಾಗಿದೆ.

ಅಗ್ನಿನಂದಕ ಇರಬೇಕು:

ಪ್ರತಿ ಪೆಂಡಾಲಿನ ಸಮೀಪ 9 ಲೀ. ಸಾಮರ್ಥ್ಯದ 2 ವಾಟರ್ ಸಿಒ2 ಅಗ್ನಿನಂದಕ ಮತ್ತು ಡಿಸಿಪಿ ಅಗ್ನಿನಂದಕ ಮತ್ತು ಮರಳು ತುಂಬಿದ ತಲಾ ನಾಲ್ಕು ಬಕೆಟ್‌ಗಳನ್ನು ಇಟ್ಟಿರಬೇಕು ಮತ್ತು ಪೆಂಡಾಲ್ ಹತ್ತಿರ 400 ಲೀ. ಸಾಮರ್ಥ್ಯದ ಡ್ರಮ್‌ನಲ್ಲಿ ನೀರು ತುಂಬಿಟ್ಟಿರಬೇಕು ಎಂದು ಸೂಚಿಸಲಾಗಿದೆ.

ಪೆಂಡಾಲ್ ಒಳಭಾಗದಲ್ಲಿ ಮತ್ತು ಹತ್ತಿರದಲ್ಲಿ ಸಾರ್ವಜನಿಕರು ಧೂಮಪಾನ ಮಾಡದಂತೆ ಎಚ್ಚರ ವಹಿಸಬೇಕು ಮತ್ತು ಧೂಮಪಾನ ನಿಷೇಧಿಸಿದೆ ಎಂಬ ನಾಮಫಲಕವನ್ನು ಸೂಕ್ತ ಸ್ಥಳಗಳಲ್ಲಿ ನೇತು ಹಾಕಿರಬೇಕು. ಪೆಂಡಾಲ್‌ನ ಸುತ್ತ 12 ಅಡಿ ಸುತ್ತಳತೆಯ ಖಾಲಿ ಜಾಗವಿರುವಂತೆ ಪೆಂಡಾಲ್ ನಿರ್ಮಿಸಿರಬೇಕು.

ಪೆಂಡಾಲ್‌ನಲ್ಲಿ ಸ್ಫೋಟಕ ವಸ್ತುಗಳು, ಸಿಡಿ ಮದ್ದು ಇತ್ಯಾದಿ ವಸ್ತುಗಳನ್ನು ಶೇಖರಿಸಬಾರದು ಮತ್ತು ಪೆಂಡಾಲ್‌ನ ಹತ್ತಿರ ಪಟಾಕಿ ಸಿಡಿಸಬಾರದು. ವಿದ್ಯುತ್ ಸಂಪರ್ಕವನ್ನು ನುರಿತ ವಿದ್ಯುತ್ ಕೆಲಸಗಾರರಿಂದ ಮಾಡಿಸಬೇಕು ಮತ್ತು ತೆರೆದ ವೈರ್‌ಗಳನ್ನು ಜೋತು ಹಾಕಬಾರದೆಂದು ಸೂಚಿಸಲಾಗಿದೆ ಮತ್ತು ವಿದ್ಯುತ್ ಸಂಪರ್ಕದ ಹತ್ತಿರ 2 ಕೆಜಿ ಸಾಮರ್ಥ್ಯದ ಸಿಒ2 ಅಗ್ನಿ ನಂದಕವನ್ನು ಇಡುವಂತೆ ಸೂಚಿಸಲಾಗಿದೆ.

ಅಂತಹ ತುರ್ತು ಸಂದರ್ಭದಲ್ಲಿ ಹತ್ತಿರದ ಅಗ್ನಿಶಾಮಕ ಠಾಣೆ ಮತ್ತು ಪೊಲೀಸ್ ಠಾಣೆಗಳ ದೂರವಾಣಿ ಸಂಖ್ಯೆ (101, 08262-295199) ಗಳನ್ನು ದಪ್ಪ ಅಕ್ಷರಗಳಲ್ಲಿ ಫಲಕದಲ್ಲಿ ಬರೆದು ಸೂಕ್ತ ಸ್ಥಳಗಳಲ್ಲಿ ನೇತು ಹಾಕಿರಬೇಕು.

ಈ ಸಲಹೆಗಳನ್ನು ಅಳವಡಿಸಿಕೊಳ್ಳದೆ ಪೆಂಡಾಲ್ ನಿರ್ಮಾಣ ಮಾಡಿಕೊಂಡು ಯಾವುದೇ ರೀತಿಯ ಅನಾಹುತ ಸಂಭವಿಸಿದಲ್ಲಿ ಅರ್ಜಿದಾರರೇ ಸಂಪೂರ್ಣ ಹೊಣೆಗಾರರಾಗುತ್ತಾರೆ. ಅಲ್ಲದೆ ಅವರ ವಿರುದ್ಧ ಕಾನೂನು ರೀತಿಯಲ್ಲಿ ಕ್ರಮ ಕೈಗೊಳ್ಳಬಹುದು ಎಂಬ ಷರತ್ತಿಗೆ ಒಳಪಟ್ಟಿದೆ ಎಂದು ಜಿಲ್ಲಾ ಅಗ್ನಿಶಾಮಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳೆ ಸಮೀಕ್ಷೆ ಯೋಜನೆ-ಜೆಟ್ ಪೈಪ್ ಪಡೆಯಲು ಇ-ಆಡಳಿತ ಮುಖಾಂತರ ರೈತರಿಗೆ ದೂರವಾಣಿ ಕರೆ

**ಶಿವಮೊಗ್ಗ:** ಕೃಷಿ ಇಲಾಖೆ ಶಿವಮೊಗ್ಗ ಹಾಗೂ ಇ-ಆಡಳಿತ ಕರ್ನಾಟಕ ಸರ್ಕಾರ ಇವರ ಸಹಯೋಗದಲ್ಲಿ

ದಿನಾಂಕ: 21-08-2025 ರಂದು ತಾಲ್ಲೂಕಿನ ಸುಮಾರು 8 ಸಾವಿರ ರೈತರೊಂದಿಗೆ ದೂರವಾಣಿ ಕರೆ ಮುಖಾಂತರ 2025-26ನೇ ಸಾಲಿನ ಬೆಳೆ ಸಮೀಕ್ಷೆ ಯೋಜನೆ ಅನುಷ್ಠಾನ ಹಾಗೂ ಸೂಕ್ಷ್ಮ ನೀರಾವರಿ ಯೋಜನೆಯಡಿ ನೀಡಲಾಗುತ್ತಿರುವ ಸೌಲಭ್ಯಗಳ ಕುರಿತು ಕಾರ್ಯಾಗಾರವನ್ನು ನಡೆಸಲಾಯಿತು

ಶಿವಮೊಗ್ಗ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರಾದ ರಮೇಶ್.ಎಸ್.ಟಿ ರವರು ಮಾತನಾಡಿ,

ಬೆಳೆ ಸಮೀಕ್ಷೆ ಯೋಜನೆ ಅನುಷ್ಠಾನ ಕುರಿತು ರೈತರ ಬೆಳೆ ಸಮೀಕ್ಷೆ 2025-26ಕ್ಕೆ ಸರ್ಕಾರವು ರೈತರು ತಮ್ಮ ಜಮೀನಿನಲ್ಲಿ ಬೆಳೆದ ಬೆಳೆಯ ಮಾಹಿತಿಯನ್ನು ಬೆಳೆ ಸಮೀಕ್ಷೆ ತಂತ್ರಾಂಶದ ಮೂಲಕ ತಾವೇ ನೇರವಾಗಿ ಬೆಳೆ ಸಮೀಕ್ಷೆ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ.

ರೈತರು ತಮ್ಮ ಜಮೀನಿನ ಬೆಳೆ ಮಾಹಿತಿಯನ್ನು ರೈತರ ಬೆಳೆ ಸಮೀಕ್ಷೆ ಆಪ್ ( ಈಚಿಡಿಟಜಡಿ ಛಿಡಿ೦ಠಿ, ಣಡಿತಜಥಿ ೦ಠಿಠಿ)ನ್ನು ಗೂಗಲ್ ಪ್ಲೇ ಸ್ಟೋರ್ ನಿಂದ ಡೌನ್‌ಲೋಡ್ ಮಾಡಿಕೊಂಡು ಅಪ್ಲೋಡ್ ಮಾಡಬಹುದು.

ರೈತರಿಗೆ ಅಪ್ಲೋಡ್ ಮಾಡಲು ಸಾಧ್ಯವಾಗದಿದ್ದಲ್ಲಿ ತಾಲ್ಲೂಕು ಆಡಳಿತ



ನೇಮಿಸಿರುವ ಮೊಬೈಲ್ ತಂತ್ರಾಂಶ ಜ್ಞಾನವುಳ್ಳ ಸ್ಥಳೀಯ ಖಾಸಗಿ ನಿವಾಸಿಗಳ ಸಹಾಯದಿಂದ ಬೆಳೆ ವಿವರ ದಾಖಲಿಸಬಹುದು. ಇದರಿಂದ ಪ್ರಕೃತಿ ವಿಕೋಪದಡಿ ಪ್ರವಾಹ ಮತ್ತು ಬರಗಾಲ ಸಂದರ್ಭದಲ್ಲಿ ನೀಡುವ ಬೆಳೆ ನಷ್ಟ ಪರಿಹಾರ ವಿತರಿಸಲು,

ಕನಿಷ್ಟ ಬೆಂಬಲ ಬೆಲೆ ಯೋಜನೆ ಫಲಾನುಭವಿಗಳನ್ನು ಗುರುತಿಸಲು, ಬೆಳೆ ವಿಮಾ ಯೋಜನೆ, ಬೆಳೆ ವಿಸ್ತೀರ್ಣ, ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳ ಫಲಾನುಭವಿ ಆಧಾರಿತ ಯೋಜನೆಗಳನ್ನು ಅನುಷ್ಠಾನಗೊಳಿಸಲು, ಪಹಣಿಯಲ್ಲಿ ಬೆಳೆ ವಿವರ ದಾಖಲಿಸಲು ಅನುಕೂಲವಾಗುವುದು ಎಂದು ತಿಳಿಸಿದರು.

ಸೂಕ್ಷ್ಮ ನೀರಾವರಿ ಯೋಜನೆಯಡಿ ನೀರಾವರಿ ಉಪಕರಣಗಳಾದ ಜೆಟ್ ಪೈಪ್‌ಗಳು/ ಕಪ್ಪು ಪೈಪ್‌ಗಳನ್ನು ಎಲ್ಲಾ ವರ್ಗದ ರೈತರಿಗೆ ಶೇ.90 ಸಹಾಯಧನದಲ್ಲಿ ವಿತರಿಸಲಾಗುವುದು ಹಾಗೂ ಈಗಾಗಲೇ ಸೌಲಭ್ಯ ಪಡೆದ ಫಲಾನುಭವಿಗಳು ಏಳು ವರ್ಷ ಮುಗಿದಿದ್ದರೆ ಮತ್ತೊಮ್ಮೆ ಪಡೆಯಲು ಹಾಗೂ 2.20 ಎಕರೆಗಿಂತ ಹೆಚ್ಚಿನ ಜಮೀನು ಹೊಂದಿರುವ ರೈತರು ಮತ್ತೊಂದು ಘಟಕ ಪಡೆಯಲು ಅವಕಾಶ ಕಲ್ಪಿಸಿದ್ದು, ರೈತರು ಕೇವಲ ಶೇಕಡ 10 ರಷ್ಟು ರೈತರ ವಂತಿಕೆಯನ್ನು ಪಾವತಿ ಮಾಡಿ ಸೌಲಭ್ಯ ಪಡೆಯಬಹುದು.

ಈ ಯೋಜನೆಯಲ್ಲಿ ಪ್ರಸ್ತುತ ಅನುದಾನ ಲಭ್ಯವಿದ್ದು ಎಲ್ಲಾ ರೈತಭಾಂದವರು ತಮ್ಮ ಹತ್ತಿರದ ಕೃಷಿ ಇಲಾಖೆಗೆ ಭೇಟಿ ಮಾಡಿ ಆಧಾರ್, ಪಹಣಿ ಹಾಗೂ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿಯೊಂದಿಗೆ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯಲು ಮನವಿ ಮಾಡಿದರು.

# ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯ ಪ್ರವೇಶ ಅರ್ಜಿಅವಧಿ ವಿಸ್ತರಣೆ

**ಶಿವಮೊಗ್ಗ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2025-26 ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಾತಿ ಪಡೆಯಲು ಆನ್ಲೈನ್ ಅರ್ಜಿ ಅವಧಿಯನ್ನು ಆ.25 ರವರೆಗೆ ವಿಸ್ತರಿಸಲಾಗಿದೆ.

ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕರ ಹಾಗೂ ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1 , 2ಎ, 2ಬಿ, 3ಎ, 3ಬಿ, ಪ.ಜಾ/ಪ. ವರ್ಗಕ್ಕೆ ಸೇರಿದ ಸಾಮಾನ್ಯ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು https://shp.karnataka.gov.in/bcwd ಇಲ್ಲಿ ಅರ್ಜಿ ಸಲ್ಲಿಸಬೇಕು.

ಪ್ರವರ್ಗ-1, ಎಸ್.ಸಿ. ಮತ್ತು ಎಸ್.ಟಿ. ಗೆ ಸೇರಿದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯವು 2.50 ಲಕ್ಷ ಹಾಗೂ ಪ್ರವರ್ಗ -2ಎ, 2ಬಿ, 3ಎ, 3ಬಿ ಗೆ ಸೇರಿದ ಪೋಷಕರ ವಾರ್ಷಿಕ ಆದಾಯವು 1 ಲಕ್ಷದೊಳಗಿರಬೇಕು.

ತಾಲ್ಲೂಕುವಾರು ವಿದ್ಯಾರ್ಥಿ ನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರಿ ಆದೇಶಕ್ಕಾಗಿ ಇಲಾಖೆಯ ವೆಬ್ ಸೈಟ್ https://bcwd.karnataka.gov.in ಗೆ ಭೇಟಿ ನೀಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ದೋಷಗಳು ಉಂಟಾದಲ್ಲಿ ಇಮೇಲ್ ವಿಳಾಸ bcwdhelpline@gmail.com ಮುಖಾಂತರ ಅಥವಾ ಜಿಲ್ಲಾ ಹಾಗೂ ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಹಾಯವಾಣಿ ಸಂಖ್ಯೆ 8050770004, 8050770005 ನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

# ದೈಹಿಕ-ಮಾನಸಿಕ ನ್ಯೂನತೆಗೆ ಉಚಿತ ಥೆರಪಿ

**ಚಿಕ್ಕಮಗಳೂರು:** ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಸೊಸೈಟಿ ಫಾರ್ ಪೀಪಲ್ಸ್ ಇಂಟಿಗ್ರೇಟೆಡ್ ಡೆವಲಪ್ಮೆಂಟ್ ವತಿಯಿಂದ ಅನುಷ್ಠಾನಗೊಂಡಿರುವ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರದಲ್ಲಿ ಫಿಜಿಯೋಥೆರಪಿಸ್ಟ್, ಕ್ಲಿನಿಕಲ್ ಸೈಕಾಲಜಿಸ್ಟ್, ಆಡಿಯೋಲಜಿ ಮತ್ತು ಸ್ಪೀಚ್ ಥೆರಪಿಸ್ಟ್ ಲಭ್ಯವಿದ್ದು, ದೈಹಿಕ ನ್ಯೂನತೆ, ಬುದ್ಧಿಮಾಂದ್ಯತೆ, ಕಲಿಕಾ ನ್ಯೂನತೆ, ಆಟಿಸಂ, ಮಾತು ಸಂವಹನ ಸಂಬಂಧಿಸಿದ ನ್ಯೂನತೆಯಿಂದ ಬಳತ್ತಿರುವವರಿಗೆ ಉಚಿತ ಥೆರಪಿಯನ್ನು ನೀಡಲಾಗುತ್ತಿದೆ. ಅಗತ್ಯವಿರುವವರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಪ್ರಕಟಣೆಯೊಂದರಲ್ಲಿ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗೆ ನಗರದ ತೊಗರಿಹಂಕಲ್ ಸರ್ಕಲ್ ಸಮೀಪ ಪ್ರಭು ಬೀದಿಯಲ್ಲಿರುವ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ (9741898804)ವನ್ನು ಸಂಪರ್ಕಿಸಬಹುದು.

# ಆರ್ಥಿಕ ನೆರವು

**ಚಿಕ್ಕಮಗಳೂರು:** ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ವಿವಿಧ ಯೋಜನೆಗಳಡಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ಸಾಲ ಸೌಲಭ್ಯವನ್ನು ಪಡೆಯಲು ಇಚ್ಛಿಸುವ ಅರ್ಹ ಫಲಾಪೇಕ್ಷಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿ ತಿಳಿಸಿದೆ.2025-26ನೇ ಸಾಲಿನ ವಿವಿಧ ಯೋಜನೆಗಳಿಗೆ ಪರಿಶಿಷ್ಟ ಜಾತಿಯ ಅರ್ಹ ಫಲಾಪೇಕ್ಷಿಗಳಿಗೆ ನಿಗಮಗಳಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಇಂತಿವೆ.ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಬ್ಯಾಂಕ್‌ಗಳ ಸಹಯೋಗದೊಂದಿಗೆ ಹೈನುಗಾರಿಕೆ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ ಹಾಗೂ ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆಯಡಿ ನೆರವು ಲಭ್ಯವಿದೆ. ಅಲ್ಲದೆ, ಮೈಕ್ರೋ ಕ್ರೆಡಿಟ್ (ಪ್ರೇರಣಾ) ಯೋಜನೆ, ಭೂ ಒಡೆತನ ಯೋಜನೆ, ಗಂಗಾ ಕಲ್ಯಾಣ ಯೋಜನೆಯಡಿ ಸೌಲಭ್ಯಗಳನ್ನು ನಿಗಮದಿಂದ ಅನುಷ್ಠಾನಗೊಳಿಸಲಾಗಿದೆ. ಅರ್ಜಿಗಳನ್ನು ಸಲ್ಲಿಸಲು ಸೆಪ್ಟಂಬರ್ 17 ಕೊನೆಯ ದಿನವಾಗಿದೆ.ನಿಗಮದ ವ್ಯಾಪ್ತಿಯಲ್ಲಿರುವ ಸಮುದಾಯಗಳು ವೆಬ್‌ಸೈಟ್ https://sevasindhu.karnataka.gov.in <https://www.google.com/url?q=https://sevasindhu.karnataka.gov.in/&sa=U&ved=2ahUKEwjRs_OR9_qOAxXszqACHZEUFmQQjJEMegQIQhAB&usg=AOvVaw2WjK174b3wFkUxZaf_e1Ht> ನಲ್ಲಿ ಕರ್ನಾಟಕ ಒನ್, ಗ್ರಾಮ ಒನ್ ಮತ್ತು ಬೆಂಗಳೂರು ಒನ್ ಕೇಂದ್ರಗಳಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

# ಸ್ವಯಂಘೋಷಣೆ

**ಹಾಸನ :** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದಯುವನಿಧಿ ಯೋಜನೆಯಲ್ಲಿ ನೋಂದಣಿಯಾದ ಅಭ್ಯರ್ಥಿಗಳು ಕಡ್ಡಾಯವಾಗಿಆಧಾರ ಸೀಡೆಡ್ ಬ್ಯಾಂಕ್‌ಖಾತೆ ಹೊಂದಿರಬೇಕು. ಸೇವಾ ಸಿಂಧೂ ವೆಬ್ ಸೈಟ್ಃಣಣಠಿ://sevasindhugs.karnataka.gov.in ನಲ್ಲಿತಮ್ಮಅರ್ಜಿಯುಯಾವ ಹಂತದಲ್ಲಿದೆಎಂಬುದನ್ನು ಪರಿಶೀಲಿಸಿಕೊಂಡು, ಹಾಗೂ ಪರಿಶೀಲನೆಗೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಮಾತ್ರ ಸೂಚಿಸಲ್ಪಟ್ಟಇಲಾಖೆಯ ಕಚೇರಿಗಳಿಗೆ ತಮ್ಮಎಲ್ಲ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ, ಪರಿಶೀಲಿಸಿ ಶೀಘ್ರವಾಗಿ ದೃಢೀಕರಿಸಿಕೊಳ್ಳುವಂತೆ ಸೂಚಿಸಲಾಗಿದೆ. ಹಾಗೂ ಈಗಾಗಲೇ ನೋಂದಾಯಿಸಿಕೊಂಡು ಹಣ ಪಡೆಯುತ್ತಿರುವ ಫಲಾನುಭವಿಗಳು ಪ್ರತಿ ಮೂರು ತಿಂಗಳಿಗೊಮ್ಮೆ 25ನೇ ದಿನಾಂಕದೊಳಗೆ ಸ್ವಯಂ-ಘೋಷಣೆಯನ್ನು ಮಾಡಿಕೊಳ್ಳಬೇಕಾಗಿರುತ್ತದೆ. ಜೂನ್, ಜುಲೈ, ಆಗಸ್ಟ್ ಮಾಹೆಯ ಸ್ವಯಂ-ಘೋಷಣೆಯನ್ನುಆಗಸ್ಟ್ ತಿಂಗಳಿನ25ನೇ ದಿನಾಂಕದೊಳಗೆ ಸ್ವಯಂ-ಘೋಷಣೆಯನ್ನು ಮಾಡಿಕೊಳ್ಳಬೇಕೆಂದು ಈ ಮೂಲಕ ತಿಳಿಸಲಾಗಿದೆ.

**ಮಾನ್ಯ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ. ರವರ ನ್ಯಾಯಾಲಯ.ಜಗಳೂರು**

**ಸಿ.ಆರ್ ಮಿಸ್ ನಂ:821/2025**

**ಅರ್ಜಿದಾರರು**1) ಜಯಮ್ಮ@ಜಯಬಾಯಿ ಕೋಂ ನಾಗರಾಜನಾಯ್ಕ ವಯಸ್ಸು 55 ವರ್ಷ, ಕೆಲಸ: ಗೃಹಿಣಿ ವಾಸ ಗಾಂಧಿನಗರ, ಜಗಳೂರು ತಾಲ್ಲೂಕು, ಹಾಲಿವಾಸ ಬಸವಾಪುರ ಗ್ರಾಮ, ಬಿಳಿಚೋಡು ಹೋಬಳಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ 2) ಭಾಗ್ಯಮ್ಮ ಕೋಂ ವೆಂಕಟೇಶನಾಯ್ಕ ವಯಸ್ಸು 50 ವರ್ಷ, ಕೆಲಸ: ಗೃಹಿಣಿ ವಾಸ ಭರಮಸಾಗರ ಗ್ರಾಮ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ 3) ಗಜೇಂದ್ರನಾಯ್ಕ ಬಿನ್ ಕೃಷ್ಣನಾಯ್ಕ ವಯಸ್ಸು 35 ವರ್ಷ, ಕೆಲಸ: ಜಿರಾಯಿತಿ ವಾಸ ಗಾಂಧಿನಗರ ಗ್ರಾಮ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ

**ವಿರುದ್ಧ**

**ಎದುರುದಾರರು:** ತಹಶೀಲ್ದಾರರು, ತಾಲ್ಲೂಕು ಕಛೇರಿ, ಜಗಳೂರು ಟೌನ್, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ,

**ಸಾರ್ವಜನಿಕ ನೋಟಿಸ್**

ಮೇಲ್ಕಂಡ ಪ್ರಕರಣವನ್ನು ತಾಯಿಯಾದ ಶಾಂತಮ್ಮ ಕೊಂ ಲೇಟ್ ಕೃಷ್ಣನಾಯ್ಕ ಇವರು ದಿನಾಂಕ: 03.11.2005 ರಂದು ಜಗಳೂರು ತಾಲ್ಲೂಕು, ಗಾಂಧಿನಗರ ಗ್ರಾಮದ ಅರ್ಜಿದಾರರ ಮನೆಯಲ್ಲಿ ಸ್ವಾಭಾವಿಕವಾಗಿ ತೀರಿ ಕೊಂಡಿದ್ದರಿಂದ ಸದರಿ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ:-30-09-2025ರ ಬೆಳಿಗ್ಗೆ 11.00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ, ತಮ್ಮ ಪರ ವಕೀಲರ 'ಮುಖಾಂತರವಾಗಲೀ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ. ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:- 21.08.2025ರಂದು ನೀಡಲಾಗಿದೆ.

**ನ್ಯಾಯಾಲಯದ ಆದೇಶದ ಮೇರೆಗೆ**

**ಸಹಿ/-**
**ಅರ್ಜಿದಾರರ ಪರ ವಕೀಲರು**
**(ಕೆ.ವಿ ರುದ್ರೇಶ್ ವಕೀಲರು)**

**ಸಹಿ/-**
**ಶಿರಸ್ತೇದಾರರು**
ಸಿವಿಲ್ ಜಡ್ಜ್ ಹಾಗೂ
ಜೆ.ಎಂ.ಎಫ್.ಸಿ.
ನ್ಯಾಯಾಲಯ ಜಗಳೂರು

**ಮಾನ್ಯ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ. ರವರ ನ್ಯಾಯಾಲಯ.ಜಗಳೂರು**

**ಸಿ.ಆರ್ ಮಿಸ್ ನಂ:820/2025**

**ಅರ್ಜಿದಾರರು**1) ಜಯಮ್ಮ@ಜಯಬಾಯಿ ಕೋಂ ನಾಗರಾಜನಾಯ್ಕ ವಯಸ್ಸು 55 ವರ್ಷ, ಕೆಲಸ: ಗೃಹಿಣಿ ವಾಸ ಗಾಂಧಿನಗರ, ಜಗಳೂರು ತಾಲ್ಲೂಕು, ಹಾಲಿವಾಸ ಬಸವಾಪುರ ಗ್ರಾಮ, ಬಿಳಿಚೋಡು ಹೋಬಳಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ 2) ಭಾಗ್ಯಮ್ಮ ಕೋಂ ವೆಂಕಟೇಶನಾಯ್ಕ ವಯಸ್ಸು 50 ವರ್ಷ, ಕೆಲಸ: ಗೃಹಿಣಿ ವಾಸ ಭರಮಸಾಗರ ಗ್ರಾಮ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ 3) ಗಜೇಂದ್ರನಾಯ್ಕ ಬಿನ್ ಕೃಷ್ಣನಾಯ್ಕ ವಯಸ್ಸು 35 ವರ್ಷ, ಕೆಲಸ: ಜಿರಾಯಿತಿ ವಾಸ ಗಾಂಧಿನಗರ ಗ್ರಾಮ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ

**ವಿರುದ್ಧ**

**ಎದುರುದಾರರು:** ತಹಶೀಲ್ದಾರರು, ತಾಲ್ಲೂಕು ಕಛೇರಿ, ಜಗಳೂರು ಟೌನ್, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ,

**ಸಾರ್ವಜನಿಕ ನೋಟಿಸ್**

ಮೇಲ್ಕಂಡ ಪ್ರಕರಣವನ್ನು ತಂದೆಯಾದ ಕೃಷ್ಣನಾಯ್ಕ ಬಿನ್ ರಾಮಚಂದ್ರನಾಯ್ಕ ಇವರು ದಿನಾಂಕ: 20.12.2004 ರಂದು ಜಗಳೂರು ತಾಲ್ಲೂಕು, ಗಾಂಧಿನಗರ ಗ್ರಾಮದ ಅರ್ಜಿದಾರರ ಮನೆಯಲ್ಲಿ ಸ್ವಾಭಾವಿಕವಾಗಿ ತೀರಿ ಕೊಂಡಿದ್ದರಿಂದ ಸದರಿ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ, ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ:-30-09-2025ರ ಬೆಳಿಗ್ಗೆ 11.00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ, ತಮ್ಮ ಪರ ವಕೀಲರ 'ಮುಖಾಂತರವಾಗಲೀ, ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ. ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:- 21.08.2025ರಂದು ನೀಡಲಾಗಿದೆ.

**ನ್ಯಾಯಾಲಯದ ಆದೇಶದ ಮೇರೆಗೆ**

**ಸಹಿ/-**
**ಅರ್ಜಿದಾರರ ಪರ ವಕೀಲರು**
**(ಕೆ.ವಿ ರುದ್ರೇಶ್ ವಕೀಲರು)**

**ಸಹಿ/-**
**ಶಿರಸ್ತೇದಾರರು**
ಸಿವಿಲ್ ಜಡ್ಜ್ ಹಾಗೂ
ಜೆ.ಎಂ.ಎಫ್.ಸಿ.
ನ್ಯಾಯಾಲಯ ಜಗಳೂರು

# ಪಿಓಪಿ ಮೂರ್ತಿಗಳಿಗೆ ನಿಷೇಧ: ಗಣೇಶ ಪ್ರತಿಷ್ಠಾಪನೆಗೆ ಅನುಮತಿ ಕಡ್ಡಾಯ

**ಚಿತ್ರದುರ್ಗ:** ಹೊಳಲ್ಕೆರೆ ಪುರಸಭೆ ವ್ಯಾಪ್ತಿಯಲ್ಲಿ ಪಿಓಪಿ ಮತ್ತು ರಾಸಾಯನಿಕ ಬಣ್ಣ ಲೇಪಿತ ಗಣೇಶ ಮೂರ್ತಿಗಳ ತಯಾರಿಕೆ ಹಾಗೂ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಸಂಘ ಸಂಸ್ಥೆಗಳು ಸಾರ್ವಜನಿಕವಾಗಿ ಗಣೇಶ ಪ್ರತಿಷ್ಠಾಪನೆ ಮಾಡಲು ನಗರ ಸಭೆ, ಪೊಲೀಸ್, ಅಗ್ನಿ ಶಾಮಕ ಸೇರಿದಂತೆ ಸಕ್ಷಮ ಪ್ರಾಧಿಕಾರಗಳಿಂದ ಅನುಮತಿ ಪಡೆಯುವುದು ಕಡ್ಡಾಯವಾಗಿದೆ. ಪ್ರತಿಷ್ಠಾಪನೆ ಸ್ಥಳಗಳಲ್ಲಿ ಏಕ ಬಳಕೆಯ ಪ್ಲಾಸ್ಟಿಕ್‌ನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಪ್ರತಿನಿತ್ಯ ಉತ್ಪನ್ನವಾಗುವ ತ್ಯಾಜ್ಯವನ್ನು ಪುರಸಭೆ ಕಸ ಸಂಗ್ರಹ ವಾಹನಕ್ಕೆ ನೀಡಬೇಕು. ಗಣೇಶ ವಿಸರ್ಜನೆಗೆ ತಾಲ್ಲೂಕು ಪಂಚಾಯಿತಿ ಹಿಂಭಾಗದಲ್ಲಿರುವ ಎನ್.ಇ.ಎಸ್. ಕಾಲೋನಿಯಲ್ಲಿ ವ್ಯವಸ್ಥೆ ಕಲ್ಪಿಸಲಾಗಿದೆ. ಪಿ.ಓ.ಪಿ, ರಾಸಾಯನಿಕ ಬಣ್ಣಗಳ ವಿಗ್ರಹ ಮಾರಾಟ ಹಾಗೂ ನಿಗದಿತ ಸ್ಥಳ ಹೊರತು ಪಡಿಸಿ ಗಣೇಶ ವಿಸರ್ಜನೆ ಮಾಡುವುದು ಕಂಡುಬಂದರೆ ದಂಡ ವಿಧಿಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕರು ಪರಿಸರ ಸ್ನೇಹಿ, ಬಣ್ಣ ರಹಿತ, ಮಣ್ಣಿನ ಮೂರ್ತಿಗಳನ್ನು ಪ್ರತಿಷ್ಠಾಪಿಸುವಂತೆ ಹೊಳಲ್ಕೆರೆ ಪುರಸಭೆ ಪ್ರಕಟಣೆ ತಿಳಿಸಿದೆ.

# ವಿವಿಧೆಡೆ ದಾಳಿ: 06 ಬಾಲಕಾರ್ಮಿಕ, ಕಿಶೋರ ಕಾರ್ಮಿಕ ಮಕ್ಕಳ ರಕ್ಷಣೆ

**ಬಳ್ಳಾರಿ:** ನಗರದ ರೂಪನಗುಡಿ ರಸ್ತೆ, ಕೋಲ್ಮಿ ಬಜಾರ್, ಎ.ಪಿ.ಎಂ.ಸಿ, ಮಿಲ್ಲರಪೇಟೆ, ಕಣೆಕಲ್ ಬಸ್ ನಿಲ್ದಾಣ ಮುಂತಾದ ವಿವಿಧ ಸ್ಥಳಗಳಲ್ಲಿನ ಗ್ಯಾರೇಜ್, ಮೆಕ್ಯಾನಿಕ್ ಶಾಪ್, ಬೇಕರಿ ಇತ್ಯಾದಿ ಉದ್ದಿಮೆಗಳ ಮೇಲೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್ ಫೋರ್ಸ್ ಸಮಿತಿಯು ದಾಳಿ ನಡೆಸಿ 04 ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದೆ.

ಮಕ್ಕಳ ಹೇಳಿಕೆಗಳನ್ನು ಸ್ಥಳದಲ್ಲಿ ಪಡೆದುಕೊಂಡು ಎಲ್ಲಾ ಮಕ್ಕಳನ್ನು ಪುನರ್ವಸತಿಗಾಗಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಲಾಗಿದೆ. ಎಲ್ಲಾ ಉದ್ದಿಮೆಗಳ ಮಾಲೀಕರಿಗೆ ಕರಪತ್ರ ಹಾಗೂ ಪೋಸ್ಟರ್‌ಗಳನ್ನು ನೀಡಿ ಜಾಗೃತಿ ಮೂಡಿಸಲಾಯಿತು.

ಜಿಲ್ಲಾಧಿಕಾರಿಯವರ ನಿರ್ದೇಶನದ ಮೇರೆಗೆ ಹಾಗೂ ಪ್ಯಾನ್–ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಹೊಸಮನೆ ಇವರ ಅಧ್ಯಕ್ಷತೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್ ಫೋರ್ಸ್ ಸಮಿತಿ ಸಭೆ ನಡೆಸಿ ಈ ದಾಳಿ ಕೈಗೊಳ್ಳಲಾಗಿದೆ.

ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಕಾರ್ಮಿಕ ನಿರೀಕ್ಷಕರಾದ ರಮೇಶ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್, ಮಕ್ಕಳ ಸಹಾಯವಾಣಿ ಸಿಬ್ಬಂದಿ ಕಾರ್ತಿಕ್, ರೀಚ್ ಸಂಸ್ಥೆಯ ಸಂಯೋಜಕ ಹನುಮಂತಪ್ಪ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಆ.23 ರಂದು ಜಪ್ತಿ ವಾಹನಗಳ ಹರಾಜು

**ಚಿತ್ರದುರ್ಗ:** ಚಿತ್ರದುರ್ಗ ಕೋಟೆ ಪೊಲೀಸ್ ಠಾಣೆ ವತಿಯಿಂದ ವಿವಿಧ ಪ್ರಕರಣಗಳಲ್ಲಿ ವಶಪಡಿಸಿಕೊಂಡಿರುವ ವಾರಸುದಾರರು ಇಲ್ಲದ 11 ಮೋಟಾರು ಬೈಕುಗಳ ಹರಾಜಿಗೆ ಜೆ.ಎಂ.ಎಫ್.ಸಿ ಹಿರಿಯ ಸಿವಿಲ್ ನ್ಯಾಯಾಲಯ ಅನುಮತಿ ನೀಡಿದೆ. ಈ ಹಿನ್ನಲೆಯಲ್ಲಿ ಆಗಸ್ಟ್ 23 ರಂದು ಬೆಳಿಗ್ಗೆ 11 ಗಂಟೆಗೆ ಕೋಟೆ ಪೊಲೀಸ್ ಠಾಣೆ ಆವರಣದಲ್ಲಿ ಹರಾಜು ನಡೆಯಲಿದ್ದು, ಆಸಕ್ತರು ಹರಾಜಿನಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕೋಟೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08194–222933 ಹಾಗೂ ಮೊಬೈಲ್ ಸಂಖ್ಯೆ 9480803145 ಕರೆ ಮಾಡುವಂತೆ ಪ್ರಕಟಣೆ ತಿಳಿಸಿದೆ.

# ಆಗಸ್ಟ್ 20 ರಿಂದ 22 ವರೆಗೆ ಪುಸ್ತಕಗಳ ಪ್ರದರ್ಶನ

**ಚಿತ್ರದುರ್ಗ:** ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯು 2022ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಕೃತಿಗಳನ್ನು ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದೆ. ಆಯ್ಕೆ ಪ್ರಕ್ರಿಯೆಗೆ ಅರ್ಜಿ ಸಲ್ಲಿಸಿದ ಪುಸ್ತಕಗಳು ಹಾಗೂ ಆಯ್ಕೆಗೊಂಡ ಪುಸ್ತಕಗಳ ಪ್ರದರ್ಶನ ಆಗಸ್ಟ್ 20 ರಿಂದ 22 ವರೆಗೆ, ಬೆಂಗಳೂರು ವಿಜಯನಗರದ ಎಂ.ಸಿ.ಬಡಾವಣೆಯ ಶ್ರೀ.ಡಾ.ವಿಷ್ಣುವರ್ಧನ ಸ್ಪರ್ಧಾತ್ಮಕ ಪರೀಕ್ಷೆಗಳ ಅಧ್ಯಯನ ಕೇಂದ್ರ ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲಾ ಹಾಗೂ ನಗರ ಗ್ರಂಥಾಲಯಗಳಲ್ಲಿ ನಡೆಯಲಿದೆ. ಆಯ್ಕೆಯಾದ ಪುಸ್ತಕಗಳ ತಾತ್ಕಾಲಿಕ ಪಟ್ಟಿ ಹಾಗೂ ಆಯ್ಕೆಯಾಗದ ಪುಸ್ತಕಗಳ ಪಟ್ಟಿಯನ್ನು ಸಹ ಸಾರ್ವಜನಿಕ ಗ್ರಂಥಾಲಯ ಇಲಾಖೆ ವೆಬ್‌ಸೈಟ್ ಜಠಿಟ.ಇಚಿಡಿಟಿಚಿಣಚಿಞಚಿ.ರಠತ.ಟಿ ಸೇರಿದಂತೆ ಜಿಲ್ಲಾ ಹಾಗೂ ನಗರ ಗ್ರಂಥಾಲಯ ಕಚೇರಿಗಳಲ್ಲಿ ಪ್ರಕಟಿಸಲಾಗುವುದು. ಆಯ್ಕೆಗಾಗಿ ಅರ್ಜಿ ಸಲ್ಲಿಸದ ಲೇಖ–ಕರು ಹಾಗೂ ಪ್ರಕಾಶಕರು ಆಕ್ಷೇಪಣೆಗಳು ಇದ್ದಲ್ಲಿ, ಸಾರ್ವಜನಿಕ ಗ್ರಂಥಾಲಯ ಇಲಾಖೆ ಆಯುಕ್ತರಿಗೆ ಅಥವಾ ನಗರ ಮತ್ತು ಜಿಲ್ಲಾ ಗ್ರಂಥಾಲಯ ಅಧಿಕಾರಿಗಳಿಗೆ ಆಗಸ್ಟ್ 30 ಸಂಜೆ 5:30ರ ಒಳಗೆ ಸಲ್ಲಿಸುವಂತೆ ಮುಖ್ಯ ಗ್ರಂಥಾಲಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುರ್ಕಿ ಬಳಿ ಭದ್ರಾ ನಾಲೆ ಸೇತುವೆ ಕುಸಿತ : ಶಾಸಕರ ಪರಿಶೀಲನೆ

**ದಾವಣಗೆರೆ:** ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ಕುರ್ಕಿ ಬಳಿ ಹಾದು ಹೋಗಿರುವ ಭದ್ರಾ ಮುಖ್ಯ ನಾಲೆಯ ಸೇತುವೆ ನಿರಂತರವಾಗಿ ಸುರಿದ ಮಳೆಯಿಂದಾಗಿ ಕುಸಿದು ಬಿದ್ದಿರುವ ಘಟನಾ ಸ್ಥಳಕ್ಕೆ ಶನಿವಾರ ಶಾಸಕ ಕೆ.ಎಸ್.ಬಸವಂತಪ್ಪ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಇಂಜಿನಿಯರ್ ಗಳ ಜೊತೆಗೆ ಘಟನಾ ಸ್ಥಳಕ್ಕೆ ಭೇಟಿ ನೀಡಿ, 3.50 ಕೋಟಿ ರೂ. ವೆಚ್ಚದಲ್ಲಿ ಸೇತುವೆ ನಿರ್ಮಾಣಕ್ಕೆ ಈಗಾಗಲೇ ಟೆಂಡರ್ ಕರೆದಿದ್ದು, ಮಳೆಗಾಲ ಮುಗಿಯವರೆಗೆ ತಾತ್ಕಾಲಿಕವಾಗಿ ತುರ್ತು ದುರಸ್ತಿಗೊಳಿಸಿ ನೀರು ಪೋಲಾಗದಂತೆ ತಡೆಯಬೇಕು ಎಂದು ಇಂಜಿನಿಯರ್ ಗೆ ಸೂಚನೆ ನೀಡಿದರು.

ಸುಮಾರು 69 ವರ್ಷಗಳಿಂದ ಈ ಸೇತುವೆ ನಿರ್ಮಾಣ ಮಾಡಲಾಗಿದೆ. ಅಲ್ಲದೇ ಮಾಯ ಕೊಂಡ ಕ್ಷೇತ್ರದ ಭದ್ರಾ ಅಚ್ಚುಕಟ್ಟು ಪ್ರದೇಶದ ವ್ಯಾಪ್ತಿಯಲ್ಲಿ ಅತೀ ಹೆಚ್ಚು ಸೇತುವೆಗಳು, ಕಾಲುವೆ ಗಳು ಶಿಥಿಲಗೊಂಡಿದ್ದು, ಈ ಬಗ್ಗೆ ಹಿಂದಿನ ಅಧಿವೇ ಶನಗಳಲ್ಲಿ ಸೇತುವೆಗಳು, ಕಾಲುವೆಗಳನ್ನು ಹೊಸ ದಾಗಿ ನಿರ್ಮಾಣ ಮಾಡುವಂತೆ ಸಾಕಷ್ಟು ಬಾರಿ ಪ್ರಸ್ತಾಪ ಮಾಡಿ ಸರ್ಕಾರದ ಮೇಲೆ ಒತ್ತಡ ಹಾಕಲಾಗಿತ್ತು. ಮುಖ್ಯಮಂತ್ರಿಗಳು ಮತ್ತು ಜಲಸಂಪನ್ಮೂಲ ಸಚಿವರು ಭದ್ರಾ ಅಚ್ಚುಕಟ್ಟು ಪ್ರದೇಶದಲ್ಲಿ ಶಿಥಿಲಗೊಂಡ ಕಾಲುವೆ, ಸೇತುವೆಗಳನ್ನು ನಿರ್ಮಾಣ ಮಾಡಲು ಕ್ರಮ ತೆಗೆದುಕೊಂಡಿದ್ದು, ಮುಂದಿನ ಬೇಸಿಗೆ ಕಾಲದಲ್ಲಿ ಹಂತ ಹಂತವಾಗಿ ಅಭಿವೃದ್ಧಿಗೊಳಿಸುವುದಾಗಿ ಭರವಸೆ ನೀಡಿದರು.

ಈಗಾಗಲೇ ರೈತರು ಭತ್ತದ ನಾಟಿಯಲ್ಲಿ ತೊಡಗಿದ್ದು, ಈ ಸಂದರ್ಭದಲ್ಲಿ ರೈತರಿಗೆ ನೀರಿನ ತೊಂದರೆ ಆಗಬಾರದು. ಕೂಡಲೇ ಕುಸಿದು ಬಿದ್ದ ಸೇತುವೆಯನ್ನು ತಾತ್ಕಾಲಿಕವಾಗಿ ದುರಸ್ತಿಗೊಳಿಸಿ ರೈತರಿಗೆ ನೆರವಾಗಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿ–ದರು.

ಈ ಸಂದರ್ಭದಲ್ಲಿ ನೀರಾವರಿ ಇಲಾಖೆಯ ಎಇಇ ವಿಕಾಸ್, ನೀರಾವರಿ ಇಲಾಖೆ ಎಂಜಿನಿಯರ್ ಮನೋಜ್, ಪರಮೇಶ್ವರಪ್ಪ, ಮುಖಂಡರಾದ ಗ್ರಾ.ಪಂ. ಸದಸ್ಯ ನಂದೀಶ್, ಕೃಷ್ಣಮೂರ್ತಿ, ನಟ–ರಾಜ್, ಜಿಲ್ಲಾ ಹಿರಿಯ ಕಾಂಗ್ರೆಸ್ ಉಪಾಧ್ಯಕ್ಷ ಡಿ ತಿಪ್ಪಣ್ಣ, ರೈತ ಮುಖಂಡರುಗಳು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಹಾಜರಿದ್ದರು.

# ವಿದ್ಯಾರ್ಥಿಗಳಿಗೆ ಭಾರತ ಸ್ವಾತಂತ್ರ್ಯ ಗಳಿಸಿದ ಇತಿಹಾಸ ಬೋಧಿಸಬೇಕು

**ಚಿತ್ರದುರ್ಗ :** ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಭಾರತ ಸ್ವಾತಂತ್ರ್ಯ ಗಳಿಸಿಕೊಂಡಂತ ಇತಿಹಾಸವನ್ನು ಮನದಟ್ಟಾಗುವಂತೆ ಬೋಧಿಸಬೇಕು, ಅದರಲ್ಲಿ ಬರುವ ಮಹತ್ವದ ತೀರ್ಪುಗಳು, ಹೆಜ್ಜೆಗಳು, ಹೋರಾಟಗಳನ್ನ ಮಕ್ಕಳ ಮನಸ್ಸಿನಲ್ಲಿ ಮೂಡಿಸಿದಾಗ, ಅವರಿಗೂ ಸಹ ದೇಶಾಭಿಮಾನ ಹೆಚ್ಚಾಗಿ, ನಮ್ಮ ಹಿರಿಯರ ಬಗ್ಗೆ ಗೌರವ ಹೊಂದಿ, ಮುಂದೆ ಅವರು ದೇಶವನ್ನು ರಕ್ಷಿಸಿಕೊಳ್ಳುವುದರ ಬಗ್ಗೆ ಹೆಚ್ಚಿನ ಗಮನ ಹರಿಸುತ್ತಾರೆ ಎಂದು ಕರ್ನಾಟಕ ಗಾನವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ಕರೆ ನೀಡಿದರು.

ಅವರು ಚಿತ್ರದುರ್ಗ ನಗರದ ಮಧ್ಯ ಭಾಗದಲ್ಲಿರುವ ಕೆಕೆ ನ್ಯಾಷನಲ್ ಶಾಲೆಯಲ್ಲಿ ಮಕ್ಕಳಿಗೆ ಗಾಂಧೀಜಿ ಮತ್ತು ಪರಿಸರದ ಬಗ್ಗೆ ಪ್ರಾತ್ಯಕ್ಷಿಕೆಗಳನ್ನ ನೀಡುತ್ತಾ ಮಾತನಾಡುತ್ತಿದ್ದರು.

ಮಕ್ಕಳಿಗೆ ಗಾಂಧೀಜಿಯವರ ಚಿಂತನೆಗಳನ್ನ, ಅಹಿಂಸಾ ತತ್ವಗಳನ್ನ, ಸ್ವದೇಶಿ ಚಳುವಳಿಗಳನ್ನ ಪ್ರಾತ್ಯಕ್ಷಿಕೆ ಮುಖಾಂತರ ಬೋಧಿಸಿದಾಗ ಅವರ ಮನಸ್ಸಿನಲ್ಲಿ ಚರಕದ ಬಗ್ಗೆ ಅಭಿಮಾನ ಮೂಡುತ್ತದೆ ಹಾಗೂ ಅದರ ಬಳಕೆಯ ಬಗ್ಗೆಯೂ ಸಹ ಕಾಳಜಿ ವಹಿಸುತ್ತಾರೆ. ಗ್ರಾಮಗಳಲ್ಲಿ ಈಗ ನಶಿಸಿ ಹೋಗುತ್ತಿರುವ ಗ್ರಾಮೀಣ ಉದ್ಯೋಗಗಳಾದ ಮರುಸ್ಥಾಪಿಸಲು ಚರಕ ಅನುಕೂಲಕರ ಎಂದರು.

ಮಕ್ಕಳು ಈಗಿಂದಲೇ ಸಣ್ಣ ಸಣ್ಣ ಗ್ರಾಮೀಣ ಉತ್ಪನ್ನಗಳನ್ನ ಬಳಕೆ ಮಾಡುವುದನ್ನು, ಉತ್ಪಾದಿಸುವುದನ್ನು ನೋಡಿ ಕಲಿತಾಗ, ಬಹಳ ಸುಲಭವಾಗಿ ಮುಂದೆ ಅವರು ದೊಡ್ಡ ಪ್ರಮಾಣದಲ್ಲಿ ಅವುಗಳನ್ನು ಉತ್ಪಾದನೆ ಮಾಡಿ, ತಮ್ಮ ಜೀವನವನ್ನು ನಿರ್ವಹಿಸಿಕೊಳ್ಳಲು ಕಲಿಯುತ್ತಾರೆ ಹಾಗಾಗಿ ಚರಕ ಅವರಿಗೆ ಸಣ್ಣ ವಯಸ್ಸಿನಲ್ಲಿ ದೊರೆಯುವಂತಾಗಬೇಕು. ಶಾಲಾ ಕಾಲೇಜುಗಳಲ್ಲಿ ಚರಕದಿಂದ ಉತ್ಪಾದನೆ ಮಾಡುವ ತರಬೇತಿ ನೀಡಬೇಕು ಎಂದರು.



ಶಾಲಾ ಕಾಲೇಜುಗಳಲ್ಲಿ ಪಠ್ಯೇತರ ಚಟುವಟಿಕೆಗಳಿಗೆ ಸಮಯವಿಲ್ಲದಷ್ಟು ನಾವು ಪಠ್ಯಪುಸ್ತಕಗಳನ್ನು ಓದಿಸುತ್ತಿದ್ದು, ಅದರಿಂದ ಮಕ್ಕಳಲ್ಲಿ ಸೃಜನಾತ್ಮಕ ಶಕ್ತಿಯನ್ನು ಕಳೆದುಕೊಳ್ಳುವ ಸಂಭವವಿರುತ್ತದೆ, ಮಗುವಿಗೆ ಶಿಕ್ಷಣವೆಂದರೆ ಬರಿ ತಲೆಗೆಷ್ಟೇ ನೀಡುವುದಲ್ಲ ಅವರ ಕೈಕಾಲುಗಳಿಗೂ ಸಹ ನೀಡಬೇಕಾಗುತ್ತದೆ. ಅದರಿಂದ ಗಾಂಧೀಜಿ ಅವರು ಕೈಕಾಲುಗಳಿಗೆ ಶಿಕ್ಷಣ ನೀಡುವಂತಹ ನಹಿ ತಾಲಿಂ ಎಂಬ ಹೊಸ ನೀತಿಯನ್ನ ಅನುಷ್ಠಾನಗೊಳಿಸಲು ಪ್ರಯತ್ನಿಸಿದ್ದರು. ಅದನ್ನು ಈಗಲೂ ಸಹ ನಾವು ಪ್ರಯತ್ನ ಪಟ್ಟರೆ ಶಾಲೆಗಳಲ್ಲಿ ಅನುಷ್ಠಾನಗೊಳಿಸಿ, ಮಕ್ಕಳಿಗೆ ಕೈ ಕಾಲುಗಳನ್ನ ಬಳಸಿ, ಉತ್ತಮ ಶಿಕ್ಷಣ ಪಡೆಯುವುದರ ಬಗ್ಗೆ ಮನವರಿಕೆ ಮಾಡಿಕೊಡಬಹುದು ಎಂದರು.

ರಾಷ್ಟ್ರದ ನಿರ್ಮಾಣದಲ್ಲೂ ಸಹ ಗ್ರಾಮೀಣ ಚಿಂತನೆ ಇದೆ, ರಾಷ್ಟ್ರ ಧ್ವಜದ ಮಧ್ಯೆ ಚರಕವನ್ನು ಇಟ್ಟು ಗಾಂಧೀಜಿಯವರು ಅಂದೆ ಗ್ರಾಮೀಣ ಅಭಿವೃದ್ಧಿಗೆ ಆದ್ಯತೆಯನ್ನು ನೀಡಿದ್ದರು, ಆದರೆ ನಾವು ಸ್ವಾತಂತ್ರ್ಯ ಬಂದ ನಂತರ ಬದಲಾವಣೆ ಮಾಡಿಕೊಂಡು, ಚರಕದ ಬದಲು ನಾವು ಅಶೋಕ ಚಕ್ರವನ್ನು ಇಟ್ಟುಕೊಂಡಿದ್ದೇವೆ, ಅಶೋಕ ಚಕ್ರಕ್ಕಿಂತಲೂ ಚರಕ ಬಹಳ ಜನರ ಆತ್ಮೀಯವಾಗಿತ್ತು ಎಂದು ಅವರು ತಿಳಿಸಿದರು

ಇದನ್ನು ನಾವು ಮತ್ತೆ ಮನವರಿಕೆ ಮಾಡಿಕೊಂಡು ಶಾಲೆಗಳಲ್ಲಿ ಉಚಿತವಾಗಿ ಮಗುವಿಗೊಂದು ಚರಕವನ್ನು ವಿತರಣೆ ಮಾಡಿ ಮನೆಮನೆಗಳಲ್ಲೂ ಸಹ ಚರಕದ ಆಂದೋಲನವನ್ನು ಮಾಡಬಹುದಾಗಿದೆ ಎಂದು ಪ್ರತ್ಯಕ್ಷ ಮುಖಾಂತರ ತಿಳಿಸಿಕೊಟ್ಟರು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಕರಾದ ಕಾರ್ತಿಕ್ ಶ್ರೀಮತಿ ಸಂಧ್ಯಾ, ಆಡಳಿತ ಮಂಡಳಿಯವರು ಹಾಗೂ ಸಂದೀಪ್ ಉಪಸ್ಥಿತರಿದ್ದರು.

# ಬಾಲ್ಯ ವಿವಾಹ ದುಷ್ಪರಿಣಾಮ ಕುರಿತು ಬೀದಿ ನಾಟಪ ಪ್ರದರ್ಶನ

**ಚಿತ್ರದುರ್ಗ :** ಚಿತ್ರದುರ್ಗ ನಗರದ ಮಾರುತಿ ನಗರ ಆರೋಗ್ಯ ಕೇಂದ್ರ ವ್ಯಾಪ್ತಿಯ ಭೋವಿ ಕಾಲೋನಿಯಲ್ಲಿ ಶನಿವಾರ ಬಾಲ್ಯವಿವಾಹ ತಡೆ ಹಾಗೂ ದುಷ್ಪರಿಣಾಮಗಳ ಕುರಿತು ಬೀದಿ ನಾಟಕ ಪ್ರದರ್ಶನ ನಡೆಯಿತು.



ಬಾಲ್ಯ ವಿವಾಹ ತಡೆ ಕುರಿತು ಕರಪತ್ರಗಳು ಮತ್ತು ಪೋಸ್ಟರ್ ಪ್ರದರ್ಶನದ ಮುಖಾಂತರ "ನಿಲ್ಲಿಸಿ ನಿಲ್ಲಿಸಿ ಬಾಲ್ಯ ವಿವಾಹ ನಿಲ್ಲಿಸಿ" ಎಂಬ ಘೋಷಣೆಗಳನ್ನು ಹಾಕುತ್ತಾ ಬಾಲ್ಯ ವಿವಾಹದಿಂದ ಆಗುವ ದುಷ್ಪರಿಣಾಮಗಳ ಕುರಿತು ಕಲಾನಿಧಿ ಜಾನಪದ ಕಲಾತಂಡದಿಂದ ಸಾರ್ವಜನಿಕರಿಗೆ ಜಾಗೃತಿ ಮೂಡಿಸದರು.

ತಾಯಿ ಮರಣ ಮತ್ತು ಶಿಶು ಮರಣ ತಡೆಯಲು ಬಾಲ್ಯ ವಿವಾಹಕ್ಕೆ ಮೊದಲು ಕಡಿವಾಣ ಹಾಕಬೇಕು ಎಂದು ಬಾಲ್ಯ ವಿವಾಹದ ದುಷ್ಪರಿಣಾಗಳ ಕುರಿತು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣ ನಾಯಕ್ ಜಾಗೃತಿ ಮೂಡಿಸಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ ಒಂದೆಡೆಯಾದ–ರೆ, ಬಾಲ್ಯ ವಿವಾಹ ಮಾಡಿ ನಮ್ಮ ಮನೆಯ ಮಗಳನ್ನು ಸಾವಿನಾಚೆಗೆ ತಳ್ಳಬಾರದು. "ಆರೋಗ್ಯವಂತ ಮಗು ದೇಶದ ಸಂಪತ್ತು" ಆರೋಗ್ಯವಂತ ಮಕ್ಕಳು ಜನಿಸಬೇಕಾದರೆ ತಾಯಿಯ ಆರೋಗ್ಯ ಬಹು ಮುಖ್ಯ. "ತಾಯಿಯಂತೆ ಮಗಳು ನೂಲಿನಂತೆ ಸೀರೆ" ದೇಹದಾಢ್ಯತೆ ಇಲ್ಲದ ಅಂಗಾಂಗ ಬೆಳವಣಿಗೆಗಳಾಗದ ಬಾಲಕಿಯರಿಗೆ ಮದುವೆ ಮಾಡಿ ಸಮಸ್ಯೆಗೆ ಸಿಲುಕಬೇಡಿರಿ ಎಂದರು.

ಕಾರ್ಯಕ್ರಮದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳಾದ ರೂಪ, ಲಕ್ಕಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿ ಸುಪ್ರೀತಾ, ಜಬ್ಬರ್ ಸಾಹೇಬ್, ತಾಯಂದಿರು ಮತ್ತು ಮಕ್ಕಳು ಸೇರಿದಂತೆ ಸಾರ್ವಜನಿಕರು ಹಾಜರಿದ್ದರು.

## 'ಅಕ್ರಮ ನಿರ್ಮಾಣಕ್ಕೆ ಕಡಿವಾಣ

# ವಾಸಯೋಗ್ಯ ಪ್ರಮಾಣ ಪತ್ರವಿಲ್ಲದ 4 ಲಕ್ಷ ಕಟ್ಟಡಗಳಿಗೆ ನೀರು, ವಿದ್ಯುತ್ ಸಂಪರ್ಕಕ್ಕೆ ತಡೆ'

**ಬೆಂಗಳೂರು:** ಅವೈಜ್ಞಾನಿಕವಾಗಿ ನಿರ್ಮಾಣ ಮಾಡಿರುವ ಹಾಗೂ ದುರ್ಬಲಗೊಂಡಿರುವ ಕಟ್ಟಡಗಳನ್ನು ಮೊದಲು ಭದ್ರಗೊಳಿಸುವ ಕೆಲಸವಾಗಬೇಕು. ಇಂತಹ ಕಟ್ಟಡಗಳನ್ನು ಗುರುತಿಸಿ ನೋಟಿಸ್ ನೀಡುವಂತೆ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.



ಧರ್ಮರಾಯಸ್ವಾಮಿ ದೇವಾಲಯದ ಬಳಿಯ ನಗರ್ತಪೇಟೆಯಲ್ಲಿ ಬೆಂಕಿ ಅವಘಡದಿಂದ ಹಾನಿಗೊಳಗಾದ ಸ್ಥಳಕ್ಕೆ ಡಿಸಿಎಂ ಶಿವಕುಮಾರ್ ಅವರು ಭಾನುವಾರ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದರು. ನಂತರ ಮಾತನಾಡಿದ ಅವರು, ಎರಡು, ಮೂರು ಮಹಡಿಗಳನ್ನು ಕಟ್ಟುವ ಕಡೆಗಳಲ್ಲಿ ಎಂಟತ್ತು ಮಹಡಿಗಳನ್ನು ನಿರ್ಮಾಣ ಮಾಡಲಾಗಿದೆ. ಹಲವಾರು ಕಟ್ಟಡಗಳು ವಾಸಕ್ಕೆ ಯೋಗ್ಯವಿಲ್ಲದಂತಾಗಿವೆ.

ಇಂತಹ ಕಟ್ಟಡಗಳನ್ನು ಹೊಡೆದು ಹಾಕುವುದು ನಂತರದ ವಿಚಾರ. ಇದರ ಬಗ್ಗೆ ಮೊದಲು ಸಮೀಕ್ಷೆ ನಡೆಸಲಾಗುವುದು. ಇದು ಒಂದೇ ದಿನಕ್ಕೆ ಮುಗಿಯುವ ಕೆಲಸವಲ್ಲ. ವರ್ಷಗಟ್ಟಲೆ ಹಿಡಿಯುತ್ತದೆ. ದೆಹಲಿ, ಮುಂಬೈನಲ್ಲೂ ಇದೇ ಪರಿಸ್ಥಿತಿ ಎದುರಾಗಿದೆ. ಒಳಗೆ ಬಂದು ನೋಡಿದಾಗ ನನಗೆ ಗಾಬರಿಯಾಯಿತು. ಇಂತಹ ಇಕ್ಕಟ್ಟಿನ ಜಾಗದಲ್ಲಿ ಬೆಂಕಿ ಅವಘಡ ನಡೆದರೆ ಜನ ಓಡಿ ಹೋಗುತ್ತಾರೆ, ಆಗ ಕಾಲ್ತುಳಿತ ಉಂಟಾಗಿಯೇ ಜನ ಸಾಯುತ್ತಾ–ರೆ" ಎಂದರು.

ನಿರ್ಲಕ್ಷ್ಯ ವಹಿಸಿರುವ ಕಟ್ಟಡ ಮಾಲೀಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗಿದೆ. ಅವಘಡ ನಡೆದ ಕಟ್ಟಡದ ಮಾಲೀಕರನ್ನೂ ಸಹ ಬಂಧಿಸಲಾಗಿದೆ. ಸೂಕ್ತ ಕಾನೂನು ಕ್ರಮ ಜರುಗಿಸಲು ಪೊಲೀಸರಿಗೆ ಮುಕ್ತ ಅವಕಾಶ ನೀಡಲಾಗಿದೆ. ಅವಘಡದಲ್ಲಿ ಮೃತಪಟ್ಟ ಪ್ರತಿ ವ್ಯಕ್ತಿಗಳ ಕುಟುಂಬಸ್ಥರಿಗೆ ರೂ. 5 ಲಕ್ಷ ಪರಿಹಾರ ನೀಡಲು ಸರ್ಕಾರ ತೀರ್ಮಾನಿಸಿದೆ ಎಂದು ತಿಳಿಸಿದರು.

ಕೂಡಲೇ ದುರ್ಬಲ ಕಟ್ಟಡಗಳನ್ನು ಕೆಡವಲು ಹೋಗುವುದಿಲ್ಲ. ಮಾಲೀಕರು ಕೂಡಲೇ ದುರಸ್ಥಿಗೆ ಒಳಪಡಿಸಬೇಕು. ಇಲ್ಲದಿದ್ದರೆ ಕ್ರಮ ತೆಗೆದುಕೊಳ್ಳುತ್ತೇವೆ.

# ಗೋಡಂಬಿ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ಬೇಸಾಯ ಕ್ರಮ: ಆ.19ರಂದು ತರಬೇತಿ ಕಾರ್ಯಾಗಾರ

**ಚಿತ್ರದುರ್ಗ :** ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಆಗಸ್ಟ್ 19ರಂದು ಬೆಳಿಗ್ಗೆ 10ಕ್ಕೆ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಜಿಲ್ಲೆಯ ರೈತರಿಗೆ ಗೋಡಂಬಿ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ಬೇಸಾಯ ಕ್ರಮಗಳ ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಇರುವಕ್ಕಿಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ, ವಿಜ್ಞಾನಿಗಳಾದ ಡಾ. ಸದಾಶಿವ ನಡುಕೇರಿ ಇವರು ಗೋಡಂಬಿ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ಬೇಸಾಯ ಕ್ರಮಗಳ ಕುರಿತು ಮಾಹಿತಿ ನೀಡುವರು. ನಂತರ ಹಿರಿಯೂರು ತಾಲ್ಲೂಕಿನ ಹರಿಯಬ್ಬೆ ಗ್ರಾಮದ ಪ್ರಗತಿಪರ ರೈತರು ಹಾಗೂ ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಾದ ಬಿ.ಎಸ್.ರಘುನಾಥ, ಚಳ್ಳಕೆರೆ ತಾಲ್ಲೂಕಿನ ಮೀರಸಾಬಿಹಳ್ಳಿ ಗ್ರಾಮದ ಪ್ರಗತಿಪರ ರೈತರಾದ ದಯಣ್ಣ ಬಿ.ಕೆ ಮತ್ತು ಚಿಕ್ಕಚೆಲ್ಲೂರು ಗ್ರಾಮದ ಪ್ರಗತಿಪರ ಕೃಷಿಕರಾದ ಎನ್.ತಿಪ್ಪೇಸ್ವಾಮಿ ಅವರು ರೈತರಿಗೆ ಗೋಡಂಬಿ ಬೆಳೆಯಲ್ಲಿ ಯಶಸ್ವಿಯಾಗಿ ಹೆಚ್ಚಿನ ಇಳುವರಿ ಪಡೆಯಲು ತಾವು ಅನುಸರಿಸಿದ ಕ್ರಮಗಳ ಕುರಿತು ಅನುಭವವನ್ನು ಹಂಚಿಕೊಳ್ಳುವರು. ಆದ ಪ್ರಯುಕ್ತ, ಆಸಕ್ತ 50 ಜನ ರೈತಭಾಂದವರು ಈ ತರಬೇತಿಯಲ್ಲಿ ಭಾಗವಹಿಸಲು ಮೊಬೈಲ್ ಸಂಖ್ಯೆ 8277931058 ಗೆ ಕರೆಮಾಡಿ ನೋಂದಣಿ ಮಾಡಿಕೊಂಡು ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು. ಮೊದಲು ನೋಂದಾವಣಿ ಮಾಡಿಕೊಂಡ 50ಜನ ರೈತ ಭಾಂದವರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಹಾಗೂ ತರಬೇತಿಗೆ ಹಾಜರಾಗುವ ರೈತಬಾಂಧವರು. ಕಡ್ಡಾಯವಾಗಿ ತಮ್ಮ ಎಫ್‌ಐಡಿ ಕಾರ್ಡ್ ಅಥವಾ ಚುನಾವಣೆ ಗುರುತಿನ ಚೀಟಿ ತರಬೇಕು ಎಂದು ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ ತಿಳಿಸಿದ್ದಾರೆ.

# ಜವಾಹರ್ ನವೋದಯ ವಿದ್ಯಾಲಯ: 6ನೇ ತರಗತಿ ಪ್ರವೇಶಾತಿಗೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಚಿತ್ರದುರ್ಗ:** ಹಿರಿಯೂರು ತಾಲ್ಲೂಕಿನ ಉಡುವಳ್ಳಿ ಗ್ರಾಮದ ಜವಾಹರ್ ನವೋದಯ ವಿದ್ಯಾಲಯದಲ್ಲಿ ಪ್ರಶಕ್ತ ಸಾಲಿಗೆ 6ನೇ ತರಗತಿಯ ಪ್ರವೇಶಾತಿಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಇದೇ ಆಗಸ್ಟ್ 27 ಕೊನೆಯ ದಿನವಾಗಿದೆ.

ಜವಾಹರ್ ನವೋದಯ ವಿದ್ಯಾಲಯದ ಆಡಳಿತಾತ್ಮಕ ಕಾರಣಗಳಿಂದ 6ನೇ ತರಗತಿ ಪ್ರವೇಶಾತಿಗೆ ಅರ್ಜಿ ಸಲ್ಲಿಸಲು ಆಗಸ್ಟ್ 27ರ ಅವಧಿವರೆಗೆ ವಿಸ್ತರಿಸಿದ್ದು,

ಅರ್ಹ ಅಭ್ಯರ್ಥಿಗಳು ಅರ್ಜಿಗಳನ್ನು ಉಚಿತವಾಗಿ ನವೋದಯ ವಿದ್ಯಾಲಯ ಸಮಿತಿಯ ವೆಬ್‌ಸೈಟ್ https://cbseitms.rcil.gov.in./nvs/index/registration ನಲ್ಲಿ ಸಲ್ಲಿಸಬಹುದು

# ವಿಧಾನಸೌಧ ಅಗೆಯಲು ಸಾಧ್ಯವೇ?: ವಿಶ್ವನಾಥ್

## ಹಾಸನದಲ್ಲಿ ಧರ್ಮಸ್ಥಳ ಚಲೋಗೆ ಸ್ವಾಗತ

**ಹಾಸನ:** ಶ್ರೀಕ್ಷೇತ್ರ ಧರ್ಮಸ್ಥಳ ವಿರುದ್ಧ ಷಡ್ಯಂತ್ರ ನಡೆಯುತ್ತಿದ್ದು, ವಿಧಾನಸೌಧ ಕಟ್ಟುವ ಸಂದರ್ಭದಲ್ಲಿ ಯಾರನ್ನೋ ಕೊಲೆ ಮಾಡಿ ಸ್ಪೀಕರ್ ಕೂರುವ ಜಾಗದ ಕೆಳಗೆ ಹೂತಿದ್ದೇನೆ ಎಂದು ಹೇಳಿದರೆ ಅಲ್ಲೂ ಉತ್ಖನನ ಮಾಡಲು ಸಾಧ್ಯವೇ ಎಂದು ಯಲಹಂಕ ಶಾಸಕ ಎಸ್.ಆರ್.ವಿಶ್ವನಾಥ್ ಪ್ರಶ್ನಿಸಿದರು.



ಶ್ರೀಕ್ಷೇತ್ರ ಧರ್ಮಸ್ಥಳದ ವಿರುದ್ಧ ಅಪಪ್ರಚಾರ ವಿರೋಧಿಸಿ ಬಿಜೆಪಿ ಕಾರ್ಯಕರ್ತರು ಹಮ್ಮಿಕೊಂಡಿರುವ ಧರ್ಮಸ್ಥಳ ಚಲೋ ಅಭಿಯಾನ ಬೃಹತ್ ರ್‍ಯಾಲಿಗೆ ಹಾಸನಕ್ಕೆ ಆಗಮಿಸಿದ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದರು.

ಅನಾಮಿಕ ಹೇಳಿದ ಮಾತನೆಲ್ಲ ಕೇಳಿದರೆ ಇಡೀ ಧರ್ಮಸ್ಥಳವನ್ನೇ ಅಗೆಯಬೇಕು. ಅದಕ್ಕೂ ಮೊದಲು ಅನಾಮಿಕನನ್ನು ಮಂಪರು ಪರೀಕ್ಷೆ ಮಾಡಲಿ. ಅವನು ಸುಳ್ಳು ಹೇಳಿದ್ದರೆ ಕ್ರಮ ಆಗಬೇಕು," ಎಂದು ಆಗ್ರಹಿಸಿದರು.

ಸೌಜನ್ಯ ಕೇಸ್ ತನಿಖೆಗೆ ನಮ್ಮ ಅಡ್ಡಿಯಿಲ್ಲ, ನಾವು ಸ್ವಾಗತಿಸುತ್ತೇವೆ. ಆದರೆ ಧರ್ಮಸ್ಥಳದ ಬುಡಕ್ಕೆ ಕೈ ಹಾಕುವ ಕೆಲಸವನ್ನು ವಿಚಾರವಾದಿಗಳು ಮತ್ತು ಧರ್ಮ ವಿರೋಧಿಗಳು ಮಾಡುತ್ತಿದ್ದಾರೆ. ಇದು ರಾಜ್ಯ ಮತ್ತು ದೇಶದ ಕೋಟ್ಯಾನುಕೋಟಿ ಭಕ್ತರ ಭಾವನೆಗೆ ಧಕ್ಕೆ ತರುವ ಕೃತ್ಯವಾಗಿದೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಟಿಬಿ ಡ್ಯಾಂ ಅಲರ್ಟ್: ಒಳಹರಿವು ಏರಿಕೆ, 80 ಸಾವಿರ ಕ್ಯುಸೆಕ್ ನೀರು ನದಿಗೆ

**ವಿಜಯನಗರ (ಹೊಸಪೇಟೆ):** ತುಂಗಭದ್ರಾ ಜಲಾನಯನ ಪ್ರದೇಶದಲ್ಲಿ ಭಾರೀ ಮಳೆ ಸುರಿಯುತ್ತಿರುವುದು ಮತ್ತು ತುಂಗಾ ಮತ್ತು ಭದ್ರಾ ಜಲಾಶಯ ಹಾಗೂ ವರದಾ ನದಿಯಿಂದ ಹೆಚ್ಚಿನ ನೀರು ಹರಿದು ಬರುತ್ತಿರುವುದರಿಂದ ಮಧ್ಯಾಹ್ನ 12 ಗಂಟೆ ನಂತರ 60 ರಿಂದ 80 ಸಾವಿರ ಕ್ಯುಸೆಕ್ ನೀರು ನದಿಗೆ ಹರಿಸಲಾಗುವುದು ಎಂದು ತುಂಗಭದ್ರ ಮಂಡಳಿ ಅಲರ್ಟ್ ಸಂದೇಶ ನೀಡಿದೆ.

ಕಲ್ಯಾಣ ಕರ್ನಾಟಕದ ರೈತರ ಜೀವನಾಡಿ ತುಂಗಭದ್ರಾ ಜಲಾಶಯಕ್ಕೆ ಕಳೆದ ಕೆಲ ದಿನಗಳಿಂದ ಹೆಚ್ಚಿನ ಒಳಹರಿವು ಹರಿದು ಬರುತ್ತಿದ್ದು, ಭಾನುವಾರ ಬೆಳಗ್ಗೆ 8 ಗಂಟೆಗೆ 42 ಸಾವಿರ ಕ್ಯುಸೆಕ್ ಒಳಹರಿವಿದ್ದು, ಇದು 80 ಸಾವಿರ ಕ್ಯುಸೆಕ್ ವರೆಗೆ ಏರಿಕೆಯಾಗಲಿದೆ.

ತುಂಗಾ ಜಲಾಶಯದಿಂದ 34 ಸಾವಿರ, ಭದ್ರಾ ಜಲಾಶಯದಿಂದ 24 ಸಾವಿರ ಹಾಗೂ ವರದಾ ನದಿಯಿಂದ 10 ಸಾವಿರ ಕ್ಯುಸೆಕ್ ನೀರು ಹರಿದು ಬರುತ್ತಿದೆ. ಇದರ ಜತೆಗೆ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆ ಸುರಿಯುತ್ತಿರುವುದರಿಂದ ಒಳಹರಿವಿನ ಪ್ರಮಾಣದಲ್ಲಿ ಗಣನೀಯ ಏರಿಕೆಯಾಗುತ್ತಿದೆ.

ಈ ಕಾರಣಕ್ಕೆ ಜಲಾಶಯದ ಸುರಕ್ಷತೆ ದೃಷ್ಟಿಯಿಂದ ಹೆಚ್ಚುವರಿ ನೀರನ್ನು ನದಿಗೆ ಹರಿಸಲು ನಿರ್ಧರಿಸಲಾಗಿದ್ದು, ಮುಂದೆ ಒಳಹರಿವಿನ ಪ್ರಮಾಣವನ್ನು ಆಧರಿಸಿ ನದಿಗೆ ನೀರು ಹರಿಸಲಾಗುತ್ತದೆ. ಈ ಕುರಿತು ನದಿ ಪಾತ್ರ ಮತ್ತು ಕೆಳಭಾಗದ ಗ್ರಾಮಗಳಲ್ಲಿ ಎಚ್ಚರಿಕೆ ವಹಿಸುವಂತೆ ಟಿಬಿ ಬೋರ್ಡ್ ಎಚ್ಚರಿಕೆ ನೀಡಿದೆ.

**ಬಾಗಿದ 7 ಕ್ರಸ್ಟ್‌ಗೇಟ್‌ಗಳು, ತಪ್ಪದ ಗೋಳು:** ತುಂಗಭದ್ರಾ ಜಲಾಶಯದ 19ನೇ ಕ್ರಸ್ಟ್‌ಗೇಟ್ ಕೊಚ್ಚಿಹೋಗಿ ವರ್ಷಾಚರಣೆಯ ಸಂದರ್ಭದಲ್ಲಿ ಮತ್ತೊಂದು ಭಾರಿ ಆಘಾತ ಎದುರಾಗಿದೆ. ಜಲಾಶಯದ 11, 18, 20, 24, 27 ಮತ್ತು 28ನೇ ಕ್ರಸ್ಟ್‌ಗೇಟ್‌ಗಳಲ್ಲಿ ದೋಷ ಕಾಣಿಸಿಕೊಂಡು ಬಾಗಿರುವುದು ಅಚ್ಚುಕಟ್ಟು ವ್ಯಾಪ್ತಿಯ ಸಹಸ್ರಾರು ರೈತರಲ್ಲಿ ತಳಮಳ ಸೃಷ್ಟಿಸಿದೆ.

ಈ ಆರು ಕ್ರಸ್ಟ್‌ಗೇಟ್‌ಗಳ ಮೂಲಕ ಜಲಾಶಯದಿಂದ ನೀರು ಹರಿಸುವುದನ್ನು ಸ್ಥಗಿತಗೊಳಿಸಲಾಗಿದೆ. ನೀರು ಹರಿಸಲು ಪ್ರಯತ್ನಿಸಿದರೆ ಗೇಟ್ ತುಂಡಾಗುವ ಅಪಾಯ ಎದುರಾಗುವ ಆತಂಕವಿದೆ. 4ನೇ ಕ್ರಸ್ಟ್‌ಗೇಟ್‌ನಲ್ಲೂ ಇಂಥದೇ ಸಮಸ್ಯೆ ಕಾಣಿಸಿಕೊಂಡಿದ್ದು, ಗರಿಷ್ಠ



ಎರಡು ಅಡಿ ಮಾತ್ರ ಗೇಟ್ ಎತ್ತಿ ನೀರು ಹರಿಸಲು ಸಾಧ್ಯವಿದೆ.

ಒಟ್ಟು 105.788 ಟಿಎಂಸಿ ಅಡಿ ಸಂಗ್ರಹ ಸಾಮರ್ಥ್ಯದ ಜಲಾಶಯದಲ್ಲಿ ಕ್ರಸ್ಟ್‌ಗೇಟ್‌ಗಳ ನಿರಂತರ ಸಮಸ್ಯೆಯಿಂದ ಪ್ರಸಕ್ತ ಮುಂಗಾರಿನಿಂದ 30 ಟಿಎಂಸಿ ಅಡಿ ನೀರು ಮಾತ್ರ ಸಂಗ್ರಹಿಸಲಾಗಿದೆ. ಜುಲೈನಿಂದ ನೀರು ಹರಿಸಲು ಆರಂಭವಾಗಿದ್ದು, ಅಂದಾಜು 130 ಟಿಎಂಸಿ ಅಡಿ ನೀರು ನದಿ ಪಾಲಾಗಿದೆ. 2024, ಆ.10ರ ರಾತ್ರಿ 19ನೇ ಕ್ರಸ್ಟ್‌ಗೇಟ್ ಕೊಚ್ಚಿಕೊಂಡು ಹೋದಾಗ ಭೇಟಿ ನೀಡಿದ್ದ ಜಲಾಶಯದ ಸುರಕ್ಷತಾ ತಜ್ಞರು, ಎಲ್ಲ ಕ್ರಸ್ಟ್‌ಗೇಟ್‌ಗಳನ್ನು ಬದಲಿಸಬೇಕಿದೆ ಎಂದು ವರದಿ ನೀಡಿದ್ದರು. ಜಲಾಶಯಕ್ಕೆ 28 ಸಾವಿರ ಕ್ಯೂಸೆಕ್ ಒಳಹರಿವು ಇದ್ದು, ಅಷ್ಟೇ ಪ್ರಮಾಣದಲ್ಲಿ ನೀರನ್ನು ಹೊರಬಿಡಲಾಗುತ್ತಿದೆ.

**19ನೇ ಕ್ರಸ್ಟ್‌ಗೇಟ್‌ನಲ್ಲಿ ಸೋರಿಕೆ:** ಗಟ್ಟಿಯಾಗಿರುವ ಹಳೆಯ ಕ್ರಸ್ಟ್‌ಗೇಟ್‌ಗಳಲ್ಲಿ ಎಲ್ಲಿಯೂ ಸೋರಿಕೆಯಾಗುತ್ತಿಲ್ಲ. ಆದರೆ, ಒಂದು ವರ್ಷದ ಹಿಂದೆ ತಾತ್ಕಾಲಿಕವಾಗಿ ಅಳವಡಿಸಿರುವ ಸ್ಟಾಪ್‌ಲಾಗ್ ಗೇಟ್ ಹಲವು ದಿನಗಳಿಂದ ನೀರು ಸೋರಿಕೆಯಾಗುತ್ತಿದೆ. "ನೀರಿನ ವೇಗ ಮತ್ತು ಅಲೆಗಳ ಪ್ರಮಾಣ ವ್ಯಾಪಕವಾಗಿರುವ ಕಾರಣ ಸ್ಟಾಪ್‌ಲಾಗ್ ಗೇಟ್ ಪೂರ್ಣವಾಗಿ ಮುಚ್ಚಲು ಆಗಿಲ್ಲ. ನೀರು ಸೋರಿಕೆ ಸಂಪೂರ್ಣ ನಿಲ್ಲಿಸುತ್ತೇವೆ," ಎಂದು ತುಂಗಭದ್ರಾ ಮಂಡಳಿಯ ತಾಂತ್ರಿಕ ಅಧಿಕಾರಿಗಳು ತಿಳಿಸಿದ್ದಾರೆ.

ನೀರಿನ ಮಟ್ಟ ವೇಗವಾಗಿ ಏರಿದ ಬೆನ್ನಲ್ಲೇ ಕ್ರಸ್ಟ್‌ಗೇಟ್‌ಗಳನ್ನು ತೆರೆಯಲಾಗದ ಸಮಸ್ಯೆ ಎದುರಾದರೆ ಜಲಾಶಯದ ಮೇಲ್ಮಟ್ಟಕ್ಕೆ ಒತ್ತಡ ಉಂಟಾಗಲಿದೆ. ಈ ವೇಳೆ ಹೆಚ್ಚುವರಿ ನೀರು ಹೊರಹರಿದು ಸುತ್ತಲಿನ ಜನವಸತಿ ಪ್ರದೇಶಗಳಿಗೆ ಅಪಾಯ ಉಂಟುಮಾಡುವ ಸಾಧ್ಯತೆಗಳಿವೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. 70ಕ್ಕೂ ಅಧಿಕ ವರ್ಷಗಳಷ್ಟು ಹಳೆಯದಾದ 33 ಗೇಟ್‌ಗಳನ್ನು ಸಕಾಲಕ್ಕೆ ಬದಲಿಸದೇ, ತಜ್ಞರ ಶಿಫಾರಸು ಜಾರಿಗೆ ತರುವಲ್ಲಿ ವಿಳಂಬ ನೀತಿ ಅನುಸರಿಸಿದ ಪರಿಣಾಮ ಜಲಾಶಯದ ಸುರಕ್ಷತೆಗೆ ದೊಡ್ಡ ಆತಂಕ ಎದುರಾಗಿದೆ.

ಜಲಾಶಯದ ಕ್ರಸ್ಟ್‌ಗೇಟ್‌ಗಳ ಪೈಕಿ ಆರು ಗೇಟ್‌ಗಳು ಸ್ಥಗಿತಗೊಂಡಿವೆ. ಒಂದು ವೇಳೆ ಹೆಚ್ಚಿನ ಪ್ರಮಾಣದಲ್ಲಿ ಒಳಹರಿವು ಬಂದರೂ ನದಿಗೆ ಹರಿಸಲು ಯಾವುದೇ ಸಮಸ್ಯೆ ಇಲ್ಲ. ಎರಡು ವಾರಗಳ ಹಿಂದಷ್ಟೇ 1.30 ಲಕ್ಷ ಕ್ಯುಸೆಕ್‌ವರೆಗೆ ನೀರನ್ನು ನದಿಗೆ ಹರಿಸಲಾಗಿತ್ತು ಎಂದಿದ್ದಾರೆ ರಾಘವೇಂದ್ರ ಎಸ್‌ಇ, ತುಂಗಭದ್ರಾ ಮಂಡಳಿ, ಮುನಿರಾಬಾದ್.

## ರಾಜ್ಯ ಪ್ರಶಸ್ತಿಗೆ ಅರ್ಜಿ

**ಚಿತ್ರದುರ್ಗ :** ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 15 ಅರ್ಜಿ ಸಲ್ಲಿಸಲು ಕೊನೆಯ ದಿನ

ವಿಶ್ವ ವಿಕಲಚೇತನರ ದಿನಾಚರಣೆಯನ್ನು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ವತಿಯಿಂದ 2025ರ ಡಿಸೆಂಬರ್ 03 ರಂದು ಬೆಂಗಳೂರಿನಲ್ಲಿ ಆಚರಿಸಲಾಗುತ್ತಿದೆ. ಇದರ ಅಂಗವಾಗಿ ವಿಕಲಚೇತನರ ಕ್ಷೇತ್ರದಲ್ಲಿ ಗಣನೀಯ ಸೇವೆ ಮಾಡಿದ ಸಂಸ್ಥೆಗಳಿಗೆ, ವಿಶೇಷ ಶಿಕ್ಷಕರಿಗೆ ಮತ್ತು ವೈಯಕ್ತಿಕ ಪ್ರಶಸ್ತಿಗಳನ್ನು ರಾಜ್ಯ ಮಟ್ಟದಲ್ಲಿ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿನ ಸಮಿತಿಯಲ್ಲಿ ಆಯ್ಕೆ ಮಾಡಿ ವಿಶ್ವ ವಿಕಲಚೇತನ ದಿನಾಚರಣೆಯಂದು ಪ್ರದಾನ ಮಾಡಲಾಗುವುದು.

ಚಿತ್ರದುರ್ಗ ಜಿಲ್ಲೆಯಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರವ ವಿಶೇಷ ಶಿಕ್ಷಕರ ವಿಭಾಗ, ವೈಯಕ್ತಿಕ ವಿಭಾಗ, ಮತ್ತು ಸಂಸ್ಥೆಗಳ ವಿಭಾಗದಲ್ಲಿ ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿರುತ್ತದೆ. ಜಿಲ್ಲಾ ಕಛೇರಿಯಿಂದ ಅರ್ಜಿ ನಮೂನೆಗಳನ್ನು ಪಡೆದು ದಿನಾಂಕ:15-10-2025 ರೊಳಗಾಗಿ ಪೂರ್ಣ ವಿವರವನ್ನು ಕನ್ನಡದಲ್ಲಿಯೇ ಭರ್ತಿ ಮಾಡಿ, ಭರ್ತಿ ಮಾಡಿದ ಅರ್ಜಿ ನಮೂನೆ ಹಾಗೂ ಪ್ರಸ್ತಾವನೆಯನ್ನು ದ್ವಿ-ಪ್ರತಿಯಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಸ್ಟೇಡಿಯಂ ಹತ್ತಿರ, ಬಾಲಭವನ ಆವರಣ, ಚಿತ್ರದುರ್ಗ ಕಛೇರಿಗೆ ಸಲ್ಲಿಸುವುದು.

ತಡವಾಗಿ ಬಂದಂತಹ ಪ್ರಸ್ತಾವನೆಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಸ್ಟೇಡಿಯಂ ಹತ್ತಿರ, ಬಾಲಭವನ ಆವರಣ, ಚಿತ್ರದುರ್ಗ ಕಛೇರಿ ದೂರವಾಣಿ ಸಂಖ್ಯೆ 08194-235284 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

## ಮಳೆ ವರದಿ : ಚಿತ್ರದುರ್ಗ ಜಿಲ್ಲೆಯಲ್ಲಿ 31 ಮಿ.ಮೀ ಮಳೆ

**ಚಿತ್ರದುರ್ಗ:** ಮಂಗಳವಾರ ರಾತ್ರಿ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 31 ಮಿ.ಮೀ ಮಳೆಯಗಿದೆ.

ಚಳ್ಳಕೆರೆ ತಾಲ್ಲೂಕಿನಲ್ಲಿ 17 ಮಿ.ಮೀ, ಚಿತ್ರದುರ್ಗ ತಾಲ್ಲೂಕು 16.5 ಮಿ.ಮೀ, ಹಿರಿಯೂರು ತಾಲ್ಲೂಕು 36.4 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 44.6 ಮಿ.ಮೀ, ಹೊಸದುರ್ಗ ತಾಲ್ಲೂಕು 51.5 ಮಿ.ಮೀ ಹಾಗೂ ಮೊಳಕಾಲ್ಮೂರು ತಾಲ್ಲೂಕಿನಲ್ಲಿ 21.1 ಮಿ.ಮೀ. ಮಳೆಯಾಗಿದೆ.

ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 20.6 ಮಿ.ಮೀ, ನಾಯಕನಹಟ್ಟಿ 20.9 ಮಿ.ಮೀ, ಪರಶುರಾಂಪುರ 18.2 ಮಿ.ಮೀ, ತಳಕು 9.6 ಮಿ.ಮೀ, ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 24.3 ಮಿ.ಮೀ, ಭರಮಸಾಗರ 6.8 ಮಿ.ಮೀ, ಹಿರೇಗುಂಟನೂರು 8.4 ಮಿ.ಮೀ, ತುರುವನೂರು 19.4 ಮಿ.ಮೀ, ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 71.8 ಮಿ.ಮೀ,. ಐಮಂಗಳ 48.8 ಮಿ.ಮೀ, ಧರ್ಮಪುರ 13.6 ಮಿ.ಮೀ, ಜವನಗೊಂಡನಹಳ್ಳಿ 20.5 ಮಿ.ಮೀ ಮಳೆಯಾಗಿದೆ.

# 'ಲಿಂಗಾಯತ' ಎಂದೇ ದಾಖಲಿಸಿ

## ಬಸವ ಸಂಸ್ಕೃತಿ ಅಭಿಯಾನ ಪೂರ್ವಭಾವಿ ಸಭೆಯಲ್ಲಿ ಪಂಡಿತಾರಾಧ್ಯ ಶ್ರೀ



**ದಾವಣಗೆರೆ:** ಜನಗಣತಿ ಸಂದರ್ಭದಲ್ಲಿ ಧರ್ಮದ ಕಾಲಂನಲ್ಲಿ 'ಲಿಂಗಾಯತ' ಎಂದೂ, ಜಾತಿಯ ಕಾಲಂನಲ್ಲಿ ಅವರವರ ಉಪ ಜಾತಿಗಳನ್ನು ದಾಖಲಿಸಬೇಕೆಂದು ಸಾಣೇಹಳ್ಳಿ ಡಾ.ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಕರೆ ನೀಡಿದರು.

ನಗರದ ಶಿವಯೋಗಿ ಮಂದಿರದ ಸಭಾಂಗಣದಲ್ಲಿ ನಡೆದ ಬಸವ ಸಂಸ್ಕೃತಿ ಅಭಿಯಾನ 6ನೇ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ವೀರಶೈವ-ಲಿಂಗಾಯತ ಅಥವಾ ಲಿಂಗಾ ಯತ ಎಂದು ಬರೆಸಬೇಕೆ ಎಂಬ ಗೊಂದಲಗಳಿದ್ದು, ಸರಿಯಾದ ನಿರ್ಣಯದೊಂದಿಗೆ ಗೊಂದಲಗಳ ನಿವಾರಣೆ ಮಾಡಿಕೊಂಡು, ಸಮುದಾಯಕ್ಕೆ ಸರಿಯಾದ ಮಾಹಿತಿ ನೀಡಬೇಕಾಗಿದೆ ಎಂದರು.

ಪಂಚಪೀಠಾಧೀಶ್ವರರಿಗೂ ಆಹ್ವಾನ: ಬೆಂಗಳೂರಿನ ಅರಮನೆ ಮೈದಾನದಲ್ಲಿ ಅ.1 ರಂದು ನಡೆಯುವ 'ಬಸವ ಸಂಸ್ಕೃತಿ ಅಭಿಯಾನ'ದ ಸಮಾರೋಪ ಸಮಾರಂಭಕ್ಕೆ ಬರಲು ಒಪ್ಪಿದರೆ ಪಂಚಪೀಠಾಧೀಶ್ವರರಿಗೂ ಆಹ್ವಾನ ನೀಡುತ್ತೇವೆ ಮತ್ತು ನಾವೇ ಮುಕ್ತವಾಗಿ ಸ್ವಾಗತಿಸುತ್ತೇವೆ. ಎಲ್ಲಾ ಮಠಾಧೀಶರು ಒಂದಾಗಿ ಸಮಾಜಕ್ಕೆ ಒಳಿತು ಮಾಡಬೇಕಾಗಿದೆ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಪಂಚಪೀಠಗಳ ಸ್ವಾಮೀಜಿಗಳಲ್ಲಿ ಉತ್ಸವದ ಉತ್ಸಾಹ ಕಡಿಮೆಯಾಗಿ ವೈಚಾರಿಕ, ವೈಜ್ಞಾನಿಕ ಮನೋಭಾವನೆ ಹೆಚ್ಚಿನ ಮಟ್ಟದಲ್ಲಿ ಮೂಡಿದೆ. ಯಾರ ಬಗ್ಗೆಯೂ ನಮ್ಮ ವಿರೋಧವಿಲ್ಲ. ಸೋತು ಹೋದಲ್ಲಿ ಗೆಲುವು ಸಾಧ್ಯವಿದೆ ಎಂದು ಅಭಿಪ್ರಾಯಪಟ್ಟರು.

ಬಸವ ಪರಂಪರೆ ಪುರಾಣ ಪರಂಪರೆಯಲ್ಲ. ಅದು ಐತಿಹಾಸಿಕ ಪರಂಪರೆಯಾಗಿದೆ. ವಚನಗಳ ಬಗ್ಗೆ ಜಾಗೃತಿ ಮೂಡಿಸಬೇಕಾಗಿದೆ. ತತ್ವಗಳೇ ಮುಖ್ಯ ಹೊರತು, ವ್ಯಕ್ತಿ ಮುಖ್ಯವಲ್ಲ. ಸಮಾಜದಲ್ಲಿ ಸಮಾನತೆ ಕಾಪಾಡುವ ಹೊಣೆಗಾರಿಕೆ ಇದೆ. ಅಭಿಯಾನದ ಮೂಲಕ ಹೊಸ ಸ್ವರೂಪ ಕೊಡಲಾಗುವುದು. ಎಲ್ಲರೂ ಬಸವ ತತ್ವಗಳನ್ನು ಮೈಗೂಡಿಸಿಕೊಳ್ಳಬೇಕಾಗಿದೆ ಎಂದು ಹಿತ ನುಡಿದರು.

ಸೆ.1 ರಿಂದ ಅ.1 ವರೆಗೆ 'ಬಸವ ಸಂಸ್ಕೃತಿ ಅಭಿಯಾನ': ಕರ್ನಾಟಕದ ಪ್ರತಿ ಜಿಲ್ಲೆಯಲ್ಲೂ ಸೆ. 1 ರಿಂದ ಅ. 1 ರವರೆಗೆ ವಿಶಿಷ್ಟ, ವಿನೂತನವಾದ 'ಬಸವ ಸಂಸ್ಕೃತಿ ಅಭಿಯಾನ' ಹಮ್ಮಿಕೊಳ್ಳಲಾಗಿದೆ ಎಂದು ಸಾಣೇಹಳ್ಳಿ ಡಾ.ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಸೆ. 1 ರಂದು ಬಸವನ ಬಾಗೇವಾಡಿಯಿಂದ ಅಭಿಯಾನಕ್ಕೆ ಚಾಲನೆ ದೊರೆಯಲಿದ್ದು, ಕ್ರಮವಾಗಿ ಕಲ್ಬುರ್ಗಿ, ಬೀದರ್, ಯಾದಗಿರಿ, ರಾಯಚೂರು, ಬಳ್ಳಾರಿ, ವಿಜಯನಗರ, ಕೊಪ್ಪಳ, ಗದಗ, ಬಾಗಲಕೋಟೆ, ಬೆಳಗಾವಿ, ಧಾರವಾಡ, ಕಾರವಾರ, ಹಾವೇರಿ, ದಾವಣಗೆರೆ, ಚಿತ್ರದುರ್ಗ, ಶಿವಮೊಗ್ಗ, ಉಡುಪಿ, ಮಂಗಳೂರು, ಚಿಕ್ಕಮಗಳೂರು, ಹಾಸನ, ಕೊಡಗು, ಮೈಸೂರು, ಚಾಮರಾಜನಗರ, ಮಂಡ್ಯ, ರಾಮನಗರ, ತುಮಕೂರು, ಚಿಕ್ಕಮಗಳೂರು, ಕೋಲಾರ, ಬೆಂಗಳೂರು ಗ್ರಾಮಾಂತರ, ನಂತರ ಅ.1 ರಂದು ಬೆಂಗಳೂರು ನಗರದ ಅರಮನೆ ಮೈದಾನದಲ್ಲಿ 'ಬಸವ ಸಂಸ್ಕೃತಿ ಅಭಿಯಾನ' ಸಮಾರೋಪಗೊಳ್ಳಲಿದೆ ಎಂದರು.

ಅಭಿಯಾನ ಕಾರ್ಯಕ್ರಮದಲ್ಲಿ ಬೆಳಿಗ್ಗೆ 11 ಕ್ಕೆ ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರ ಜೊತೆ ವಚನ ಸಂವಾದ, ಸಂಜೆ 4.30 ರಿಂದ 6 ರವರೆಗೆ ಆಯಾ ನಗರಗಳ ಪ್ರಮುಖ ಬೀದಿಗಳಲ್ಲಿ ಪಾದಯಾತ್ರೆ, ಸಂಜೆ 6 ಕ್ಕೆ ಸಾರ್ವಜನಿಕ ಸಮಾರಂಭ ಏರ್ಪಡಾಗಿರುತ್ತದೆ. ವಚನ ಸಂಗೀತ (20 ನಿಮಿಷ), ಒಬ್ಬ ಸ್ವಾಮೀಜಿ, ಒಬ್ಬ ಉಪನ್ಯಾಸಕರ ನುಡಿಗಳು, ಸಾನ್ನಿಧ್ಯ ವಹಿಸಿದವರಿಂದ ಆಶೀರ್ವಚನ (ತಲಾ 20 ನಿಮಿಷ), ರಾತ್ರಿ 8.30 ಕ್ಕೆ 'ಜಂಗಮದೆಡೆಗೆ' ನಾಟಕ ಪ್ರದರ್ಶನ, ಪ್ರಸಾದ ವ್ಯವಸ್ಥೆ ಮಾಡಲಾಗುವುದು. ಕಾರ್ಯಕ್ರಮದಲ್ಲಿ ಹೂವಿನ ಹಾರ, ಶಾಲು ಹಾಕುವ ಬದಲು ಪುಸ್ತಕ, ಟವೆಲ್, ವಿಭೂತಿ, ಹಣ್ಣುಗಳನ್ನು ಅತಿಥಿಗಳಿಗೆ ನೀಡಲಾಗುವುದು ಎಂದು ಹೇಳಿದರು.

ಆಯಾ ಜಿಲ್ಲೆಗಳಲ್ಲಿ ' ಬಸವ ಸಂಸ್ಕೃತಿ ಅಭಿಯಾನ'ದಲ್ಲಿ ಜಾನಪದ ಕಲಾ ತಂಡಗಳು, ವಿದ್ಯಾರ್ಥಿಗಳು, ಬಸವ ಭಕ್ತರು ಪಾಲ್ಗೊಳ್ಳುವಂತೆ ನೋಡಿಕೊಳ್ಳುವುದು ಆಯೋಜಕರ ಜವಾಬ್ದಾರಿಯಾಗಿದೆ ಎಂದರು.

ಸಮ ಸಮಾಜ ನಿರ್ಮಾಣ, ವ್ಯಸನಮುಕ್ತ ಸಮಾಜ ನಿರ್ಮಾಣ, ಅಂಧಶ್ರದ್ಧೆ ಅಳಿಸಿ, ಸುಜ್ಞಾನ ಬೆಳೆಸುವುದು, ಸದೃಢ ಸಮಾಜ ಕಟ್ಟುವುದು, ಮಕ್ಕಳಲ್ಲಿ ಆಧ್ಯಾತ್ಮದ ಅರಿವು ಮೂಡಿಸುವುದು, ಮಹಿಳೆಯರ ಘನತೆ ಕಾಪಾಡುವುದು, ವ್ಯಕ್ತಿತ್ವ ವಿಕಸನ ಇತ್ಯಾದಿಗಳು ಅಭಿಯಾನದ ಆಶಯಗಳಾಗಿವೆ ಎಂದು ತಿಳಿಸಿದರು.

ಬಸವ ಸಂಸ್ಕೃತಿ ಅಭಿಯಾನದ ಅಂಗವಾಗಿ ನಡೆಯುವ ಪಾದಯಾತ್ರೆಯಲ್ಲಿ ಧ್ವಜಗಳನ್ನು ಹಿಡಿದು, ವಚನಗಳ ಕಟ್ಟುಗಳನ್ನು ತಲೆ ಮೇಲೆ ಹೊತ್ತು ಮೆರವಣಿಗೆಯಲ್ಲಿ ಸಾಗುವುದು. ಫ್ಲೆಕ್ಸ್, ಬ್ಯಾನರ್‌ಗಳಲ್ಲಿ ಭಾವಚಿತ್ರಗಳ ಬದಲು ಆಯ್ದ ವಚನಗಳು ಇರುವಂತೆ ನೋಡಿಕೊಳ್ಳುವುದು. ಬಸವ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಇರುವಂತೆ ನೋಡಿಕೊಳ್ಳಬೇಕೆಂದು ಸಲಹೆ ನೀಡಿದರು.

ಈಗಾಗಲೇ ಎಲ್ಲಾ ಜಿಲ್ಲೆಗಳಲ್ಲೂ ಬಸವ ಸಂಸ್ಕೃತಿ ಅಭಿಯಾನದ ಸಿದ್ಧತೆಗಳು ಭರದಿಂದ ಸಾಗಿದ್ದು, ಆಯಾ ಜಿಲ್ಲೆಗಳ ರಾಜಕಾರಣಿಗಳು, ಉದ್ಯಮಿಗಳು, ಬಸವ ಭಕ್ತರಿಂದ ದೇಣಿಗೆ ಸಂಗ್ರಹಿಸಿ ಕಾರ್ಯಕ್ರಮ ಆಯೋಜನೆ ಮಾಡಲಾಗುತ್ತದೆ. ಹೆಚ್ಚಾಗಿ ಆಯಾ ಜಿಲ್ಲೆಗಳ ಮಠಾಧೀಶರು ಕಾರ್ಯಕ್ರಮದ ನಿರ್ವಹಣೆ ಜವಾಬ್ದಾರಿಯನ್ನು ವಹಿಸಿಕೊಂಡಿದ್ದಾರೆ ಎಂದರು.

ಕರ್ನಾಟಕ ಸರ್ಕಾರ 'ಸಾಂಸ್ಕೃತಿಕ ನಾಯಕ ಬಸವಣ್ಣ' ಎಂದು ಘೋಷಣೆ ಮಾಡಿ ಒಂದು ವರ್ಷವಾಗಿದೆ. ಆದರೆ ಸರ್ಕಾರವಾಗಲಿ, ಯಾವುದೇ ಸಂಘ-ಸಂಸ್ಥೆಗಳಾಗಲೀ ಇದಕ್ಕೆ ಪೂರಕವಾದ ಕಾರ್ಯಕ್ರಮಗಳನ್ನು ಮಾಡಿಲ್ಲವೆಂದು ಅಸಮಾಧಾನ ವ್ಯಕ್ತಪಡಿಸಿದರು.

ಸಾಂಸ್ಕೃತಿಕ ನಾಯಕ ಬಸವಣ್ಣನವರ ವಚನ ಸಂವಿಧಾನದ ಆಶಯಗಳನ್ನು ಜನರ ಮನೆ, ಮನಗಳಿಗೆ, ವಿದ್ಯಾರ್ಥಿ ಸಮೂಹಕ್ಕೆ ತಲುಪಿಸುವ ಸದಾಶಯವನ್ನು ಈ ಅಭಿಯಾನ ಹೊಂದಿದೆ ಎಂದರು.

ಅಕ್ಟೋಬರ್ 1 ರಂದು ಬೆಂಗಳೂರು ಅರಮನೆ ಮೈದಾನದಲ್ಲಿ ನಡೆಯುವ 'ಬಸವ ಸಂಸ್ಕೃತಿ ಅಭಿಯಾನ'ದ ಸಮಾರೋಪ ಸಮಾರಂಭದಲ್ಲಿ ಜಾಗತಿಕ ಲಿಂಗಾಯತ ಮಹಾಸಭಾ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್, ರಾಷ್ಟ್ರೀಯ ಬಸವ ದಳ, ಬಸವ ಸಮಿತಿ, ಬಸವ ಕೇಂದ್ರ, ಕದಳಿ ಮಹಿಳಾ ವೇದಿಕೆ, ಬಸವ ಪರ ಸಂಘಟನೆಗಳು, ಬಸವ ತತ್ವ ಪ್ರೇಮಿಗಳು, ಕನ್ನಡ ಸಾಹಿತ್ಯ ಪರಿಷತ್, ಪ್ರಗತಿ ಪರರು, ಸಾರ್ವಜನಿಕರು ಭಾಗವಹಿಸಲಿದ್ದಾರೆಂದು ಮಾಹಿತಿ ನೀಡಿದರು.

ಪಾಂಡೋಮಟ್ಟಿ ವಿರಕ್ತಮಠದ ಡಾ. ಗುರು ಬಸವ ಸ್ವಾಮೀಜಿ, ದಾವಣಗೆರೆ ವಿರಕ್ತಮಠದ ಡಾ. ಬಸವ ಪ್ರಭು ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಅಖಿಲ ಭಾರತ ವೀರಶೈವ ಮಹಾಸಭಾದ ರಾಷ್ಟ್ರೀಯ ಉಪಾಧ್ಯಕ್ಷ ಅಣಬೇರು ರಾಜಣ್ಣ, ಡಾ. ಅಥಣಿ ಎಸ್.ವೀರಣ್ಣ, ವಿವಿಧ ಸಂಘಟನೆಗಳ ಮುಖಂಡರಾದ ಎಂ. ಶಿವಕುಮಾರ್, ಐಗೂರು ಚಂದ್ರಶೇಖರ್, ಎಂ. ಜಯಕುಮಾರ್, ದೇವರಮನಿ ಶಿವಕುಮಾರ್, ಕುಸುಮಾ ಲೋಕೇಶ್, ಡಾ. ಹೆಚ್.ಎಸ್.ಮಂಜುನಾಥ್ ಕುರ್ಕಿ, ಮಂದಾಕಿನಿ, ಆವರಗೆರೆ ರುದ್ರಮುನಿ, ಹೆಚ್.ಕೆ.ಲಿಂಗರಾಜ್, ಕೆ.ಬಿ. ಪರಮೇಶ್ವರಪ್ಪ, ಸೋಗಿ ಶಾಂತಕುಮಾರ್, ಹುಚ್ಚಪ್ಪ ಮಾಸ್ತರ್, ಸಾಲಿಗ್ರಾಮ ಗಣೇಶ ಶೆಣೈ, ಅನಿಸ್ ಬಾಷಾ, ಶಶಿಧರ ಬಸಾಪುರ, ಮಲ್ಲಿಕಾರ್ಜುನಪ್ಪ, ಎ.ಪರಮೇಶ್ವರಪ್ಪ ಸಿರಿಗೆರೆ, ಶಿವಕುಮಾರ್ ಕೊರಟಿಕೆರೆ, ಶಿವರಾಜ್ ಕಬ್ಬೂರು, ಎಂ. ನಾಗರಾಜ್ ಕಕ್ಕರಗೊಳ್ಳ, ರುದ್ರೇಗೌಡ್ರು ಗೋಪನಾಳ್, ವಿಶ್ವೇಶ್ವರಯ್ಯ ಹೆಮ್ಮನಬೇತೂರು, ಅವಿನಾಶ್, ಎನ್.ಎಸ್. ರಾಜು, ಲಿಂಗಾನಂದ್ ಕಮ್ಮತ್ತಹಳ್ಳಿ, ಸಿದ್ದೇಶಪ್ಪ, ಪ್ರಕಾಶ್, ಭರಮಪ್ಪ ಮೈಸೂರು ಮತ್ತಿತರರು ಉಪಸ್ಥಿತರಿದ್ದರು.

## ಅಂಧ್ರದಲ್ಲಿ ಜೋಡಿ ಕೊಲೆ: ಆರೋಪಿಗಳ ಬಂಧನ

**ಬೆಂಗಳೂರು,ಆ.6-** ರಾಜ್ಯವನ್ನೇ ಬೆಚ್ಚಿಬೀಳಿಸಿದ್ದ ಜೋಡಿ ಕೊಲೆ ಪ್ರಕರಣ ಬೇಧಿಸಲಾಗಿದೆ.ಬಿಜೆಪಿ ಮುಖಂಡ ಹಾಗೂ

ರಿಯಲ್ ಎಸ್ಟೇಟ್ ಉದ್ಯಮಿ ವೀರಸ್ವಾಮಿ ರೆಡ್ಡಿ ಮತ್ತು ಅವರ ಪುತ್ರ ಪ್ರಶಾಂತ್ ರೆಡ್ಡಿ ಅವರ ಜೋಡಿ ಕೊಲೆ ಪ್ರಕರಣದ ಸಂಬಂಧ, ಪ್ರಮುಖ ಆರೋಪಿ ಸೇರಿ 6 ಮಂದಿಯ ಗ್ಯಾಂಗನ್ನು ಆಂಧ್ರಪ್ರದೇಶದ ನರಸಮ್‌ಪೇಟೆ ಪೊಲೀಸರು ಬಂಧಿಸಿದ್ದಾರೆ.

ಈ ಜೋಡಿ ಕೊಲೆಗೆ ಬರೋಬ್ಬರಿ 14 ಕೋಟಿ ರೂಪಾಯಿ ಮೌಲ್ಯದ ಆಸ್ತಿ ವಿವಾದವೇ ಪ್ರಮುಖ ಕಾರಣ ಎಂದು ಪತ್ತೆಯಾಗಿದೆ.

ಪ್ರಕರಣದ ಪ್ರಮುಖ ಆರೋಪಿ, ಕೊಲೆಯಾದ ವೀರಸ್ವಾಮಿ ರೆಡ್ಡಿ ಅವರ ಮಾಜಿ ಉದ್ಯಮ ಪಾಲುದಾರ ಮಾಧವರೆಡ್ಡಿ ಎಂದು ಗುರುತಿಸಲಾಗಿದೆ. ಇನ್ನು ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಧವರೆಡ್ಡಿ,ಅನಿಲ್ ರೆಡ್ಡಿ, ನಾಗಿರೆಡ್ಡಿ, ಚಿನ್ನಾರೆಡ್ಡಿ ಅಲಿಯಾಸ್ ಇಂದ್ರಸೇನಾ ರೆಡ್ಡಿ, ಗೋಪಿ ರೆಡ್ಡಿ ಮತ್ತು ರಘುರಾಮ್ ರೆಡ್ಡಿ ಎಂಬುವರನ್ನು ಬಂಧಿಸಲಾಗಿದೆ

ಕೊಲೆ ಆರೋಪಿ ಮಾಧವರೆಡ್ಡಿ ಹಾಗೂ ವೀರಸ್ವಾಮಿ ರೆಡ್ಡಿ ಇಬ್ಬರೂ ರಿಯಲ್ ಎಸ್ಟೇಟ್ ವ್ಯವಹಾರದಲ್ಲಿ ಪಾಲುದಾರರಾಗಿದ್ದರು.

ಬೆಂಗಳೂರಿನ 14 ಕೋಟಿ ರೂ ಮೌಲ್ಯದ ಆಸ್ತಿ ವಿಚಾರದಲ್ಲಿ ಇಬ್ಬರ ನಡುವೆ ತೀವ್ರ ವೈಷಮ್ಯ ಬೆಳೆದಿತ್ತು. ವೀರಸ್ವಾಮಿ ತನಗೆ ಹಣಕಾಸಿನ ವಿಚಾರದಲ್ಲಿ ವಂಚನೆ ಮಾಡಿದ್ದಾನೆ ಎಂಬುದು ಮಾಧವರೆಡ್ಡಿಯ ಪ್ರಬಲ ಆರೋಪವಾಗಿತ್ತು. ಇದೇ ದ್ವೇಷದ ಹಿನ್ನೆಲೆಯಲ್ಲಿ, ತನ್ನ ಮಾಜಿ ಪಾಲುದಾರನನ್ನೇ ಮುಗಿಸಲು ಮಾಧವರೆಡ್ಡಿ ವ್ಯವಸ್ಥಿತವಾಗಿ ಸಂಚು ರೂಪಿಸಿದ್ದನು.

ಅದಕ್ಕೆ ತಕ್ಕಂತೆ ರೌಡಿಗಳ ಗ್ಯಾಂಗ್ ಕಟ್ಟಿಕೊಂಡು ಕೊಲೆ ಮಾಡುವುದಕ್ಕೆ ಎಲ್ಲವನ್ನೂ ಯೋಜನೆ ಮಾಡಿದ್ದನು.ಮಾಧವರೆಡ್ಡಿ ಮತ್ತು ಆತನ ಗ್ಯಾಂಗ್, ತಂದೆ-ಮಗನನ್ನು ಹತ್ಯೆ ಮಾಡಲು ವ್ಯವಸ್ಥಿತ ಸಂಚು ರೂಪಿಸಿತ್ತು.

ಮೊದಲಿಗೆ, ವೀರಸ್ವಾಮಿ ರೆಡ್ಡಿ ಮೇಲೆ ಚೆಕ್ ಬೌನ್ಸ್ ಪ್ರಕರಣ ದಾಖಲಿಸಿ, ಅವರನ್ನು ನ್ಯಾಯಾಲಯದ ವಿಚಾರಣೆಗೆ ಬರುವಂತೆ ಮಾಡಿದ್ದರು. ನಂತರ, ಕೊಲೆಯಾದ ಪ್ರಶಾಂತ್ ರೆಡ್ಡಿ ಬಳಿ ರಾಜಿ ಸಂಧಾನ ಮಾಡಿಸುವುದಾಗಿ ನಂಬಿಸಿ, ತಂದೆ-ಮಗ ಇಬ್ಬರನ್ನೂ ನರಸಮ್‌ಪೇಟೆ ಬಳಿಗೆ ಬರುವಂತೆ ಮಾಡಿದ್ದರು. ಯೋಜನೆಯ ಪ್ರಕಾರ ಅಲ್ಲಿಗೆ ಬಂದ ವೀರಸ್ವಾಮಿ ರೆಡ್ಡಿ ಮತ್ತು ಪ್ರಶಾಂತ್ ರೆಡ್ಡಿ ಅವರನ್ನು ಅಪಹರಿಸಿ, ಮಾಧವರೆಡ್ಡಿ ಮತ್ತು ಆತನ ಸಹಚರರು ಮಾರಕಾಸ್ತ್ರಗಳಿಂದ ಭೀಕರವಾಗಿ ಹಲ್ಲೆ ನಡೆಸಿದ್ದಾರೆ.

ಇದರಿಂದ ಇಬ್ಬರೂ ಮೃತಪಟ್ಟಿದ್ದಾರೆ.

# ಆಪರೇಷನ್ ಸಿಂಧೂರ್ : ವಿಪಕ್ಷಗಳ ವಿರುದ್ಧ ಪ್ರಧಾನಿ ಮೋದಿ ವಾಗ್ದಾಳಿ

**ನವದೆಹಲಿ :** ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರ (ಪಿಒಕೆ) ದಲ್ಲಿನ ಭಯೋತ್ಪಾದಕ ತಾಣಗಳನ್ನು ಗುರಿಯಾಗಿಸಿಕೊಂಡು ಪ್ರಾರಂಭಿಸಲಾದ ಆಪರೇಷನ್ ಸಿಂಧೂರ್ ಕುರಿತು ಸಂಸತ್ತಿನಲ್ಲಿ ಚರ್ಚೆ ನಡೆಸುವಂತೆ ಕೇಳುವ ಮೂಲಕ ವಿರೋಧ ಪಕ್ಷವು ತಪ್ಪು ಮಾಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಎನ್‌ಡಿಎ ಸಂಸದೀಯ ಪಕ್ಷದ ಸಭೆಯಲ್ಲಿ ತಿಳಿಸಿದ್ದಾರೆ ಎಂದು ಮೂಲಗಳು ಹೇಳಿವೆ.

ಕಳೆದ ವಾರ ಸಂಸತ್ತಿನ ಮಳೆಗಾಲದ ಅಧಿವೇಶನದಲ್ಲಿ ನಡೆದ ಚರ್ಚೆಯ ಸಮಯದಲ್ಲಿ ವಿರೋಧ ಪಕ್ಷವು ಕೆಟ್ಟದಾಗಿ ನಡೆದುಕೊಂಡಿತು ಮತ್ತು ತನ್ನ ಕಾಲಿಗೆ ಗುಂಡು ಹಾರಿಸಿಕೊಂಡಿತು ಎಂದು ಅವರು ಹೇಳಿದರು.ವಿರೋಧ ಪಕ್ಷವು ಸ್ವಯಂ ಹಾನಿ ಮಾಡಿಕೊಳ್ಳಲು ಒತ್ತಾಯಿಸುತ್ತಿದೆ ಎಂದು ಅವರು ಹೇಳಿದರು.ಕಳೆದ ವರ್ಷ ಜೂನ್‌ನಲ್ಲಿ ಸರ್ಕಾರ ರಚನೆಯಾದ ನಂತರ ಇದು ಸಂಸತ್ತಿನ ಅಧಿವೇಶನಗಳಲ್ಲಿ ಬಿಜೆಪಿ ನೇತೃತ್ವದ ಮೈತ್ರಿಕೂಟದ ಎರಡನೇ ಸಭೆಯಾಗಿದೆ.

ಸಭೆಯಲ್ಲಿ, ಮೇ 7 ರಂದು ಪ್ರಾರಂಭಿಸಲಾದ ಆಪರೇಷನ್ ಸಿಂಧೂರ್ ಅಡಿಯಲ್ಲಿ ಏಪ್ರಿಲ್ 22 ರಂದು ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಸರ್ಕಾರ ದೃಢವಾಗಿ ಪ್ರತಿಕ್ರಿಯಿಸಿದ ಸಂದರ್ಭದಲ್ಲಿ ಪ್ರಧಾನಿ ಮೋದಿ ಅವರ ಅಸಾಧಾರಣ ನಾಯಕತ್ವ ವನ್ನು ಸಹ ಸನ್ಮಾನಿಸಲಾಯಿತು.

ಪ್ರಧಾನಿ ಮೋದಿಯವರ ಅಚಲ ಸಂಕಲ್ಪ, ದೂರದೃಷ್ಟಿಯ ರಾಜನೀತಿ ಮತ್ತು ದೃಢವಾದ ಆಜ್ಞೆಯು ರಾಷ್ಟ್ರವನ್ನು ಉದ್ದೇಶಪೂರ್ವಕವಾಗಿ ಮುನ್ನಡೆಸಿದ್ದಲ್ಲದೆ, ಏಕತೆ ಮತ್ತು ಹೆಮ್ಮೆಯ ನವೀಕೃತ ಮನೋಭಾವವನ್ನು ಹುಟ್ಟುಹಾಕಿದೆ ಎಲ್ಲಾ ಭಾರತೀಯರ ಹೃದಯಗಳು, ಎಂದು ಎನ್‌ಡಿಎ ಸಂಸದರು ನಿರ್ಣಯದಲ್ಲಿ ತಿಳಿಸಿದ್ದಾರೆ.



ಆಪರೇಷನ್ ಸಿಂಧೂರ್ ಸಮಯದಲ್ಲಿ ಭಾರತೀಯ ಸಶಸ್ತ್ರ ಪಡೆಗಳ ಅಸಾಧಾರಣ ಧೈರ್ಯ ಮತ್ತು ಅಚಲ ಬದ್ಧತೆಗೆ ಅವರು ನಮಸ್ಕರಿಸಿದರು.ಅವರ ಧೈರ್ಯವು ನಮ್ಮ ರಾಷ್ಟ್ರವನ್ನು ರಕ್ಷಿಸುವ ಅವರ ಅಚಲ ಸಮರ್ಪಣೆಯನ್ನು ಎತ್ತಿ ತೋರಿಸುತ್ತದೆ ಎಂದು ಅವರು ಹೇಳಿದರು.ಆಪರೇಷನ್ ಸಿಂಧೂರ್ ಭಯೋತ್ಪಾದಕ ತರಬೇತಿ ಶಿಬಿರಗಳ ಮೇಲೆ ಉಲ್ಬಣಗೊಳ್ಳದ, ನಿಖರವಾದ ಮತ್ತು ಗುರಿಯಿಟ್ಟುಕೊಂಡ ದಾಳಿಯನ್ನು ರೂಪಿಸಿತು ಎಂದು ಅವರು ಹೇಳಿದರು.

ಇದು ಭಾರತದ ಶಾಂತಿಗೆ ಬದ್ಧತೆ, ಭಯೋತ್ಪಾದನೆಯ ಬಗ್ಗೆ ಶೂನ್ಯ ಸಹಿಷ್ಣುತೆ ಮತ್ತು ಸಂದರ್ಭಗಳು ಅಗತ್ಯವಿದ್ದರೆ ಭಯೋತ್ಪಾದಕ ಮೂಲಸೌಕರ್ಯವನ್ನು ಬೇರುಸಹಿತ ಕಿತ್ತುಹಾಕಲು ಏನು ಬೇಕಾದರೂ ಮಾಡುವ ಬದ್ಧತೆಯೊಂದಿಗೆ ಪ್ರತಿಧ್ವನಿಸಿತು ಎಂದು ನಿರ್ಣಯದಲ್ಲಿ ಹೇಳಲಾಗಿದೆ.ಪಹಲ್ಗಾಮ್ ದಾಳಿಯಲ್ಲಿ ಪ್ರಾಣ ಕಳೆದುಕೊಂಡ 26 ಜನರಿಗೆ ಅವರು ಸಂತಾಪ ಸೂಚಿಸಿದರು. ಆಪರೇಷನ್ ಸಿಂಧೂರ್ ನಂತರ ಸರ್ಕಾರದ ಜಾಗತಿಕ ಸಂಪರ್ಕ ಪ್ರಯತ್ನಗಳಿಗಾಗಿ ಅವರು ಪ್ರಧಾನಿ ಮೋದಿಯವರನ್ನು ಶ್ಲಾಘಿಸಿದರು. ಆಪರೇಷನ್ ಸಿಂಧೂರ್ ನಂತರ, ಭಾರತದ ದೃಷ್ಟಿಕೋನವನ್ನು ಪ್ರಸ್ತುತಪಡಿಸಲು ಎಲ್ಲಾ ಪಕ್ಷಗಳಿಂದ 59 ಸಂಸತ್ ಸದಸ್ಯರು 32 ದೇಶಗಳಿಗೆ ಭೇಟಿ ನೀಡಿದ್ದಾರೆ ಎಂದು ಪ್ರಧಾನಿ ಖಚಿತಪಡಿಸಿದರು.

ಭಾರತವು ಇದುವರೆಗೆ ಪ್ರಾರಂಭಿಸಿದ ಅತ್ಯಂತ ವ್ಯಾಪಕವಾದ ಜಾಗತಿಕ ಸಂಪರ್ಕ ಕಾರ್ಯಕ್ರಮಗಳಲ್ಲಿ ಇದು ಒಂದಾಗಿದೆ, ಇದು ದೇಶವು ಭಯೋತ್ಪಾದನೆಗೆ ಹೇಗೆ ಬಲಿಯಾಗಿದೆ ಮತ್ತು ಪ್ರಪಂಚದ ಯಾವುದೇ ಒಂದು ಭಾಗದಲ್ಲಿ ಭಯೋತ್ಪಾದಕ ದಾಳಿಯು ಜಗತ್ತಿನಾದ್ಯಂತ ಮಾನವೀಯತೆಯ ವಿರುದ್ಧದ ಅಪರಾಧವಾಗಿದೆ ಎಂಬುದನ್ನು ಎತ್ತಿ ತೋರಿಸುತ್ತದೆ ಎಂದು ಅವರು ಹೇಳಿದರು.

**ಆಪರೇಷನ್ ಸಿಂಧೂರ್ ಯಶಸ್ವಿ: ಮೋದಿಗೆ ಸನ್ಮಾನ-** ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕಾರವಾಗಿ ಆಪರೇಷನ್ ಸಿಂಧೂರ್ ಅಡಿಯಲ್ಲಿ ತಮ್ಮ ಸರ್ಕಾರ ತೋರಿಸಿದ ದೃಢ ಪ್ರತಿಕ್ರಿಯೆಗಾಗಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಎನ್‌ಡಿಎ ಸಂಸದೀಯ ಪಕ್ಷವು ಸನ್ಮಾನಿಸಿದೆ.ಜೂನ್ 2024 ರಲ್ಲಿ ಸರ್ಕಾರ ರಚನೆಯಾದ ನಂತರ ಸಂಸತ್ತಿನ ಅಧಿವೇಶನಗಳಲ್ಲಿ ನಡೆದ ಏಕೈಕ ಎರಡನೇ ಸಭೆಯಲ್ಲಿ ಬಿಜೆಪಿ ನೇತೃತ್ವದ ಆಡಳಿತ ಮೈತ್ರಿಕೂಟದ ಸಂಸದರು ಇಲ್ಲಿ ಭೇಟಿಯಾಗಿ ಮಹತ್ವದ ಸಭೆ ನಡೆಸಿದರು.

ಭಾರತ್ ಮಾತಾ ಕಿ ಜೈ ಎಂಬ ಘೋಷಣೆಗಳ ನಡುವೆ, ಬಿಜೆಪಿ ಮತ್ತು ಅದರ ಮಿತ್ರಪಕ್ಷಗಳ ಹಿರಿಯ ನಾಯಕರು ಮೋದಿ ಅವರನ್ನು ಸನ್ಮಾನಿಸಿ ಅವರ ಗುಣಗಾನ ಮಾಡಿದರು.

ಏಪ್ರಿಲ್ 22 ರಂದು ಪಹಲ್ಗಾಮ್ ದಾಳಿಯ ನಂತರ ಪಾಕಿಸ್ತಾನ ಆಕ್ರಮಿತ-ಕಾಶ್ಮೀರ ಮತ್ತು ಪಾಕಿಸ್ತಾನದಲ್ಲಿನ ಭಯೋತ್ಪಾದಕ ತಾಣಗಳ ಮೇಲೆ ಮಿಲಿಟರಿ ದಾಳಿ ನಡೆಸಲಾಗಿದೆ ಎಂದು ಸರ್ಕಾರ ಪ್ರತಿಪಾದಿಸಿದೆ.

# ಖಾಯಂ ಲೋಕ್ ಅದಾಲತ್‌ನ ಮೊದಲ ಆದ್ಯತೆ ರಾಜೀ ಸಂಧಾನ: ನ್ಯಾ.ಸಂತೋಷ್



**ಶಿವಮೊಗ್ಗ :** ಖಾಯಂ ಲೋಕ್ ಅದಾಲತ್ ಒಂದು ವಿಶೇಷ ನ್ಯಾಯಾಲಯವಾಗಿದ್ದು, ಪ್ರಕರಣಗಳ ರಾಜಿ ಸಂಧಾನವೇ ಈ ನ್ಯಾಯಾಲಯದ ಮೊದಲ ಆದ್ಯತೆಯಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಂ.ಎಸ್.ಸಂತೋಷ್ ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ನ್ಯಾಯವಾದಿಗಳ ಸಂಘ, ಜಿಲ್ಲಾ ಪಂಚಾಯತ್, ಕುವೆಂಪು ವಿಶ್ವವಿದ್ಯಾಲಯದ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಾನಗರಪಾಲಿಕೆ, ಕಾರ್ಮಿಕ ಇಲಾಖೆ, ಮೆಸ್ಕಾಂ, ಖಾಸಗಿ ಮತ್ತು ರಾಷ್ಟ್ರೀಕೃತ ಬ್ಯಾಂಕ್‌ಗಳು, ಸಹಕಾರಿ ಸಂಘ ಸಂಸ್ಥೆಗಳು, ಸಾರಿಗೆ ಇಲಾಖೆ, ಬಿಎಸ್‌ಎನ್‌ಎಲ್, ಇನ್ಸೂರೆನ್ಸ್ ಕಂಪನಿಗಳು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಬುಧವಾರ ನಗರದ ಜಿ.ಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಆಯೋಜಿಸಿದ್ದ ಖಾಯಂ ಲೋಕ್ ಅದಾಲತ್ ಕುರಿತಾದ ಜಾಗೃತಿ ಅಭಿಯಾನದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾರ್ವಜನಿಕರ ಉಪಯುಕ್ತ ಸೇವೆಗೆ ಸಂಬಂಧಿಸಿದಂತೆ ಇದೊಂದು ವಿಶೇಷ ವೇದಿಕೆ ಆಗಿದ್ದು, ಪ್ರಯಾಣಿಕರನ್ನು ಅಥವಾ ಸರಕನ್ನು ಸಾಗಿಸುವ ಭೂ ಸಾರಿಗೆ, ಜಲಸಾರಿಗೆ, ವಾಯು ಸಾರಿಗೆ ಸೇವೆಗಳು, ಅಂಚೆ, ತಂತಿ, ದೂರವಾಣಿ ಸೇವೆಗಳು, ವಿದ್ಯುತ್, ನೀರು ಸರಬರಾಜು, ಸಾರ್ವಜನಿಕ ನೈರ್ಮಲ್ಯ ಹಾಗೂ ಚರಂಡಿ ವ್ಯವಸ್ಥೆ, ವಿಮಾ ಸೇವೆ, ಆಸ್ಪತ್ರೆ ಹಾಗೂ ಔಷಧಾಲಯಗಳ ಸೇವೆ, ಹಣಕಾಸು ಸಂಸ್ಥೆ ಹಾಗೂ ಬ್ಯಾಂಕ್ ಸೇವೆ, ಶಿಕ್ಷಣ ಅಥವಾ ಶಿಕ್ಷಣ ಸಂಸ್ಥೆಗಳ ಸಂಬಂಧಪಟ್ಟ ಸೇವೆ, ಗೃಹ ಹಾಗೂ ರಿಯಲ್ ಎಸ್ಟೇಟ್ ಸೇವೆ ಒಳಗೊಂಡಂತೆ ಇನ್ನಿತರ ಸಾರ್ವಜನಿಕ ಉಪಯುಕ್ತ ಸೇವೆಗಳ ಪ್ರಕರಣಗಳನ್ನು ಈ ನ್ಯಾಯಾಲಯದಲ್ಲಿ ಸಲ್ಲಿಸಬಹುದು. ಇತರೆ ನ್ಯಾಯಾಲಯಗಳಂತೆ ಇಲ್ಲಿ ಶುಲ್ಕ ಕಟ್ಟವಂತಿಲ್ಲ ಹಾಗೂ ಯಾವುದೇ ಆದಾಯದ ಮಿತಿ ಇರುವುದಿಲ್ಲ. ಈ ಖಾಯಂ ಲೋಕ್ ಅದಾಲತ್ ರಾಜ್ಯದ 6 ಜಿಲ್ಲೆಗಳಲ್ಲಿ ಕಚೇರಿ ಹೊಂದಿದೆ. ಶಿವಮೊಗ್ಗ ಜಿಲ್ಲೆಯು ಮಂಗಳೂರಿನ ವ್ಯಾಪ್ತಿಗೆ ಬರಲಿದೆ ಎಂದರು.

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಅಧ್ಯಕ್ಷರಾಗಿ ಹಾಗೂ ಸಾರ್ವಜನಿಕ ಉಪಯುಕ್ತ ಸೇವೆಗಳ ಬಗ್ಗೆ 15 ರಿಂದ 20 ವರ್ಷಗಳ ಅನುಭವ ಹೊಂದಿರುವ ಇಬ್ಬರು ಸದಸ್ಯರು ಕರ್ನಾಟಕ ರಾಜ್ಯ ಸರ್ಕಾರದ ನಾಮನಿರ್ದೇಶನ ಮಾಡಿದಂತೆ ಈ ನ್ಯಾಯಾಲಯದಲ್ಲಿ ಕರ್ತವ್ಯ ನಿರ್ವಹಿಸಲಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ರೂ.1 ಕೋಟಿ ಮೌಲ್ಯದ ವ್ಯಾಜ್ಯಗಳನ್ನು ಅಥವಾ ಹಣಕಾಸಿ ವ್ಯವಹಾರದ ಅರ್ಜಿಯನ್ನು ದಾಖಲಿಸಬಹುದು. ಪ್ರಕರಣಗಳನ್ನು ತ್ವರಿತಗತಿಯಲ್ಲಿ ಆದೇಶವನ್ನು ನೀಡಲಿದ್ದು, ಒಂದೇ ವಿವಾದಕ್ಕೆ ಸಂಬಂಧಿಸಿದಂತೆ ಬೇರೆ ನ್ಯಾಯಾಲಯದಲ್ಲಿ ದಾವೆ ಇದ್ದ ಪ್ರಕರಣಗಳ ಕುರಿತು ಖಾಯಂ ಲೋಕ್ ಅದಾಲತ್ ನಲ್ಲಿ ಅರ್ಜಿ ಸಲ್ಲಿಸಲು ಸಾಧ್ಯವಿಲ್ಲ.

ಉಭಯಪಕ್ಷಗಾರರು ರಾಜೀ ಸಂಧಾನಕ್ಕೆ ಒಪ್ಪದೇ ಇದ್ದಾಗ ವಿವಾದವನ್ನು ವಿಚಾರಣೆಗೆ ಒಳಪಡಿಸುವ ಅಧಿಕಾರ ಈ ನ್ಯಾಯಾಲಯಕ್ಕಿದ್ದು, ನಂತರ ತೀರ್ಪನ್ನು ಪ್ರಕಟಿಸಬಹುದು. ಅರ್ಜಿದಾರರಿಗೆ ಈ ತೀರ್ಪು ಸರಿ ಹೊಂದದೇ ಇದ್ದರೆ ಸಿವಿಲ್ ಹಾಗೂ ಜಿಲ್ಲಾ ನ್ಯಾಯಾಲಯದಲ್ಲಿ ಪ್ರಶ್ನಿಸುವ ಅವಕಾಶವಿರುವುದಿಲ್ಲ. ಆದರೆ ನೇರವಾಗಿ ರಿಟ್ ಮೂಲಕ ಹೈ ಕೋರ್ಟ್‌ ನಲ್ಲಿ ಪ್ರಶ್ನಿಸಬಹುದು.

ಸಾರ್ವಜನಿಕರು ಅಧಿಕಾರಿಗಳ ಸಣ್ಣ ಪುಟ್ಟ ಲೋಪಗಳು ಸೇರಿದಂತೆ ಹಲವಾರು ವಿಷಯಗಳ ಕುರಿತು ಖಾಯಂ ಲೋಕ್ ಅದಾಲತ್‌ನಲ್ಲಿ ದಾವೆ ಹೂಡಬಹುದು. ಹಾಗಾಗಿ ಅಧಿಕಾರಿಗಳಿಗೆ ಖಾಯಂ ಲೋಕ್ ಅದಾಲತ್ ಬಗ್ಗೆ ಅರಿವಿರಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳಿಗೆ ಅರಿವು ಮೂಡಿಸಲು ಈ ಕಾರ್ಯಾಗಾರವನ್ನು ಆಯೋಜಿಸಲಾಗಿದೆ. ಈ ಅದಾಲತ್‌ನಲ್ಲಿ ಬರೀ ಸಾರ್ವಜನಿಕರು ಮಾತ್ರವಲ್ಲದೆ ಅಧಿಕಾರಿಗಳು ಕೂಡ ವಿವಿಧ ಸಂಸ್ಥೆಗಳು ಮತ್ತು ಇಲಾಖೆಗಳ ವಿರುದ್ದ ದಾವೆ ಹಾಕಬಹುದು ಎಂದು ಮಾಹಿತಿ ನೀಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸ್ವಯಂ ಸೇವಕರಾದ ಎಸ್.ಬಿ.ವೆಂಕಟೇಶ್ ಮಾತನಾಡಿ, ಸಾರ್ವಜನಿಕರಿಗೆ ಖಾಯಂ ಲೋಕ್ ಅದಾಲತ್ ಬಗ್ಗೆ ತಿಳಿದಿಲ್ಲ. ಹಾಗೂ ಅದನ್ನು ಹೇಗೆ ಬಳಸಿಕೊಳ್ಳಬೇಕೆಂಬ ಮಾಹಿತಿಯೂ ಇಲ್ಲ. ಅದಾಲತ್‌ನಲ್ಲಿ ಸಾರ್ವಜನಿಕರು ಹಾಗೂ ಅಧಿಕಾರಿಗಳು ಪ್ರಕರಣಗಳನ್ನು ದಾಖಲಿಸಬಹುದಾಗಿದ್ದು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಲ್ಲಿ ಅರ್ಜಿ ಲಭ್ಯವಿರುತ್ತದೆ. ಇದನ್ನು ಸಲ್ಲಿಸುವಾಗ ಅರ್ಜಿಯೊಂದಿಗೆ ಸಂಬಂಧಿತ ಮಾಹಿತಿ ಹಾಗೂ ದಾಖಲೆಗಳ ಜೆರಾಕ್ಸ್ ಪ್ರತಿಯನ್ನು ಕೊಡಬೇಕು. ಇದರಲ್ಲಿ ದಾವೆ ಹೂಡಿರುವರು ನಮಗೆ ಬೇಕಾದ ಪರಿಹಾರವನ್ನು ಕೇಳುವ ಅಧಿಕಾರಿ ಹೊಂದಿದ್ದು, ಇದರ ತೀರ್ಪು ಸಿವಿಲ್ ನ್ಯಾಯಾಲಯದ ತೀರ್ಪಿಗೆ ಸಮವಾಗಿರುತ್ತದೆ. ಖಾಯಂ ಲೋಕ್ ಅದಾಲತ್ ವಿಚಾರಣೆ ವೇಳೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರೂ ಪಕ್ಷಗಾರರು ಹಾಜರಿರಬೇಕು. ಇಲ್ಲದಿದರೆ ಏಕಪಕ್ಷೀಯವಾಗಿ ತೀರ್ಪು ನೀಡಲಾಗುತ್ತದೆ ಎಂದು ತಿಳಿಸಿದರು.

### ಹಂಸಭಾವಿಯಲ್ಲಿ ವಾಸವಿರುವ ಅಲೆಮಾರಿ ಸಿಂಧೋಳು ಸಮುದಾಯಕ್ಕೆ ಭೇಟಿ

# ಜನರ ಕುಂದುಕೊರತೆ ಆಲಿಸಿದ ಡಾ.ನಾಗಲಕ್ಷ್ಮೀ ಚೌಧರಿ

**ಹಾವೇರಿ:** ಕಾನೂನಾತ್ಮಕವಾಗಿ, ಸಂವಿದಾನಾತ್ಮಕವಾಗಿ ಅಲೆಮಾರಿ, ಅರೇ ಅಲೆಮಾರಿ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ ನಾಗಲಕ್ಷ್ಮಿ ಚೌಧರಿ ಅವರು ಹೇಳಿದರು.

ಬ್ಯಾಡಗಿ ತಾಲೂಕಿನ ಸರಹದ್ದಿನಲ್ಲಿರುವ ಹಿರಂಜಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಹಂಸಬಾವಿಯ ಸರ್ವೆ ನಂ.105 ರಲ್ಲಿ ವಾಸವಿರುವ ಅಲೆಮಾರಿ ಸಿಂಧೋಳು ಸಮುದಾಯಕ್ಕೆ ಭೇಟಿ ಜನರ ಸಮಸ್ಯೆಗಳನ್ನು ಆಲಿಸಿ ಬಳಿಕ ಮಾತನಾಡಿದ ಅವರು, ಸರ್ಕಾರದ ಎಲ್ಲ ಸೌಲಭ್ಯಗಳನ್ನು ಒದಗಿಸಿ, ಯಾವುದೇ ಮಹಿಳೆ ಕಚೇರಿಗೆ ಬಂದರೆ ಅವರಿಗೆ ಸರಿಯಾಗಿ ಸ್ಪಂದಿಸಿ ಅವರ ಸಮಸ್ಯೆಗಳನ್ನು ಆಲಿಸಿ ತಾಲೂಕಿನಲ್ಲಿ ಯಾರೆಲ್ಲ ಅಧಿಕಾರಿಗಳು ಕರ್ತವ್ಯದಲ್ಲಿದ್ದೀರಾ ನೀವೆಲ್ಲರೂ ನಿಮ್ಮ ಕೆಲಸವನ್ನು ಜವಾಬ್ದಾರಿಯಿಂದ ಮಾಡಿ. ಜನರಿಗೆ ಮೂಲಭೂತ ಸೌಲಭ್ಯ ಕಲ್ಪಿಸಿ ತಾಲೂಕಿನಲ್ಲಿ ಸರಿಯಾಗಿ ಕೆಲಸ ಮಾಡದೇ ಇರೋ ಅಧಿಕಾರಿಗಳಿಗೆ ನೋಟಿಸ ನೀಡಿ, ಅವರ ವಿರುದ್ಧ ಕ್ರಮ ಜರುಗಿಸಿ ಎಂದು ಬ್ಯಾಡಗಿ ತಹಸೀಲ್ದಾರ್ ಫಿರೋಜ್ ಸೋಮನಕಟ್ಟಿ ಅವರಿಗೆ ಸೂಚನೆ ನೀಡಿದರು. ಒಂದು ವೇಳೆ ನಿಮ್ಮಿಂದ ಆಗದೆ ಇದ್ದಲ್ಲಿ ನಾನೆ ಖುದ್ದಾಗಿ ಸರ್ಕಾರಕ್ಕೆ ಇಲ್ಲಿನ ಅವ್ಯವಸ್ಥೆ ಕುರಿತು ವರದಿ ಸಲ್ಲಿಸುತ್ತೇನೆ ಇದರಲ್ಲಿ ಯಾವುದೇ ಮುಲಾಜೇ ಇಲ್ಲ ಎಂದರು.

ಸಿಂಧೋಳು ಸಮುದಾಯದಲ್ಲಿ ವಾಸವಿರುವ ಅಲೆಮಾರಿ ಜನರಿಗೆ ಸರಿಯಾಗಿ ಶುದ್ಧ ಕುಡಿಯುವ ನೀರಿಲ್ಲ, ಚರಂಡಿ ಅಂತೂ ಮೊದಲೇ ಇಲ್ಲ, ಇವರಿಗಳು ವಾಸಿಸುವುದಕ್ಕೆ ಮನೆ ಇಲ್ಲ, ಮಳೆಯಿಂದ ಇಲ್ಲಿ ತಿರಗಾಡುವುದಕ್ಕೂ ಆಗುತ್ತಿಲ್ಲ ಅಷ್ಟು ಶೋಚನಿಯ ಸ್ಥಿತಿಯಲ್ಲಿ ಇವರುಗಳು ವಾಸಿಸುತ್ತಿದ್ದಾರೆ. ನೀವೆಲ್ಲರೂ ಈ ಕಡೆಗೆ ಗಮನ ಹರಿಸಿಲ್ಲ, ಸರಕಾರದ ಉನ್ನತ ಮಟ್ಟದ ಹುದ್ದೆಯಲ್ಲಿರುವ ನೀವುಗಳು ಇಂತಹ ಜನರನ್ನು ಮಕ್ಕಳಂತೆ ಭಾವಿಸಿ ಅವರಿಗೆ ಕನಿಷ್ಠ ಮೂಲಭೂತ ಸೌಕರ್ಯಗಳನ್ನಾದರೂ ಕಲ್ಪಿಸಿ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಶಾಶ್ವತ ಸೂರು ಒದಗಿಸಿ: ನಿಮಗೆ ಶಾಶ್ವತ ಸೂರು ಒದಗಿಸಲು ದುಳಿಕೊಪ್ಪ ಕ್ರಾಸ್ ನಲ್ಲಿರುವ ಸರ್ಕಾರ ಜಾಗ ಗೊತ್ತುಪಡಿಸಿದೆ ಅದಕ್ಕೆ ನಿಮ್ಮ ಸಹಕಾರಬೇಕು ನೀವು ಹೇಳಿದ ಸ್ಥಳದಲ್ಲೇ ಮನೆ ನೀಡಬೇಕು ಎಂದಾದರೆ ಅದು ಕಷ್ಟ ಸಾಧ್ಯ. ನಿಮಗೆ ಮನೆ ನೀಡುತ್ತೇವೆ ನೀವು ಅಲ್ಲಿ ಹೋಗಿ ವಾಸಿಸಲು ಸಿದ್ದರಾಗಿ ಎಂದು ತಿಳಿಸದರು.



ಸಮುದಾಯದ ಗರ್ಭಿಣಿ ಮಹಿಳೆಯರಿಗೆ ಮಾತೃವಂದನ ನೊಂದಣಿ ಮಾಡಿಲ್ಲ, ಅವರುಗಳಿಗೆ ಲಸಿಕೆ ಹಾಕಿಸಿಲ್ಲ, ವಿಧವಾವೇತನ ಸೌಲಭ್ಯ ನೀಡಿಲ್ಲ, ಸರ್ಕಾರ ಜಾರಿಗೆ ತಂದಿರುವ ಸಿಂಗಲ್ ಪೇರೆಂಟ್ ಪ್ರಾಯೋಜಕತ್ವ ಯೋಜನೆಯು ಈ ಸಮುದಾಯದ ಹೆಣ್ಣು ಮಕ್ಕಳಿಗೆ ಮರೀಚಕೆಯಾಗಿದೆ. ಪ್ರಾಯೋಜಕತ್ವ ಯೋಜನೆಯ ಸೌಲಭ್ಯವನ್ನು 18 ವರ್ಷದೊಳಗಿನ ಮಕ್ಕಳನ್ನು ಹೊಂದಿರುವ ಸಿಂಗಲ್ ಪೇರೆಂಟ್ ಮಹಿಳೆಗೆ ಒದಗಿಸಿದ್ದರೆ ಸರ್ಕಾರದಿಂದ ಅವರಿಗೆ ಪ್ರತಿ ತಿಂಗಳು ರೂ. 4000-00 ಸಹಾಯಧನ ಬರುತ್ತಿತ್ತು ಇದು ಇವರ ಆರ್ಥಿಕತೆಗೆ ಸಹಾಯವಾಗುತ್ತಿತ್ತು ಎಂದರು. ಹಾಗೆಯೇ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ಅಷ್ಟು ಸೌಲಭ್ಯಗಳನ್ನು ಒದಗಿಸಿ ಎಂದು ಅಧಿಕಾರಿಗಳಿಗೆ ಖಡಕ ಸೂಚನೆ ನೀಡಿದರು ಮತ್ತು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ನಾಳೆ ಒಳಗಾಗಿ ವರದಿ ನೀಡುವಂತೆ ಸೂಚಿಸಿದರು.

ಸಿಂಧೋಳು ಸಮುದಾಯದ ಅಲೆಮಾರಿ ಜನರು ಅಧ್ಯಕ್ಷರ ಎದುರಿಗೆ ತಮ್ಮ ಸಮಸ್ಯೆಗಳನ್ನು ಹೇಳಿಕೊಂಡರು. ಈ ಭಾಗಕ್ಕೆ ಯಾವ ಅಧಿಕಾರಿಗಳು ಬರುವುದಿಲ್ಲ ನಮಗೆ ಯಾವುದೇ ಜಾತಿ ಪ್ರಮಾಣ ಪತ್ರ ಇಲ್ಲ, ಆಧಾರ ಕಾರ್ಡ್ ಇಲ್ಲ, ರೇಷನ್ ಕಾರ್ಡ್ ಇಲ್ಲ, ಇವುಗಳನ್ನು ಮಾಡಿಸಲು ನಾವು ಸಂಬಂಧಪಟ್ಟ ಕಚೇರಿಗೆ ಅಲೆದು ಸಾಕಾಯಿತು ನಮಗೆ ಆಧಾರ ಕಾರ್ಡ್ ಮಾಡಿಸಲು ರೂ. 9,000-00 ಗಳ ಲಂಚ ಕೇಳುತ್ತಾರೆ, ವಿಧವಾ ವೇತನ ಮಾಡಿಸಲು ರೂ. 20,000-00 ಗಳ ಲಂಚ ಕೇಳುತ್ತಾರೆ ಇಷ್ಟು ಹಣ ನಾವು ಎಲ್ಲಿಂದ ತರೋಣ, ಒಂದು ಹೊತ್ತು ಊಟಕ್ಕೆ ನಾವು ದಿನಂಪ್ರತಿ ದುಡೀಬೇಕು. ಆಧಾರ್ ಕಾರ್ಡ್ ಇಲ್ಲದೆ ಇರುವುದರಿಂದ ನಮ್ಮ ಮಕ್ಕಳನ್ನು ಶಾಲೆಗೆ ಸೇರಿಸಿಕೊಳ್ಳುತ್ತಿಲ್ಲ. ನಮ್ಮ ಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ನಮಗೆ ಶಾಶ್ವತ ಸೂರು, ಶುದ್ಧ ಕುಡಿಯುವ ನೀರು ನೀಡಿ ಬೋರ್ ವೆಲ್ ಹಾಕಿಸಿಕೊಡಿ ಎಂದು ಸಾಕಷ್ಟು ಬಾರಿ ಮನವಿ ಕೊಟ್ಟರು ನಮಗೆ ಯಾವುದೇ ಅಧಿಕಾರಿ ಸ್ಪಂದನೆ ಮಾಡುತ್ತಿಲ್ಲ ನಾವೇ ಸ್ವತಃ ಬೋರ್ವೆಲ್ ಹಾಕಿಸಿಕೊಂಡಿದ್ದೇವೆ ಆದರೆ ಆ ನೀರು ಕುಡಿಯಲು ಯೋಗ್ಯವಿಲ್ಲ 2 ಕಿ ಮೀ ದೂರದಿಂದ ನೀರು ತರುತ್ತೇವೆ ಇದಕ್ಕೆ ಕೂಡಲೇ ವ್ಯವಸ್ಥೆ ಮಾಡಿಕೊಡಿ ಎಂದು ಅಂಗಲಾಚಿದರು, ಜಾತಿ ಪ್ರಮಾಣ ಪತ್ರ ಮಾಡಿಸಿಕೊಡಿ, ಆಧಾರ್ ಕಾರ್ಡ್ ಮಾಡಿಸಿಕೊಡಿ ಆಧಾರ್ ಕಾರ್ಡ್ ಇಲ್ಲದೆ ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಲು ನಮಗೆ ಆಗುತ್ತಿಲ್ಲ ಎಂದು ತಮ್ಮ ಅಳಲು ತೋಡಿಕೊಂಡರು.

ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ಸಹಾಯಧನ ನೀಡಲು ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಸಾಲಿನ ಎಸ್ ಸಿ ಎಸ್‌ಟಿ ಪಿ, ಟಿಎಸ್‌ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಪ್ರವಾಸೋದ್ಯಮ, ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲು ಬಾಕಿ ಉಳಿದಿರುವ ಗುರಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಬಾಕಿ ಉಳಿದಿರುವ ಪರಿಶಿಷ್ಟ ಜಾತಿ 1, ಪರಿಶಿಷ್ಟ ಪಂಗಡದ 1 ಅಭ್ಯರ್ಥಿಗಳ ಗುರಿ ಹೊಂದಲಾಗಿದೆ. ಇದರಡಿ ಪಡೆಯುವ ಸೌಲಭ್ಯ ಪಡೆಯುವ ಆಸಕ್ತರು ಅರ್ಜಿ ಸಲ್ಲಿಸಬಹುದು ಅಗತ್ಯ ದಾಖಲೆಗಳೊಂದಿಗೆ ಆಗಸ್ಟ್ 25 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ದಾವಣಗೆರೆ ದೂ.ಸಂ:08192-230123 ನ್ನು ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರಾದ ಕಾವ್ಯ ತಿಳಿಸಿದ್ದಾರೆ.

# ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ ;** ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ದಾವಣಗೆರೆ ಜಿಲ್ಲಾ ಕಚೇರಿಯಲ್ಲಿ ಪ್ರಸಕ್ತ ಸಾಲಿಗೆ ನಿಗಮದ ಯೋಜನೆಗಳಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಸೇವಾ ಸಿಂಧು ಪೋರ್ಟಲ್ http://sevasindu.karnataka.gov.inb ಮೂಲಕ ಸೆಪ್ಟಂಬರ್ 17 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಿಗಮದ ಜಿಲ್ಲಾ ವ್ಯವಸ್ಥಾಪಕರನ್ನು ಸಂಪರ್ಕಿಸಲು ದೂ.ಸಂ:08192-233309 ನ್ನು ಸಂಪರ್ಕಿಸಲು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

# ಮಾಸಾಶನ/ವಿಧವಾ ಮಾಸಾಶನ ಪಡೆಯುತ್ತಿರುವ ಸಾಹಿತಿ/ಕಲಾವಿದರ ಜೀವಂತ ಪ್ರಮಾಣ ಪತ್ರ ಸಲ್ಲಿಸಲು ಸೂಚನೆ

ಶಿವಮೊಗ್ಗ; ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಾಸಾಶನ/ವಿಧವಾ ಮಾಸಾಶನ ಪಡೆಯುತ್ತಿರುವ ಸಾಹಿತಿ/ಕಲಾವಿದರು ತಮ್ಮ ಜೀವಂತ ಪ್ರಮಾಣ ಪತ್ರವನ್ನು ದೃಢೀಕರಿಸಿ, 2025ರ ಸೆಪ್ಟಂಬರ್ ಅಂತ್ಯದೊಳಗಾಗಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕುವೆಂಪು ರಂಗಮಂದಿರ, ಶಿವಮೊಗ್ಗ ಸಲ್ಲಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ದೂ.ಸಂ.: 08182-223354 ನ್ನು ಸಂಪರ್ಕಿಸುವುದು.

# ವಿವಿಧ ಯೋಜನೆಗಳ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಹಾಸನ :** ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ2025-26ನೇ ಸಾಲಿನಲ್ಲಿಅನುಷ್ಠಾನಗೊಳಿಸುತ್ತಿರುವ ಯೋಜನೆಗಳುಕುರಿತ ಮಾಹಿತಿಯನ್ನು ಈ ಕೆಳಕಂಡಂತೆ ನೀಡಲಾಗಿದೆ.

ಸ್ವಯಂಉದ್ಯೋಗ ಕಾರ್ಯಕ್ರಮಗಳು :ನೇರಸಾಲ ಯೋಜನೆ- ಕಿರುಆರ್ಥಿಕ ಚಟುವಟಿಕೆಗಳನ್ನು ಪ್ರಾರಂಭಿಸಲು ನಿಗಮದಿಂದ ಸಹಾಯಧನ ಮತ್ತು ನೇರಸಾಲ ಮಂಜೂರು ಮಾಡಲಾಗುತ್ತದೆ. ಹೈನುಗಾರಿಕೆ (ಬ್ಯಾಂಕ್‌ಗಳ ಸಹಯೋಗದೊಂದಿಗೆ)-ಹೈನುಗಾರಿಕೆ ಕೈಗೊಳ್ಳಲು ಎರಡುಎಮ್ಮೆ/ಹಸುಗಳಿಗೆ ಘಟಕ ವೆಚ್ಚದ ಶೇ. 50 ರಷ್ಟುಅಥವಾಗರಿಷ್ಟರೂ. 1.25ಲಕ್ಷಗಳ ಸಹಾಯಧನ ನೀಡಲಾಗುತ್ತದೆ. ಉಳಿದ ಮೊತ್ತ ಬ್ಯಾಂಕ್ ಸಾಲವಾಗಿರುತ್ತದೆ.ಸ್ವಾವಲಂಬಿ ಸಾರಥಿ (ಬ್ಯಾಂಕ್‌ಗಳ ಸಹಯೋಗದೊಂದಿಗೆ)-ಸರಕು ವಾಹನ / ಟ್ಯಾಕ್ಸಿ (ಹಳದಿ ಬೋರ್ಡ್) ಉದ್ದೇಶದಡಿಘಟಕ ವೆಚ್ಚದ ಶೇ. 75 ರಷ್ಟುಅಥವಾಗರಿಷ್ಟರೂ. 4ಲಕ್ಷಗಳ ಸಹಾಯಧನ ನೀಡಲಾಗುತ್ತದೆ. ಉಳಿದ ಮೊತ್ತ ಬ್ಯಾಂಕ್ ಸಾಲವಾಗಿರುತ್ತದೆ.

ಉದ್ಯಮ ಶೀಲತಾ ಯೋಜನೆ- (ಬ್ಯಾಂಕ್‌ಗಳ ಸಹಯೋಗದೊಂದಿಗೆ) ಇತರೆಉದ್ದೇಶವ್ಯಾಪಾರ ಮತ್ತುಇತರೆ ಉದ್ಯಮಗಳಿಗೆ ಘಟಕ ವೆಚ್ಚದ ಶೇ.70ರಷ್ಟು ಸಹಾಯಧನಅಥವಾಗರಿಷ್ಟರೂ. 2ಲಕ್ಷ ಸಹಾಯಧನ ನೀಡಲಾಗುತ್ತದೆ. ಉಳಿದ ಮೊತ್ತ ಬ್ಯಾಂಕ್ ಸಾಲವಾಗಿರುತ್ತದೆ. ಮೈಕ್ರೋಕ್ರೆಡಿಟ್ (ಪ್ರೇರಣಾ) ಯೋಜನೆ- (ನೋಂದಾಯಿತ ಸ್ವ-ಸಹಾಯ ಮಹಿಳಾ ಸಂಘದವರಿಗೆ)ಮಹಿಳಾ ಸ್ವಸಹಾಯ ಸಂಘಗಳಿಗೆ (ಕನಿಷ್ಟ 10 ಸದಸ್ಯರು) ಕಿರುಆರ್ಥಿಕಆರ್ಥಿಕ ಚಟುವಟಿಕೆಗಳಿಗೆ ಸಾಲ ಮತ್ತು ಸಹಾಯಧನ ಸೌಲಭ್ಯ ನೀಡಲಾಗುವುದು. ಘಟಕ ವೆಚ್ಚ ರೂ 5 ಲಕ್ಷಗಳನ್ನು ಮಂಜೂರು ಮಾಡಲಾಗುವುದು. ಇದರಲ್ಲಿ ಸಹಾಯಧನ ರೂ.2.50 ಲಕ್ಷ ಮತ್ತು ಸಾಲ. ರೂ. 2.50 ಲಕ್ಷ (ಶೇಕಡ 4ರಷ್ಟು ಬಡ್ಡಿದರ).

ಗಂಗಾ ಕಲ್ಯಾಣಯೋಜನೆ- 1.20 ಎಕರೆಯಿಂದ 5 ಎಕರೆಜಮೀನು ಹೊಂದಿರುವ ಸಣ್ಣ ಮತ್ತುಅತಿ ಸಣ್ಣರೈತರಿಗೆ ಖುಷ್ಕಿ /ಒಣ ಜಮೀನಿನಲ್ಲಿ ಕೊಳವೆಬಾವಿ ಕೊರೆದು ಪಂಪ್‌ಸೆಟ್‌ಅಳವಡಿಸಿ, ವಿದ್ಯುದ್ದೀಕರಣಗೊಳಿಸಿ ನೀರಾವರಿ ಸೌಲಭ್ಯ ಒದಗಿಸಿಕೊಡಲಾಗುವುದು ಘಟಕ ವೆಚ್ಚ ರೂ. 3.75 ಲಕ್ಷಇದರಲ್ಲಿರೂ. 50,000 ಸಾಲವೂ ಸೇರಿರುತ್ತದೆ.

ಭೂಒಡೆತನಯೋಜನೆ-ಭೂರಹಿತ ಮಹಿಳಾ ಕೃಷಿ ಕಾರ್ಮಿಕರಿಗೆಘಟಕ ವೆಚ್ಚ ರೂ. 20ಲಕ್ಷ ಸಹಾಯಧನರೂ. ಶೇ. 50 ರಷ್ಟು ಸಹಾಯಧನ ಹಾಗೂ ಶೇ.50ರಷ್ಟು ಸಾಲವಾಗಿರುತ್ತದೆ(ಶೇಕಡ 4ರಷ್ಟು ಬಡ್ಡಿದರ)ಅರ್ಜಿ ಸಲ್ಲಿಸಲುಸೆ.17ಕೊನೆಯ ದಿನಾಂಕವಾಗಿದೆ. 2023-24 ಮತ್ತು 2024-25ನೇ ಸಾಲಿನಲ್ಲಿಆನ್ ಲೈನ್ ಮುಖಾಂತರಅರ್ಜಿ ಸಲ್ಲಿಸಿರುವವರು ಅರ್ಜಿ ಸಲ್ಲಿಸುವಅವಶ್ಯಕತೆಇರುವುದಿಲ್ಲ. ಫಲಾಪೇಕ್ಷಿಗಳು ಅನ್‌ಲೈನ್ ಮೂಲಕ ಅರ್ಜಿಗಳನ್ನು ಮತ್ತು ದಾಖಲೆಗಳನ್ನು ನಿಗಮದ ವೆಬ್ ಸೈಟ್‌ಣಣಠಿ://ಜತಭುಟಜುಣ.ಇಚಿಡಿಟಚಿಣಚಿಇಚಿ.ರಂತ.ಎಟನೇರವಾಗಿಅಥವಾಕರ್ನಾಟಕಒನ್, ಬೆಂಗಳೂರು ಒನ್ ಹಾಗೂ ಗ್ರಾಮಒನ್ ಸಂಸ್ಥೆಗಳ ಸಹಯೋಗದೊಂದಿಗೆ ಸಹ ಅರ್ಜಿ ಸಲ್ಲಿಸಬಹುದು ಹೆಚ್ಚಿನ ವಿವರಗಳಿಗಾಗಿ ಕಚೇರಿದೂರವಾಣಿ ಸಂಖ್ಯೆ: 08172-232344ನ್ನು ಸಂಪರ್ಕಿಸಲುಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

# ಸಹಚೇತನ ನಾಟ್ಯಾಲಯ: ಒಡಿಸ್ಸಿ ನೃತ್ಯ- ಬಿಹು ನೃತ್ಯ







ಸಹಚೇತನ ನಾಟ್ಯಾಲಯವು ಹಮ್ಮಿಕೊಂಡಿರುವ ನಾಟ್ಯಾರಾಧನಾ-14 ರಾಷ್ಟ್ರೀಯ ನೃತ್ಯ ಮಹೋತ್ಸವದಲ್ಲಿ ಆಗಸ್ಟ್ 24ರಂದು ಸಂಜೆ 6.30ರಿಂದ ಶಿವಮೊಗ್ಗದ ಕುವೆಂಪು ರಂಗಮಂದಿರದಲ್ಲಿ ಒಡಿಸ್ಸಿ ನೃತ್ಯ ಹಾಗೂ ಅಸ್ಸಾಂನ ಜಾನಪದ ಕಲೆಯಾದ ಬಿಹು ನೃತ್ಯ ಪ್ರದರ್ಶನವಿರುತ್ತದೆ. ಈ ನೃತ್ಯ ಪ್ರಾಕಾರಗಳ ಬಗ್ಗೆ ಕಿರು ಪರಿಚಯ...

ಭರತನಾಟ್ಯ ಕಲೆಯನ್ನು ಉಳಿಸಿ ಬೆಳೆಸುವಲ್ಲಿ ಸಹಚೇತನ ನಾಟ್ಯಾಲಯದ ಪಾತ್ರ ಪ್ರಮುಖವಾಗಿದೆ. ಈ ನಾಟ್ಯಾಲಯದ ಕಾರ್ಯದರ್ಶಿ, ನೃತ್ಯ ಗುರು, ವಿದುಷಿ ಸಹನಾ ಚೇತನ್ ನೃತ್ಯಕ್ಕಾಗಿಯೇ ತಮ್ಮ ಬದುಕನ್ನು ಮುಡುಪಾಗಿಟ್ಟಿದ್ದಾರೆ ಎಂದರೆ ತಪ್ಪಾಗಲಿಕ್ಕಿಲ್ಲ. ಸಾವಿರಾರು ಮಕ್ಕಳು ಮತ್ತು ಯುವತಿಯರಿಗೆ ಭರತನಾಟ್ಯ ಕಲಿಸಿರುವ ಇವರು ಈ ನೃತ್ಯ ಕ್ಷೇತ್ರಕ್ಕೆ ನೀಡುತ್ತಿರುವ ಕೊಡುಗೆ ಅನನ್ಯ ಹಾಗೂ ಅಮೋಘ.

ಸಹಚೇತನ ನಾಟ್ಯಾಲಯವು ಸ್ಥಳೀಯ ಮಟ್ಟದಿಂದ ರಾಷ್ಟ್ರೀಯ ಮಟ್ಟದವರಗೂ ನೃತ್ಯಕಾರ್ಯಕ್ರಮಗಳನ್ನು ನೀಡುತ್ತಾ, ಆಯೋಜಿಸುತ್ತಾ ಬರುತ್ತಿದ್ದು, ಶಿವಮೊಗ್ಗದ ಕುವೆಂಪು ರಂಗಮಂದಿರದಲ್ಲಿ ಆಗಸ್ಟ್ 22ರಿಂದ 24ರವರೆಗೆ ನಾಟ್ಯಾರಾಧನಾ-14 ಎಂಬ ರಾಷ್ಟ್ರೀಯ ನೃತ್ಯ ಮಹೋತ್ಸವ ಹಮ್ಮಿಕೊಂಡಿದೆ.

ಈ ನೃತ್ಯ ಮಹೋತ್ಸವದಲ್ಲಿ ಆಗಸ್ಟ್ 24ರ ಭಾನುವಾರ ಸಂಜೆ 6.30ಕ್ಕೆ ಒರಿಸ್ಸಾದ ರುದ್ರಾಕ್ಷ್ ಫೌಂಡೇಶನ್‌ನ ಅಂತರಾಷ್ಟ್ರೀಯ ಕಲಾವಿದರಿಂದ ಶಾಸ್ತ್ರೀಯ ಕಲೆಯಾದ ಒಡಿಸ್ಸಿ ನೃತ್ಯ ಹಾಗೊ ಸಂಜೆ 7.30ಕ್ಕೆ ಅಸ್ಸಾಂನ ರಂಗಧಾಲಿ ಡ್ಯಾನ್ಸ್ ಟ್ರೂಪ್‌ನಿಂದ ಅಸ್ಸಾಂನ ಜಾನಪದ ಕಲೆಯಾದ ಬಿಹು ನೃತ್ಯ ಪ್ರದರ್ಶನವಿರುತ್ತದೆ. ಆ ರಾಜ್ಯದ ಮೂಲ ಕಲಾವಿದರೇ ಈ ನೃತ್ಯ ಪ್ರದರ್ಶಿಸಲಿದ್ದಾರೆ.

**ಒಡಿಸ್ಸಿ ನೃತ್ಯ:** ಒಡಿಸ್ಸಿ ನೃತ್ಯವು ಭಾರತದ ಒರಿಸ್ಸಾ ರಾಜ್ಯದಿಂದ ಹುಟ್ಟಿಕೊಂಡಿದೆ. ಭಾರತದ ಎಂಟು ಶಾಸ್ತ್ರೀಯ ನೃತ್ಯಗಳಾದ ಭರತನಾಟ್ಯ, ಕಥಕ್, ಕಥಕ್ಕಳಿ, ಕೂಚಿಪುಡಿ, ಮಣಿಪುರಿ, ಮೋಹಿನಿಯಾಟ್ಟಂ, ಸತ್ರಿಯಾ ಹಾಗೂ ಒಡಿಸ್ಸಿ ನೃತ್ಯವೂ ಸಹ ಒಂದಾಗಿದೆ. ಒಡಿಸ್ಸಿ ನೃತ್ಯ ಇಂದ್ರಿಯ ಮತ್ತು ಭಾವಗೀತಾತ್ಮಕ ನೃತ್ಯ ಪ್ರಾಕಾರವಾಗಿದೆ.

ಪ್ರೀತಿಯ ನೃತ್ಯವೆಂದು ಪರಿಗಣಿಸಲ್ಪಟ್ಟ ಇದು ಜೀವನದ ಮಾನವ ಮತ್ತು ದೈವಿಕ ಅಂಶಗಳನ್ನು ಸ್ಪರ್ಶಿಸುತ್ತದೆ. ಇದು ಜೀವನದ ಸೂಕ್ಷ್ಮತೆಗಳನ್ನು ಹಾಗೂ ಲೌಕಿಕತೆಯನ್ನು ಸಹ ಸ್ಪರ್ಶಿಸುತ್ತದೆ. ಇದೊಂದು ಶೈಲೀಕೃತ ಭಾರತೀಯ ನೃತ್ಯವಾಗಿದ್ದು, ಸ್ವಲ್ಪ ಮಟ್ಟಿಗೆ ಸ್ಥಾಪಿತ ನಾಟ್ಯ ಶಾಸ್ತ್ರ ಮತ್ತು ಅಭಿನಯ ದರ್ಪಣವನ್ನು ಅವಲಂಬಿಸಿದೆ.

**ರುದ್ರಾಕ್ಷ ಫೌಂಡೇಶನ್:** ಒರಿಸ್ಸಾದ ರುದ್ರಾಕ್ಷ್ ಫೌಂಡೇಶನ್‌ನ ನೃತ್ಯ ಪಟುಗಳು ಈ ನೃತ್ಯ ಪ್ರದರ್ಶಿಸಲಿದ್ದಾರೆ. ಈ ನೃತ್ಯಪಟುಗಳು ಸುಮಾರು 30ಕ್ಕೂ ಅಧಿಕ ದೇಶಗಳಲ್ಲಿ ನೃತ್ಯ ಪ್ರದರ್ಶಿಸಿದ್ದಾರೆ. ಈ ಸಂಸ್ಥೆಯು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಪ್ರಶಸ್ತಿ, ಪುರಸ್ಕಾರಕ್ಕೆ ಭಾಜನವಾಗಿದೆ.

ರುದ್ರಾಕ್ಷ ಫೌಂಡೇಶನ್ ಅನ್ನು ಗುರು ಶ್ರೀ ಬಿಚಿತ್ರಾನಂದ ಸ್ವೈನ್ ಅವರು 2000ರಲ್ಲಿ ಸ್ಥಾಪಿಸಿದರು. ಈ ಫೌಂಡೇಶನ್ ಒರಿಸ್ಸಾ ಮತ್ತು ಭಾರತದಾದ್ಯಂತ ಸಂಸ್ಕೃತಿ ಮತ್ತು ಕಲೆಯ ಪ್ರಮುಖ ಕೇಂದ್ರಗಳಲ್ಲಿ ಒಂದಾಗಿ ಉದಯಿಸಿದೆ. ಇಲ್ಲಿ ಕಲೆ ಮತ್ತು ನೃತ್ಯವು ಸೇರಿ ಪ್ರದರ್ಶನ ಕಲೆಗಳ ಶುದ್ಧ ಸಾಕಾರವನ್ನು ರಚಿಸುತ್ತದೆ. ಕಲಾತ್ಮಕ ಅಭಿವ್ಯಕ್ತಿ, ಸ್ಪಷ್ಟತೆ ಮತ್ತು ನಿಖರತೆಯಲ್ಲಿ ಪರಿಪೂರ್ಣತೆಯನ್ನು ಫೌಂಡೇಶನ್ ಉದ್ದೇಶಿಸುತ್ತದೆ.

**ಗಿನ್ನೆಸ್ ರೆಕಾರ್ಡ್‌ನ ಬಿಹು ನೃತ್ಯ:** ಅಸ್ಸಾಂನ ಜಾನಪದ ನೃತ್ಯವಾದ ಬಿಹು ನೃತ್ಯವು ಬಿಹು ಹಬ್ಬಕ್ಕೆ ಸಂಬಂಧಿಸಿದೆ. ಈ ನೃತ್ಯವು ಗಿನ್ನೆಸ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ಮಾಡಿದೆ.

2023ರಲ್ಲಿ ಅಸ್ಸಾಂನ ಸರುಸಜೈ ಕ್ರೀಡಾಂಗಣದಲ್ಲಿ 11,304 ನೃತ್ಯಗಾರರನ್ನು ಒಳಗೊಂಡ ಬೃಹತ್ ತಂಡ ಹಾಗೂ ಡ್ರಮ್ಮರ್‌ಗಳು ಒಂದೇ ಸ್ಥಳದಲ್ಲಿ ಬಿಹು ನೃತ್ಯವನ್ನು ಮಾಡುವ ಮೂಲಕ ಗಿನ್ನೆಸ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ ಮಾಡಿದ್ದಾರೆ. ಈ ನೃತ್ಯ ಕಾರ್ಯಕ್ರಮದಲ್ಲಿ ನಬಮಲ್ಲಿಕಾ ಭಾಗಬತಿ ಅವರ ಅಸ್ಸಾಂನ ರಂಗಧಾಲಿ ಡ್ಯಾನ್ಸ್ ಟ್ರೂಪ್‌ನ ನೃತ್ಯಪಟುಗಳೂ ಸಹ ಪಾಲ್ಗೊಂಡಿದ್ದರು. ಈ ನೃತ್ಯಪಟುಗಳೇ ಶಿವಮೊಗ್ಗದಲ್ಲೂ ಬಿಹು ನೃತ್ಯ ಪ್ರದರ್ಶಿಸುತ್ತಿರುವುದು ಅತ್ಯಂತ ವಿಶೇಷವಾಗಿದೆ.

ಆಸಕ್ತರು ಈ ನೃತ್ಯ ಮಹೋತ್ಸವದಲ್ಲಿ ಪಾಲ್ಗೊಂಡು ಕಣ್ಮನ ತುಂಬಿಕೊಳ್ಳಬಹುದಾಗಿದೆ.

**ಲೇಖಕರು:**
**ರೇಖಾ ಪ್ರವೀಣ್**

# ರೇಷ್ಮೆ ಕೃಷಿ ಕೂಡ ಲಾಭದಾಯಕ

## ಡಾ. ಮಂಜಪ್ಪ ಮಾಹಿತಿ । ನನ್ನ ರೇಷ್ಮೆ ನನ್ನ ಹೆಮ್ಮೆ ಅಭಿಯಾನ

**ಜಗಳೂರು:** ದಾಳಿಂಬೆ, ಪಪ್ಪಾಯಿಯಂತೆ ರೇಷ್ಮೆ ಕೂಡ ಲಾಭದಾಯಕ ಬೆಳೆಯಾಗಿದ್ದು, ರೈತರು ರೇಷ್ಮೆ ಬೆಳೆಗೆ ಒತ್ತು ನೀಡುವಂತೆ ಮೈಸೂರಿನ ಕೇಂದ್ರ ರೇಷ್ಮೆ ಹಾಗೂ ಸಂಶೋಧನಾ ಹಾಗೂ ತರಬೇತಿ ಸಂಸ್ಥೆ ವಿಜ್ಞಾನಿ ಡಾ. ಮಂಜಪ್ಪ ಹೇಳಿದರು.

ತಾಲೂಕಿನ ದೊಡ್ಡಬೊಮ್ಮನಹಳ್ಳಿ ಗ್ರಾಮದಲ್ಲಿ ಇತ್ತೀಚೆಗೆ ಕೇಂದ್ರ ರೇಷ್ಮೆ ಮಂಡಳಿ ಹಾಗೂ ರಾಜ್ಯ ರೇಷ್ಮೆ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ನನ್ನ ರೇಷ್ಮೆ ನನ್ನ ಹೆಮ್ಮೆ ಅಭಿಯಾನ ಉದ್ಘಾಟಿಸಿ ಮಾತನಾಡಿದರು. ರೇಷ್ಮೆ ಬೆಳೆ ರೈತರ ಪಾಲಿಗೆ ವರದಾನವಾಗಿದ್ದು, ವೈಜ್ಞಾನಿಕ ವಿಧಾನಗಳನ್ನು ಅಳವಡಿಸಿಕೊಂಡು ಪರಿಸರ ಮತ್ತು ಹವಾಗುಣಕ್ಕೆ ತಕ್ಕಂತೆ ರೈತರು ರೇಷ್ಮೆ ಹುಳು ಸಾಕಿದರೆ ಆರ್ಥಿಕವಾಗಿ ಸಬಲರಾಗಲು ಸಾಧ್ಯವಾಗುತ್ತದೆ ಎಂದರು.



ಹೊಸದಾಗಿ ಹೊರ ತರಲಿರುವ ಹಿಪ್ಪುನೇರಳೆ ತಳಿಗಳು, ಮಣ್ಣಿನ ಆರೋಗ್ಯ, ಹಿಪ್ಪು ನೇರಳೆ ಬೇಸಾಯ ದಲ್ಲಿ ನೂತನ ಅವಿಷ್ಕಾರಗಳ ಕುರಿತು ರೈತರಿಗೆ ಮಾಹಿತಿ ನೀಡಿದರು. ದಾವಣಗೆರೆಯ ತೋಳಹುಣಸೆ ರೇಷ್ಮೆ ತರಬೇತಿ ಸಂಸ್ಥೆಯ ಸಹಾಯಕ ನಿರ್ದೇಶಕ ಹರ್ಷಾ ಮಾತನಾಡಿ, ರೇಷ್ಮೆ ಹುಳು ಸಾಕಾಣಿಕೆ, ಸಮಗ್ರ ರೋಗ ಹಾಗೂ ಕೀಟಗಳ ನಿರ್ವಹಣೆ, ಸೋಂಕು ನಿವಾರಣೆ ಹಾಗೂ ರೇಷ್ಮೆ ಆರ್ಥಿಕ ಲಾಭಗಳ ಕುರಿತು ರೈತರೊಂದಿಗೆ ಚರ್ಚಿಸಿದರು. ಜಿಪಂ ರೇಷ್ಮೆ ಉಪನಿರ್ದೇಶಕ ಪಿ.ಎಲ್. ಚಂದ್ರಪ್ಪ ಮಾತನಾಡಿ, ರೇಷ್ಮೆ ಬೆಳೆಯುವುದರಿಂದ ಸಿಗುವ ಸರ್ಕಾರದ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

**ಜಗಳೂರು ತಾಲೂಕಿನ ದೊಡ್ಡಬೊಮ್ಮನಹಳ್ಳಿ ಗ್ರಾಮದಲ್ಲಿ ಮಂಗಳವಾದ ಹಮ್ಮಿಕೊಂಡಿದ್ದ ನನ್ನ ರೇಷ್ಮೆ ನನ್ನ ಹೆಮ್ಮೆ ಅಭಿಯಾನದಲ್ಲಿ ಪ್ರಾತ್ಯಕ್ಷಿಕೆ ಪಿ.ಎಲ್ ಚಂದ್ರಪ್ಪ ಜೆ.ವಿ ಬಾಲಸುಬ್ರಹ್ಮಣ್ಯ ಜೋಯಸ್ ಇದ್ದರು**

# ಈಶ್ವರಿ ವಿದ್ಯಾಲಯದಿಂದ ಆಗಷ್ಟ 25 ರಂದು ಮ್ಯಾರಾಥಾನ್ ನಡಿಗೆ : ಪ್ರಜಾಪಿತ ಈಶ್ವರಿ ವಿದ್ಯಾಲಯದ ಭಾರತಿ ಅಕ್ಕ

**ಜಗಳೂರು** :ವಿಶ್ವ ಬಂಧುತ್ವ ದಿನಾಚರಣೆ ಅಂಗವಾಗಿ ಆಗಷ್ಟ 25 ರಂದು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮ್ಯಾರಾಥಾನ್ ನಡೆಸಲಾಗುವುದು ಎಂದು ಪ್ರಜಾಪಿತ ಈಶ್ವರಿ ವಿದ್ಯಾಲಯದ ಭಾರತಿ ಅಕ್ಕ ತಿಳಿಸಿದರು.

ಪಟ್ಟಣದ ಪತ್ರಿಕಾಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಈಶ್ವರಿ ವಿದ್ಯಾಲಯದ ಗುರುಗಳಾದ ದಾದಿ ಪ್ರಕಾಶಮಣಿಜಿ ದೇಹತ್ಯಾಗಮಾಡಿ 17 ವರ್ಷದ ಪುಣ್ಯಸ್ಮರಣೆಯೊಂದಿಗೆ ಸಮಾಜದಲ್ಲಿ ಸಹಭಾಗಿತ್ವ, ಸಾಮರಸ್ಯ, ಉತ್ತಮ ಸಂದೇಶ, ಮೌಲ್ಯಯುತ ಮಾದರಿ ಜೀವನ ಸಾಗಿಸಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಶಾಸಕ ಬಿ.ದೇವೇಂದ್ರಪ್ಪ, ಅಖಿಲ ಭಾರತ ವೀರಶೈವ ಸಮಾಜದ ತಾಲೂಕು ಅಧ್ಯಕ್ಷ ಅಜ್ಜಪ್ಪನಾಡಿಗರ್, ಯುವಮುಖಂಡ ಬಿಸ್ತುವಳ್ಳಿಬಾಬು, ತಹಶೀಲ್ದಾರ್ ಸೈಯದ್ ಕಲೀಂ ಉಲ್ಲಾ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ. ಈಶ್ವರಿ ವಿದ್ಯಾಲಯದಿಂದ ಆ.25 ರಂದು ಮ್ಯಾರಾಥಾನ್ ನಡಿಗೆ ಬೆಳಿಗ್ಗೆ 8 ಗಂಟೆ ಆರಂಭವಾಗಿ ಪಟ್ಟಣದ



ವಿದ್ಯಾನಗರದಿಂದ ಅಂಬೇಡ್ಕರ್ ಸರ್ಕಲ್ ಮೂಲಕ ಪಟ್ಟಣದ ವಿವಿಧ ಬಡವಾಣೆಗಳ ಮೂಲಕ ಸಾಗಿ ಪುನ ಈಶ್ವರಿ ವಿದ್ಯಾಲಯಕ್ಕೆ ಆಗಮಿಸಲಾಗುತ್ತದೆ. ನಂತರ 10 ಗಂಟೆ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಯುವಕ, ಯುವತಿಯರು ಭಾಗವಹಿಸಬೇಕೆಂದು ಅವರು ಮನವಿ ಮಾಡಿದ್ದಾರೆ. ಮ್ಯಾರಾಥಾನ್ ನಲ್ಲಿ ಯುವಕರು ಹೆಸರು ನೊಂದಣಿಗಾಗಿ ಮೊ.ಸಂಖ್ಯೆ: 8971123077,7411670195, ಗಳಿಗೆ ಸಂಪರ್ಕಿಸಲು ಅವರು ಮಾಹಿತಿ ನೀಡಿದರು.

# ಅಲೆಮಾರಿಗಳಿಗೆ ಮತ್ತೆ ಅನ್ಯಾಯ - ಡಿ.ರಂಗಯ್ಯ ಆತಂಕ

**ಬಳ್ಳಾರಿ:** ಜಸ್ಟೀಸ್ ನಾಗಮೋಹನ್ ದಾಸ್ ಅವರ ವರದಿಯನ್ವಯ ಅತಿ ಸೂಕ್ಷ್ಮ ಸಮುದಾಯಗಳಿಗೆ ರಾಜ್ಯ ಸರ್ಕಾರ ನ್ಯಾಯ ಒದಗಿಸಿಕೊಡುವ ಕೆಲಸ ಮಾಡಬೇಕಿತ್ತು. ಬದಲಾಗಿ ಪರಿಶಿಷ್ಟ ಜಾತಿಯ ಸಿ ವರ್ಗದ ಬಲಾಢ್ಯ ಸಮುದಾಯಗಳೊಂದಿಗೆ ಅತಿ ಸೂಕ್ಷ್ಮ ಸಮುದಾಯಗಳನ್ನು ಸೇರ್ಪಡೆ ಮಾಡಿ ಒಳ ಮೀಸಲಾತಿ ಜಾರಿಗೊಳಿಸಿದ್ದಾರೆ. ಇದರಿಂದಾಗಿ ಅಲೆಮಾರಿ ಸಮುದಾಯಗಳು ಮತ್ತೆ ಅನ್ಯಾಯಕ್ಕೊಳಗಾಗಬೇಕಾಗಿದೆ ಎಂದು ಎಸ್.ಸಿ., ಎಸ್.ಟಿ., ಅಲೆಮಾರಿ ಬುಡಕಟ್ಟು ಮಹಾಸಭಾ ಮತ್ತು ಜಿಲ್ಲಾ ಚನ್ನದಾಸರ ಸಂಘದ ಪ್ರಧಾನ ಕಾರ್ಯದರ್ಶಿ ಡಿ.ರಂಗಯ್ಯ ತಮ್ಮ ನೋವನ್ನು ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕಳೆದ 2016ರಲ್ಲಿ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈ ಎಸ್.ಸಿ., ವಿಭಾಗದ 51 ಸಮುದಾಯಗಳು, ಎಸ್.ಟಿ., ವಿಭಾಗದ 23 ಸಮುದಾಯಗಳು ಎಲ್ಲ ಸೇರಿ 74 ಸಮುದಾಯಗಳ ಕೋಶ ರಚನೆ ಮಾಡಿದ್ದರು. 150 ಕೋಟಿ ರೂ. ಹಣವನ್ನು ಮೀಸಲಿರಿಸಿ ಅಲೆಮಾರಿ ಮತ್ತು ಅರೆ ಅಲೆಮಾರಿ ಬುಡಕಟ್ಟು ಸಣ್ಣ ಸಮುದಾಯಗಳ ಸಬಲೀಕರಣಕ್ಕೆ ಉದ್ದೇಶಿಸಿದ್ದರು. ಈಗ ಸಿ ಗುಂಪಿನ ಸಮುದಾಯಗಳೊಂದಿಗೆ ಎಸ್.ಸಿ., ಎಸ್.ಟಿ., ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯಗಳನ್ನು ಸೇರ್ಪಡೆ ಮಾಡಿರುವುದರಿಂದ ಈ ಸಮುದಾಯಗಳಿಗೆ ಸರ್ಕಾರದ ಯಾವುದೇ ಯೋಜನೆಗಳು ಲಭಿಸುವುದು ಕಷ್ಟವಾಗುತ್ತದೆ. ಇವರಿಗೆ ಸಿಗುವ ಸೌಲಭ್ಯಗಳೂ ಶೂನ್ಯವಾಗಲಿವೆ ಎಂದು ಡಿ.ರಂಗಯ್ಯ ಕಳವಳ ವ್ಯಕ್ತಪಡಿಸಿದ್ದಾರೆ.



ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಾಮಾಜಿಕ ನ್ಯಾಯದ ಹರಿಕಾರರೆನ್ನುವುದರಲ್ಲಿ ಎರಡು ಮಾತಿಲ್ಲ. ಜಸ್ಟೀಸ್ ನಾಗಮೋಹನ್ ದಾಸ್ ಅವರು ಎಸ್.ಸಿಯಲ್ಲಿ ಬರುವ 101 ಸಮುದಾಯಗಳನ್ನು ಐದು ವರ್ಗ ಮಾಡಿ ವಿಂಗಡಿಸಿದ್ದರು. ಇದೇ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದರು. ಈಗ ಆ.19 ರಂದು ಜಾರಿಗೊಳಿಸಿದ ಒಳ ಮೀಸಲಾತಿಯಲ್ಲಿ ಎ,ಬಿ.ಸಿ. ಗುಂಪುಗಳನ್ನು ಮಾಡಿ ಎಸ್.ಸಿ., ಎಸ್.ಟಿ., ಅಲೆಮಾರಿ ಮತ್ತು ಅರೆ ಅಲೆಮಾರಿ ಬುಡಕಟ್ಟು ಸಮುದಾಯಗಳನ್ನು ಸಿ ಗುಂಪಿನಲ್ಲಿ ಸೇರ್ಪಡೆಗೊಳಿಸಿದ್ದಾರೆ. ಸಿ ಗುಂಪಿನಲ್ಲಿರುವ ಬಲಾಢ್ಯ ಸಮುದಾಯಗಳಾದ ಕೊರಮ, ಕೊರಚ, ಭೋವಿ ಮತ್ತು ಲಂಬಾಣಿ ಸಮುದಾಯಗಳೊಂದಿಗೆ ಈ ಸಮುದಾಯಗಳನ್ನು ಸೇರಿಸಿದ್ದಾರೆ. ಈಗಾಲೇ ಈ ನಾಲ್ಕೂ ಸಮುದಾಯಗಳು ಶೈಕ್ಷಣಿಕವಾಗಿ ಪ್ರಗತಿ ಪಥದಲ್ಲಿದ್ದು ಸರ್ಕಾರಿ ಸೌಲಭ್ಯಗಳು ಮತ್ತು ರಾಜಕೀಯ ಸೌಕರ್ಯಗಳನ್ನು ಪಡೆಯುತ್ತಿದ್ದಾರೆ. ಇದೇ ಸಮುದಾಯಗಳೊಂದಿಗೆ ಎಸ್.ಸಿ., ಎಸ್.ಟಿ., ಅಲೆಮಾರಿ, ಅರೆ ಅಲೆಮಾರಿ ಮತ್ತು ಬುಡಕಟ್ಟು ಸಮುದಾಯಗಳನ್ನು ಸೇರ್ಪಡೆ ಮಾಡಿದರೆ ಸರ್ಕಾರದ ಸವಲತ್ತುಗಳಿಂದ ಮತ್ತೆ ಈ ವಂಚಿತವಾಗುತ್ತವೆ ಎನ್ನುವ ಆತಂಕವನ್ನು ಡಿ.ರಂಗಯ್ಯ ವ್ಯಕ್ತಪಡಿಸಿದ್ದಾರೆ.

ಪ್ರಸ್ತುತ ಸರ್ಕಾರ ಎ.ಬಿ.ಸಿ. ಈ ಮೂರು ಗುಂಪುಗಳಾಗಿ ವಿಂಗಡಿಸಿದ್ದು ಎಡ-ಶೇ 6, ಬಡ-ಶೇ6 ಮತ್ತು ಸಿ-ಶೇ 5 ವಿಂಗಡಣೆ ಮಾಡಲಾಗಿದೆ. ಆದರೆ ಸಿ ಪಂಗಡಗಳಲ್ಲಿರುವ ಬಲಾಢ್ಯ ಸಮುದಾಯಗಳೊಂದಿಗೆ ಅಲೆಮಾರಿಗಳು ಪೈಪೋಟಿ ಮಾಡಲು ಸಾಧ್ಯವಾಗದೇ ಇರುವ ಪರಿಸ್ಥಿತಿ ಸೃಷ್ಟಿಯಾಗಿದೆ. ಶೈಕ್ಷಣಿಕ, ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಅತ್ಯಂತ ಹಿಂದುಳಿದ ಅಲೆಮಾರಿ ಸಮುದಾಯಗಳನ್ನು ಸಿ ವರ್ಗದಿಂದ ಬೇರ್ಪಡಿಸಿ, ಜಸ್ಟೀಸ್ ನಾಗಮೋಹನ್ ದಾಸ್ ಅವರು ಸೂಕ್ಷ್ಮ ಸಮುದಾಯಗಳೆಂದು ಗುರುತಿಸಿ ಎ ಗುಂಪಾಗಿ ಪರಿಗಣಿಸಿ ಶೇ 1 ಮೀಸಲಾತಿ ಇರಿಸಿದ್ದರು. ಅದನ್ನೇ ಮುಂದುವರಿಸಬೇಕು. ಈ ವಿಷಯವಾಗಿ ಎಡ ಮತ್ತು ಬಲ ಪಂಥದ ಸಮುದಾಯದ ಎಲ್ಲ ನಾಯಕರು ಮತ್ತು ಧುರೀಣರು ಕೂಡ ನಮ್ಮ ಮನವಿಗೆ ಸ್ಪಂದಿಸಿದ್ದಾರೆ. ಚಲನಚಿತ್ರ ನಿರ್ದೇಶಕರಾದ ಬರಗೂರು ರಾಮಚಂದ್ರಪ್ಪ, ಚಿತ್ರನಟ ಚೇತನ್ ಅಹಿಂಸಾ ಸೇರಿದಂತೆ ಅನೇಕ ಸಾಮಾಜಿಕ ಹೋರಾಟಗಾರರು ಬೆಂಬಲ ವ್ಯಕ್ತಪಡಿಸಿದ್ದಾರೆ. ಅವರಿಗೆ ಧನ್ಯವಾದಗಳನ್ನು ಸಲ್ಲಿಸುವುದಾಗಿ ಹೇಳಿದ ಡಿ.ರಂಗಯ್ಯ ಅವರು, ಮುಖ್ಯಮಂತ್ರಿಗಳು ಅವನತಿಯ ಹಾದಿಯಲ್ಲಿರುವ ಈ ನಮ್ಮ ಸಮುದಾಯಗಳ ಬಗ್ಗೆ ಕಾಳಜಿ ವಹಿಸುತ್ತಾರೆಂಬ ನಂಬಿಕೆ ಇದೆ. ಇಲ್ಲದೇ ಹೋದರೆ ಮತ್ತೆ ಹೋರಾಟದ ಹಾದಿ ಹಿಡಿಯಬೇಕಾಗುತ್ತದೆ ಎಂದು ಅವರು ತಿಳಿಸಿದ್ದಾರೆ

# ಬ್ಯಾಟರಿ ಚಾಲಿತ ವಾಹನಗಳಿಗೆ ರಹದಾರಿ ಪಡೆಯಲು ಸೂಚನೆ

**ಚಿಕ್ಕಮಗಳೂರು:** ಬ್ಯಾಟರಿ ಚಾಲಿತ ವಾಹನಗಳಿಗೆ ರಹದಾರಿ ಪಡೆಯುವಂತೆ ಕರ್ನಾಟಕ ರಾಜ್ಯ ಸರ್ಕಾರದ ಸಚಿವಾಲಯ ಅಧಿಸೂಚನೆ ಹೊರಡಿಸಿದ್ದು, ಶುಲ್ಕ ರಹಿತವಾಗಿ ರಹದಾರಿ ಪಡೆಯಲು ಅವಕಾಶವಿರುವುದನ್ನು ಖಚಿತಪಡಿಸಿದೆ.

ಈ ಕುರಿತು ಪ್ರಕಟಣೆಯೊಂದನ್ನು ನೀಡಿರುವ ಪ್ರಾದೇಶಿಕ ಸಾರಿಗೆ ಇಲಾಖೆ, ಹೊಸದಾಗಿ ನೋಂದಣಿಯಾಗುವ ಮತ್ತು ಈಗಾಗಲೇ ನೋಂದಣಿಯಾಗಿರುವ ಬ್ಯಾಟರಿ ಚಾಲಿತ, ಮೆಥನಾಲ್ ಮತ್ತು ಇಥನಾಲ್ ಇಂಧನ ಬಳಸಿ ಇದುವರೆಗೆ ರಹದಾರಿ ಪಡೆಯದೆ ಸಂಚರಿಸುತ್ತಿರುವ ಎಲ್ಲಾ ಸಾರಿಗೆ ವಾಹನಗಳಿಗೆ ಸಂಬಂಧಿಸಿದ ರಹದಾರಿಯನ್ನು ಮಂಜೂರು ಮಾಡಲು ಹಾಗೂ ವಿತರಿಸಲು ಜುಲೈ 29 ರಂದೇ ತಿಳಿಸಲಾಗಿತ್ತು.

ಈ ಸಂಬಂಧದ ಸರ್ಕಾರದ ಅಧಿಸೂಚನಾ ಪತ್ರದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಮೋಟಾರು ವಾಹನಗಳ ಕಾಯ್ದೆ 1988 ರ ಕಲಂ 66(3) (ಎನ್) ಮತ್ತು ಸದರಿ ಕಾಯ್ದೆಯ ಕಲಂ 96 ರಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಈ ಸೂಚನೆ ನೀಡಲಾಗಿದೆ ಎಂದು ಇಲಾಖೆ ಸ್ಪಷ್ಟಪಡಿಸಿದೆ.

# ಚನ್ನಗಿರಿ ತಾಲೂಕು ಮಟ್ಟದ ದಸರಾ ಕ್ರೀಡಾಕೂಟ

## ಆಗಷ್ಟ 25 ರಂದು ಜಗಳೂರು ತಾಲೂಕ್ ಕ್ರೀಡಾಂಗಣದಲ್ಲಿ ನಡೆಯಲಿದೆ

ಜಗಳೂರು : 2025- 26 ನೇ ಸಾಲಿನ ಚನ್ನಗಿರಿ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಆಗಷ್ಟ 25 ರಂದು ತಾಲೂಕು ಪಂಚಾಯಿತಿ ಜಗಳೂರು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಯವರಗಳ ಸಂಯುಕ್ತಶ್ರಯದಲ್ಲಿ ಜಗಳೂರು ತಾಲೂಕ್ ಕ್ರೀಡಾಂಗಣದಲ್ಲಿ ನಡೆಯಲಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಜಗಳೂರು ತಾಲೂಕ್ ಕ್ರೀಡಾಧಿಕಾರಿಗಳಾದ ಸುನಿತಾ ಎಂ.ಸಿ. ತಿಳಿಸಿದ್ದಾರೆ.

.ಅಥ್ಲೆಟಿಕ್ಸ್ ಸ್ಪರ್ಧೆಗಳು: ಪುರುಷರಿಗೆ 100 ಮೀ, 200 ಮೀ, 400 ಮೀ, 800 ಮೀ, 1500 ಮೀಟರ್ ಓಟ, 5000 ಮೀಟರ್ ಓಟ, 10,000 ಮೀಟರ್ ಓಟ, ಉದ್ದ ಜಿಗಿತ, ಎತ್ತರ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವೆಲಿನ್ ತ್ರೋ, ಡಿಸ್ಕಸ್ ಥ್ರೋ, 110 ಮೀಟರ್ ಹರ್ಡಲ್ಸ್, ನಾಲ್ಕು ಎಂಟು ನೂರು 4*100 ಮೀಟರ್ ರಿಲೇ, 4 * 400 ಮೀಟರ್ ರಿಲೇ

ಮಹಿಳೆಯರಿಗೆ: 100 ಮೀಟರ್, 200 ಮೀಟರ್, 400 ಮೀಟರ್, 800 ಮೀಟರ್, 1500 ಮೀಟರ್ ಓಟ, 3000 ಮೀಟರ್ ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವೆಲಿನ್ ತ್ರೋ, ಡಿಸ್ಕಸ್ ಥ್ರೋ, 100 ಮೀಟರ್ ಹರ್ಡಲ್ಸ್, 4 * 100 ಮೀಟರ್ ರಿಲೇ, 4 * 400 ಮೀಟರ್ ರಿಲೇ. ಮಹಿಳೆಯರ ಅಥ್ಲೆಟಿಕ್ಸ್ ಮಹಿಳೆಯರಿಗೆ ಸ್ಪರ್ಧೆಗಳಾಗಿವೆ. ಪುರುಷರಿಗೆ ಪುಟ್ಬಾಲ್ , ಪುರುಷ ಮತ್ತು ಮಹಿಳೆಯರಿಗೆ ವಾಲಿಬಾಲ್, ಖೋ ಖೋ, ಕಬ್ಬಡಿ, ತ್ರೋಬಾಲ್, ವೀರಭದ್ರಾಸನ, ಜಾನು ಶಿರ್ಷಾಸನ, ಹಲಾಸನ, ಧನುರಾಸನ ಯೋಗಾಸನಗಳು ನಡೆಯಲಿವೆ.

ಸದರಿ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಕಡ್ಡಾಯವಾಗಿ ಆನ್ಲೈನ್ ಮುಖಾಂತರ Dasara Registration App link. https: // main.d1O9hjbrd8psy4.amplifyapp.com/KA-shorts/ ನಲ್ಲಿ ದಿನಾಂಕ 25.08.2025ರ ಒಳಗಾಗಿ ನೊಂದಣಿ ಮಾಡಿ ವಿವರವನ್ನು ದಿನಾಂಕ 25-8 25 ರಂದು ಬೆಳಿಗ್ಗೆ 9:00 ತಾಲೂಕ್ ಕ್ರೀಡಾಂಗಣ ಜಗಳೂರಲ್ಲಿ ಸಂಘಟಕರಲ್ಲಿ ನೀಡಿ ವರದಿ ಮಾಡಿಕೊಳ್ಳಲು ಸೂಚಿಸಲಾಗಿದೆ. ಸದರಿ ಕ್ರೀಡಾಕೂಟದಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದವರು ಹಾಗೂ ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದವರನ್ನು ಜಿಲ್ಲಾ ಮಟ್ಟಕ್ಕೆ ಕಳುಹಿಸಿ ಕೊಡಲಾಗುವುದು. ತಾಲೂಕು ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಆಯಾ ಜಿಲ್ಲೆಯ ಕ್ರೀಡಾಪಟುಗಳು ಮಾತ್ರ ಭಾಗವಹಿಸಲು ಅವಕಾಶವಿರುತ್ತದೆ. ಕ್ರೀಡಾಪಟುಗಳು ಪ್ರತಿನಿಧಿಸುವ ತಾಲೂಕಿನ ಸ್ಥಳೀಯವಾದ ದೃಢೀಕರಣದ ಬಗ್ಗೆ ದಾಖಲೆಗಳನ್ನು ನೀಡುವುದು, ಶಾಲಾ ಬಾರ್ ಕಾಲೇಜಿನ ಗುರುತಿನ ಚೀಟಿ, ಆಧಾರ್ ಕಾರ್ಡ್, ರೇಷನ್ ಕಾರ್ಡ್, ಮತದಾರರ ಗುಡಿತಿನ ಚೀಟಿ, ಸರ್ಕಾರದಿಂದ ಅಧಿಕೃತ ಇರುವ ಗುರಿತಿನ ಚೀಟಿಗಳನ್ನು ನೀಡಬೇಕು. ಹೆಚ್ಚಿನ ವಿವರಗಳಿಗೆ ಶ್ರೀಮತಿ ಸುನಿತಾ ಎಂ ಸಿ 9972464313, ಬಡಪ್ಪ 9801860439 ಇವರನ್ನು ಸಂಪರ್ಕ ಸಬಹುದು ಎಂದು ಸುನಿತಾ ಅವರು ಮನವಿ ಮಾಡಿದ್ದಾರೆ.

# ಮೈಸೂರು ಕಾವಾ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಮೈಸೂರು ವಿಶ್ವವಿದ್ಯಾನಿಲಯಕ್ಕೆ ಶಾಶ್ವತ ಸಂಯೋಜನೆಗೊಂಡಿರುವ ಮೈಸೂರು ಸಿದ್ಧಾರ್ಥನಗರದಲ್ಲಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿ(ಕಾವಾ)ನಲ್ಲಿ ಮಾಸ್ಟರ್ ಆಫ್ ವಿಜ್ಯುಯಲ್ ಆರ್ಟ್ಸ್ (ಎರಡು ಶೈಕ್ಷಣಿಕ ವರ್ಷದ ನಾಲ್ಕು ಸೆಮಿಸ್ಟರ್ ಸಿ.ಬಿ.ಸಿ.ಎಸ್ ಪದ್ಧತಿ) ದೃಶ್ಯ ಕಲೆಯಲ್ಲಿ 2025-26ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಸ್ನಾತಕೋತ್ತರ ಪದವಿ ಪ್ರವೇಶಾತಿಗಾಗಿ ಬಿ.ವಿ.ಎ. ಸ್ನಾತಕ ಪದವಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ಆಫ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಸ್ನಾತಕೋತ್ತರ ಪದವಿಯಲ್ಲಿ ಚಿತ್ರಕಲೆ ವಿಭಾಗ, ಗ್ರಾಫಿಕ್ಸ್ ವಿಭಾಗ ಮತ್ತು ಶಿಲ್ಪಕಲೆ ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕೋತ್ತರ ಪದವಿ ಸೇರಿದೆ. ಪ್ರಥಮ ವರ್ಷದ ಮಾಸ್ಟರ್ ಆಫ್ ವಿಜ್ಯುಯಲ್ ಆರ್ಟ್ಸ್ (ಎಂ.ವಿ.ಎ) ಪ್ರವೇಶಾತಿಗಾಗಿ ಚಿತ್ರಕಲೆ ವಿಭಾಗ, ಗ್ರಾಫಿಕ್ಸ್ ವಿಭಾಗ ಮತ್ತು ಶಿಲ್ಪಕಲೆ ವಿಭಾಗಗಳಿಗೆ ಕಚೇರಿಯಿಂದ ಅರ್ಜಿಗಳನ್ನು ಪಡೆದು ಸಲ್ಲಿಸಲು ಆಗಸ್ಟ್ 30 ಅಂತಿಮ ದಿನವಾಗಿದ್ದು, ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಅರ್ಹತಾ ಪರೀಕ್ಷೆ ಹಾಗೂ ವೈಯಕ್ತಿಕ ಸಂದರ್ಶನದ ದಿನಾಂಕವನ್ನು ತಿಳಿಸಲಾಗುವುದು. ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗೆ ಕಾವಾ ಕಾರ್ಯಾಲಯದ ದೂರವಾಣಿ ಸಂಖ್ಯೆ(0821-2438931)ಯನ್ನು ಸಂಪರ್ಕಿಸಬಹುದು ಎಂದು ಕಾಲೇಜಿನ ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಯುವ ಪತ್ರಕರ್ತರಿಗೆ ಕನ್ನಡ ಸಾಹಿತ್ಯಾಭಿರುಚಿ ಶಿಬಿರದಲ್ಲಿ ಹಿರಿಯ ಪತ್ರಕರ್ತ ದಿನೇಶ್ ಅಮಿನ್‌ಮಟ್ಟು ಅಭಿಮತ

# ಸೃಜನಶೀಲ ಬರವಣಿಗೆಗೆ ಸಾಹಿತ್ಯ ಓದು ಅಗತ್ಯ

**ಚಿತ್ರದುರ್ಗ :** ಪತ್ರಕರ್ತರಾಗಿ ವರದಿಗಳಲ್ಲಿ ಸೃಜನಶೀಲ ಬರವಣಿಗೆ ರೂಢಿಸಿಕೊಳ್ಳಲು ಸಾಹಿತ್ಯದ ಓದು ಅಗತ್ಯವಾಗಿದೆ ಎಂದು ಹಿರಿಯ ಪತ್ರಕರ್ತ ಹಾಗೂ ಮುಖ್ಯಮಂತ್ರಿಗಳ ಮಾಜಿ ಮಾಧ್ಯಮ ಸಲಹೆಗಾರ ದಿನೇಶ್ ಅಮಿನ್‌ಮಟ್ಟು ಹೇಳಿದರು.

ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಶುಕ್ರವಾರ ನಗರದ ಪತ್ರಿಕಾ ಭವನದ ಡಾ. ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಆಯೋಜಿಸಲಾದ "ಯುವ ಪತ್ರಕರ್ತರಿಗೆ ಕನ್ನಡ ಸಾಹಿತ್ಯಾಭಿರುಚಿ ಶಿಬಿರ" ಉದ್ಘಾಟಿಸಿ ಅವರು ಮಾತನಾಡಿದರು.

ಸಾಹಿತ್ಯ ಓದುವುದರಿಂದ ಪತ್ರಕರ್ತರ ಅನುಭವ ಹಾಗೂ ಶಬ್ದ ಸಂಪತ್ತು ವಿಸ್ತಾರಗೊಳ್ಳುತ್ತದೆ. ಈ ಅನುಭವ ಬರವಣಿಗೆಯಲ್ಲಿ ಅಭಿವ್ಯಕ್ತಿಗೊಳ್ಳುವ ಮೂಲಕ ಬರವಣಿಗೆ ತೂಕ ಹೆಚ್ಚುತ್ತದೆ. ಯುವ ಪತ್ರಕರ್ತರು ಸಾಹಿತ್ಯ ಓದುವ ಹವ್ಯಾಸ ಬೆಳಸಿಕೊಳ್ಳಬೇಕು ಎಂದು ದಿನೇಶ್ ಅಮಿನಮಟ್ಟು ತಿಳಿಸಿದರು.

ಕನ್ನಡ ಪತ್ರಿಕೋದ್ಯಮದಲ್ಲಿ ಡಿ.ವಿ. ಗುಂಡಪ್ಪ, ಕಡೆಗೊಡ್ಲು ಶಂಕರಭಟ್ಟ, ಬೆನಗಲ್ ರಾಮರಾಯರು, ಲಂಕೇಶ್ ಸೇರಿದಂತೆ ಸಾಹಿತ್ಯ ನಂಟು ಹೊಂದಿದ್ದ ದಿಗ್ಗಜರು ಪತ್ರಿಕೆಗಳನ್ನು ನಡೆಸಿದ್ದಾರೆ. ಇವರು ವಿಶ್ವ ವಿದ್ಯಾಲಯಗಳಲ್ಲಿ ಪತ್ರಿಕೋದ್ಯಮವನ್ನು ಶಾಸ್ತ್ರೀಯವಾಗಿ ಅಧ್ಯಯನ ಮಾಡಿರಲಿಲ್ಲ. ಇದೇ ರೀತಿ ರಾಷ್ಟ್ರ ಮಟ್ಟದಲ್ಲಿ ಪತ್ರಿಕಾರಂಗದಲ್ಲಿ ಪ್ರಸಿದ್ಧರಾದ ಖುಷ್ವಂತ್‌ಸಿಂಗ್, ವಿನೋದ ಮೆಹ್ತಾ, ರಾಜೀವ್ ಸರ್‌ದೇಸಾಯಿ, ಅರುಣ್ ಶೌರಿಯಂತವರು ಸಹ ಬೇರೆ ವಿಷಯಗಳಲ್ಲಿ ಪದವಿ ಪಡೆದವರು. ಆದರೆ ಇವರೆಲ್ಲರೂ ಸಾಹಿತ್ಯ ಹಾಗೂ ಬರವಣಿಗೆಯ ಮೇಲಿನ ಪ್ರೀತಿಯಿಂದ ಪತ್ರಕರ್ತರಾಗಿ ಕೆಲಸ ಮಾಡಿದ್ದಾರೆ.



ಆಧುನಿಕ ತಂತ್ರಜ್ಞಾನ ಪ್ರಭಾವದಿಂದ ಮೂರ್‍ನಾಲ್ಕು ದಶಕದಲ್ಲಿ ಪತ್ರಕರ್ತರ ವೃತ್ತಿಯ ಸ್ವರೂಪ ತೀವ್ರಗತಿಯಲ್ಲಿ ಬದಲಾಗಿದೆ. ಇಂತಹ ಬದಲಾವಣೆಯನ್ನು ಸಾಹಿತ್ಯ ಕ್ಷೇತ್ರದಲ್ಲೂ ಕಾಣಬಹುದು. ಕೃತಕ ಬುದ್ಧಿಮತ್ತೆ ತಂತ್ರಾಂಶಗಳು ಸೃಜನಶೀಲ ಕ್ಷೇತ್ರವನ್ನು ಪ್ರವೇಶಿಸಿವೆ. ಭಾಷಾಂತರ ತಂತ್ರಾಂಶ ಬಳಕೆಯಿಂದ ಮಾಧ್ಯಮ ಕ್ಷೇತ್ರಕ್ಕೆ ಸಹಕಾರಿಯಾಗಿದೆ. ಇದರ ನಡುವೆಯೂ ಪತ್ರಕರ್ತ ಸೃಜನಶೀಲ ಬರವಣಿಗೆ ಕಲೆಯನ್ನು ರೂಢಿಸಿಕೊಳ್ಳುವುದು ಅಗತ್ಯವಾಗಿದೆ. ಸರಳ ಭಾಷೆಯಲ್ಲಿ ವರದಿಯನ್ನು ಬರೆಯುವ ಮೂಲಕ ಓದುಗರನ್ನು ತಲುಪಬೇಕು. ಸರಳವಾಗಿ ಬರೆಯುವುದು ಸುಲಭದ ಕೆಲಸವಲ್ಲ. ಇದಕ್ಕೆ ಸಾಕಷ್ಟು ಅಧ್ಯಯನದ ಅಗತ್ಯವಿದೆ. ಯುವ ಪತ್ರಕರ್ತರು ರಾಜಕೀಯ, ಸಾಹಿತ್ಯ, ವಿಜ್ಞಾನ, ವೈದ್ಯಕೀಯ, ಸಾಮಾಜಿಕ ವಿಚಾರಗಳನ್ನು ಓದಿ ತಿಳಿದುಕೊಳ್ಳಬೇಕು ಎಂದು ದಿನೇಶ್ ಅಮಿನಮಟ್ಟು ಕಿವಿಮಾತು ಹೇಳಿದರು.

ಇಂದಿನ ಎಲೆಕ್ಟ್ರಾನಿಕ್ ಹಾಗೂ ಮುದ್ರಣ ಮಾಧ್ಯಮದಲ್ಲೂ ಬದಲಾವಣೆ ಬಂದಿದೆ. ಕೇವಲ 250 ಪದಗಳ ಮಿತಿಯಲ್ಲಿ ವರದಿಯನ್ನು ಕಟ್ಟಿಕೊಡುವ ಪರಿಸ್ಥಿತಿಯಿದೆ. ವಿಶ್ಲೇಷಣಾತ್ಮ ವರದಿಗಳು ಕಡಿಮೆಯಾಗಿವೆ. ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯಗಳಲ್ಲಿ ಪ್ರಸ್ತುತ ಮಾಧ್ಯಮ ಕ್ಷೇತ್ರದ ಅಗತ್ಯಕ್ಕೆ ತಕ್ಕಂತೆ ಪಠ್ಯಕ್ರಮ ರೂಪಿಸಬೇಕು. ಕನ್ನಡ ಸಾಹಿತ್ಯವನ್ನು ಒಂದು ವಿಷಯವಾಗಿ ಬೋಧಿಸಬೇಕು. ಎಲೆಕ್ಟ್ರಾನಿಕ್ ಹಾಗೂ ಸಾಮಾಜಿಕ ಮಾಧ್ಯಮ ಕ್ಷೇತ್ರಗಳಲ್ಲಿ ವಿಡಿಯೋ ಎಡಿಟರ್, ಪೋಸ್ಟರ್ ಡಿಜೈನರ್‌ಗಳಿಗೆ ಹೆಚ್ಚಿನ ಬೇಡಿಕೆ ಇದ್ದು ಇವುಗಳ ತರಬೇತಿಯನ್ನು ಸಹ ಪತ್ರಿಕೋದ್ಯಮದಲ್ಲಿ ನೀಡಬೇಕು ಎಂದು ದಿನೇಶ್ ಅಮಿನಮಟ್ಟು ಹೇಳಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಮಾತನಾಡಿ, ಸಾಹಿತ್ಯ ಹಾಗೂ ಇತಿಹಾಸ ಪತ್ರಕರ್ತರಿಗೆ ಬಹಳ ಮುಖ್ಯವಾಗಿದೆ. ದೇಶ, ನಾಡು, ಸಂಸ್ಕೃತಿ ಹಾಗೂ ಭಾಷೆ ಅರಿಯದಿದ್ದಾಗ ಬರವಣಿಗೆ ಕಷ್ಟ ಸಾಧ್ಯ. ಪ್ರಸ್ತುತ ಮೊಬೈಲ್, ಇಂಟರ್‌ನೆಟ್, ಸಾಮಾಜಿಕ ಮಾಧ್ಯಮಗಳ ಜಾಲತಾಣಗಳಿಂದಾಗಿ ಪುಸ್ತಕ ಓದುವ ಹವ್ಯಾಸ ಕಡಿಮೆಯಾಗಿದೆ. ಪತ್ರಿಕೋದ್ಯಮಕ್ಕೂ ಸಾಹಿತ್ಯಕ್ಕೂ ಬಹಳ ನಂಟಿದೆ. ಸಾಹಿತ್ಯದ ಮೂಲಕ ಭಾಷೆಯ ವಿವಿಧ ಲಯ, ಲಹರಿ, ಬೇರೆ ಬೇರೆ ಸಂಸ್ಕೃತಿ, ವೈವಿಧ್ಯತೆ ಇರುವ ನಮ್ಮ ನಾಡಿನಲ್ಲಿ ಪತ್ರಕರ್ತರು ಓದುವ ಮೂಲಕ ಅರಿವು, ಜ್ಞಾನವನ್ನು ಪಡೆಯಬಹುದಾಗಿದೆ. ಪತ್ರಕರ್ತರು ಚಲನಶೀಲತೆ ಮೈಗೂಡಿಸಿಕೊಂಡಾಗ ಮಾತ್ರ ಉತ್ತಮ ಬರಹ ಮೂಡಿಬರಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಬರಹಗಳಲ್ಲಿ ಸತ್ವ ಪಡೆಯಬೇಕಾದರೆ ಲೋಕಾನುಭವ, ಓದು ಬಹಳ ಮುಖ್ಯವಾಗಲಿದೆ. ಅಕ್ಷರ ರೂಪಗಳಿಗೆ ಸ್ಪರ್ಶ ನೀಡಬೇಕಾದರೆ ಓದಿನ ಜತೆಗೆ ಸೃಜನಶೀಲತೆಯು ಮುಖ್ಯ. ಈ ಹಿನ್ನಲೆಯಲ್ಲಿ ಯುವ ಪತ್ರಕರ್ತರಿಗೆ ಸಾಹಿತ್ಯಾಭಿರುಚಿ ಶಿಬಿರ ಆಯೋಜಿಸುವುದು ಉತ್ತಮ ಬೆಳವಣಿಗೆ. ಓದುಗರನ್ನು ಸೆಳೆಯುವಂತಹ ಉತ್ತಮ ಬರಹವನ್ನು ರೂಢಿಸಿಕೊಳ್ಳಬೇಕು. ಅಂತಹ ಗಟ್ಟಿ ಬರಹವನ್ನು ರೂಢಿಸಿಕೊಳ್ಳಲು ಪತ್ರಕರ್ತರಿಗೆ ಇಂತಹ ಶಿಬಿರಗಳು ಬಹಳ ಪ್ರಯೋಜನವಾಗಲಿವೆ ಎಂದು ಹೇಳಿದರು.

ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್. ಎನ್. ಮುಕುಂದರಾಜ್ ಮಾತನಾಡಿ, ಪತ್ರಕರ್ತರಲ್ಲಿ ಕನ್ನಡ ಸಾಹಿತ್ಯ ಅಭಿರುಚಿಯನ್ನು ಸೃಷ್ಟಿಸುವ ಸಣ್ಣ ಜವಾಬ್ದಾರಿ ಕೆಲಸವನ್ನು ಸಾಹಿತ್ಯ ಅಕಾಡೆಮಿ ಮಾಡುತ್ತಿದೆ. ಮನಃ ಪರಿವರ್ತನೆ ಮೌಲ್ಯಗಳಿರುವ ಕನ್ನಡ ಸಾಹಿತ್ಯವನ್ನು ಕಾರಾಗೃಹದಲ್ಲಿನ ಖೈದಿಗಳಿಗೆ ತಿಳಿಸಲು ಶಿಬಿರಗಳನ್ನು ಆಯೋಜಿಸಲಾಗಿದೆ. ಇದರೊಂದಿಗೆ ವಿವಿಧ ವಲಯಗಳಲ್ಲಿ ಜನರಿಗೂ ಕನ್ನಡ ಸಾಹಿತ್ಯ ಪರಿಚಯಿಸಲು ಯೋಜನೆ ರೂಪಿಸಲಾಗಿದೆ. ಸಾರ್ವಜನಿಕರ ತಿಳುವಳಿಕೆಯನ್ನು ಹೆಚ್ಚಿಸಿ, ಪ್ರಜ್ಞಾವಂತರನ್ನಾಗಿಸುವ ಕೆಲಸವನ್ನು ಮಾಧ್ಯಮಗಳು ಮಾಡಬೇಕಿದೆ. ಯುವ ಪತ್ರಕರ್ತರಿಗೆ ಹಳೆಗನ್ನಡ, ವಚನ ಸಾಹಿತ್ಯ, ಕೀರ್ತನೆ, ತತ್ವಪದ, ಸಾಂಗತ್ಯ, ಸಾಹಿತ್ಯ ಚರಿತ್ರೆ, ನವೋದಯ, ನವ್ಯ, ಬಂಡಾಯ ಪ್ರಗತಿಶೀಲ, ಮಹಿಳಾ ವಿಮೋಚನೆ ಸೇರಿದಂತೆ ಕನ್ನಡ ಸಾಹಿತ್ಯದ ವಿವಿಧ ಮಜಲುಗಳನ್ನು ಪರಿಚಯಿಸುವ ಕಾರ್ಯ ಶಿಬಿರದಲ್ಲಿ ಮಾಡಲಾಗುವುದು ಎಂದು ಹೇಳಿದರು.

ಸಾಹಿತ್ಯ ಅಕಾಡೆಮಿ ರಿಜಿಸ್ಟ್ರಾರ್ ಕರಿಯಪ್ಪ.ಎನ್ ಸ್ವಾಗತ ಭಾಷಣದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿ, ಜನಸಾಮಾನ್ಯರಿಗೆ ಕನ್ನಡ ಸಾಹಿತ್ಯವನ್ನು ಪರಿಚಯಿಸುವ ಸಲುವಾಗಿ ಅಕಾಡೆಮಿಯಿಂದ ಸಂತೆಯಲ್ಲಿ ಸಾಹಿತ್ಯ ಎನ್ನುವ ವಿನೂತನ ಕಾರ್ಯಕ್ರಮ ರೂಪಿಸಲಾಗಿದೆ. ಬೇಸಾಯದ ಬದುಕು ಎನ್ನುವ ಸರಣಿಯಡಿ ನಾಡಿನ 50 ಕೃಷಿ ಸಾಧಕರು, ಮಹಿಳಾ ಮುನ್ನಡಿ ಸರಣಿಯಲ್ಲಿ 50 ಮಹಿಳಾ ಸಾಧಕಿಯರು, ಕನ್ನಡ ಭಾರತಿ ಯೋಜನೆಯಡಿ 150 ಲೇಖಕರ ಕೃತಿಗಳನ್ನು ಸಾಹಿತ್ಯ ಅಕಾಡೆಮಿಯಿಂದ ಹೊರತರಲಾಗುತ್ತಿದೆ. ಶಾಲಾ ಮಕ್ಕಳಲ್ಲಿ ಸೌಹಾರ್ದ ಭಾವನೆ ಬೆಳೆಸಲು ಕನ್ನಡ ಸಾಹಿತ್ಯವನ್ನು ಪರಿಚಯಿಸಲಾಗುವುದು ಎಂದರು.

ಉದ್ಘಾಟನೆ ಕಾರ್ಯಕ್ರಮದಲ್ಲಿ ಶಿಬಿರದ ನಿರ್ದೇಶಕ ಪ್ರೊ.ಎಂ.ಅಬ್ದುಲ್ ರೆಹಮಾನ್ ಪಾಷ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ದಿನೇಶ್ ಗೌಡಗೆರೆ, ಮಾಧ್ಯಮ ಅಕಾಡೆಮಿ ಸದಸ್ಯ ಎಂ.ಎನ್. ಅಹೋಬಳಪತಿ, ಸಾಹಿತ್ಯ ಅಕಾಡೆಮಿ ಸಂಚಾಲಕಿ ಡಾ.ಪಿ.ಚಂದ್ರಿಕಾ, ಶಿಬಿರದ ಸಹ ನಿರ್ದೇಶಕರುಗಳಾದ ನಾಕಿಕೆರೆ ತಿಪ್ಪೇಸ್ವಾಮಿ, ಮಮತಾ ಅರಸೀಕೆರೆ ಸೇರಿದಂತೆ ಮತ್ತಿತರರು ಇದ್ದರು.

# ಕಾನೂನು ಪಾಲಿಸದ ಮೈಕ್ರೋ ಫೈನಾನ್ಸ್‌ಗಳ ಮೇಲೆ ಕ್ರಮ : ಎಸ್ಪಿ ಉಮಾ ಪ್ರಶಾಂತ್

**ದಾವಣಗೆರೆ:** ಮೈಕ್ರೋ ಫೈನಾನ್ಸ್, ಎಂ.ಎಫ್.ಐ ಮತ್ತು ಎನ್.ಬಿ.ಎಫ್.ಸಿ ಸಂಸ್ಥೆಗಳು ಹಾಗೂ ಪಾನ್ ಬ್ರೋಕರ್‌ಗಳು ಕಡ್ಡಾಯವಾಗಿ 'ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಅಧ್ಯಾಪಕ-2025' ಕಾಯಿದೆಯನ್ನು ಪಾಲಿಸಬೇಕೆಂದು ಜಿಲ್ಲಾಡಳಿತ ಕಟ್ಟುನಿಟ್ಟಿನ ಸೂಚನೆ ನೀಡಿದೆ. ಈ ಕಾನೂನು ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದೆ.

ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಪೊಲೀಸ್ ಅಧೀಕ್ಷಕಿ ಉಮಾ ಪ್ರಶಾಂತ್ ಮಾತನಾಡಿ, ಈ ಹಿಂದೆ ನೀಡಿದ್ದ ಸೂಚನೆಗಳ ಹೊರತಾಗಿಯೂ ಕೆಲವು ಸಂಸ್ಥೆಗಳು ಕಾಯಿದೆ ವ್ಯಾಪ್ತಿಗೆ ಬರುವುದಿಲ್ಲ ಎಂದು ವಾದಿಸುತ್ತಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

2025ರ ಸುಗ್ರೀವಾಜ್ಞೆಯ ಪ್ರಕಾರ, ಲಾಭಕ್ಕಾಗಿ ಸಾಲ ನೀಡುವ ಎಲ್ಲಾ ವ್ಯಕ್ತಿಗಳು, ಗುಂಪುಗಳು, ಪಾಲುದಾರರು ಮತ್ತು ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳು ಈ ಕಾಯಿದೆ ವ್ಯಾಪ್ತಿಗೆ ಒಳಪಡುತ್ತಾರೆ. ಇದನ್ನು ವಿರೋಧಿಸುವವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.

ಕಾಯಿದೆ ಪ್ರಕಾರ, ನೋಂದಣಿ ಪ್ರಾಧಿಕಾರ ವಾದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ 30 ದಿನಗಳೊಳಗಾಗಿ ನೋಂದಣಿ ಮಾಡಿಸುವುದು ಕಡ್ಡಾಯ. ಇಲ್ಲವಾದಲ್ಲಿ ಯಾವುದೇ ರೀತಿಯ ಸಾಲ ನೀಡುವಂತಿಲ್ಲ ಅಥವಾ ವಸೂಲಿ ಮಾಡುವಂತಿಲ್ಲ.ಸಾಲ ವಸೂಲಿಗಾಗಿ ಯಾವುದೇ ರೀತಿಯ ಬಲವಂತದ ಕ್ರಮ, ಗೂಂಡಾ ವರ್ತನೆ ಅಥವಾ ಆಸ್ತಿ-ಪಾಸ್ತಿ ವಶಪಡಿಸಿಕೊಳ್ಳುವುದು ಅಪರಾಧ. ಇಂತಹ ದೂರುಗಳು ಬಂದಲ್ಲಿ ಸಂಸ್ಥೆಯ ಪರವಾನಗಿ ರದ್ದುಪಡಿಸಲಾಗುವುದು ಎಂದು ಎಚ್ಚರಿಸಿದರು.

ಇತ್ತೀಚೆಗೆ ನ್ಯಾಮತಿ, ಹದಡಿ, ವಿದ್ಯಾನಗರ ಮತ್ತು ಬಡಾವಣೆ ಪೊಲೀಸ್ ಠಾಣೆಗಳಲ್ಲಿ ಸಾಲ ವಸೂಲಾತಿಗೆ ಸಂಬಂಧಿಸಿದಂತೆ ಪ್ರಕರಣಗಳು ದಾಖಲಾಗಿವೆ. ಜಿಲ್ಲೆಯಲ್ಲಿ ಈ ಬಗ್ಗೆ ಈಗಾಗಲೇ 50 ದೂರುಗಳು ಬಂದಿದ್ದು, ನಿಜವಾದ ದೂರುಗಳ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

ಸಾಲ ನೀಡುವಾಗ ಸಾಲಗಾರನ ಆದಾ ಯದ ಮಿತಿಯನ್ನು ಪರಿಶೀಲಿಸಬೇಕು ಮತ್ತು ವಸೂಲಾತಿ ಮಾಡುವಾಗ ಮಾನವೀಯತೆಯಿಂದ ವರ್ತಿಸಬೇಕು ಎಂದು ಅವರು ಸಲಹೆ ನೀಡಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ, ಇದುವರೆಗೂ ಯಾವುದೇ ಸಂಸ್ಥೆಯೂ ನೋಂದಣಿ ಮಾಡಿಸಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

ಅಕ್ರಮವಾಗಿ ಹಣದ ವಹಿವಾಟು ನಡೆಸುವವರು ಮತ್ತು ಅತಿಯಾದ ಬಡ್ಡಿ ವಸೂಲಿ ಮಾಡುವವರ ಮೇಲೆ ದಾಳಿ ನಡೆಸಿ ಕ್ರಮ ಕೈಗೊಳ್ಳುವಂತೆ ಉಪನೋಂದಣಾಧಿಕಾರಿ ಮಧು ಶ್ರೀನಿವಾಸ್ ಅವರಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಪರಮೇಶ್ವರ ಹೆಗ್ಡೆ, ಸಹಾಯಕ ಪೊಲೀಸ್ ಅಧೀಕ್ಷಕ ಶ್ಯಾಮ್ ವರ್ಗೀಸ್, ಉಪನೋಂದಣಾಧಿಕಾರಿ ಮಧು ಶ್ರೀನಿವಾಸ್ ಸೇರಿದಂತೆ ಜಿಲ್ಲೆಯ ಎಲ್ಲಾ ಪೊಲೀಸ್ ಅಧಿಕಾರಿಗಳು, ಮೈಕ್ರೋ ಫೈನಾನ್ಸ್ ಮತ್ತು ಪಾನ್ ಬ್ರೋಕರ್‌ಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು. ಡಿವೈಎಸ್‌ಪಿ ಬಸವರಾಜ್ ಬಿ. ವಂದಿಸಿದರು.

## ಪಿಒಪಿ-ಬಣ್ಣ ಲೇಪಿತ ಗೌರಿ-ಗಣೇಶ ವಿಗ್ರಹ ವಿಸರ್ಜನೆ ನಿಷೇಧ

**ಚಿಕ್ಕಮಗಳೂರು, ಆ. 22:** ಪ್ಲಾಸ್ಟರ್ ಆಫ್ ಪ್ಯಾರಿಸ್‌ನಿಂದ, ಬಣ್ಣ ಲೇಪಿತವಾದ ಗೌರಿ, ಗಣೇಶ ವಿಗ್ರಹಗಳನ್ನು ಇನ್ನು ಮುಂದೆ ರಾಜ್ಯದ ಯಾವುದೇ ನದಿ, ಕೆರೆ, ಕಾಲುವೆ, ಬಾವಿ ಹಾಗೂ ಇತರ ಜಲಮೂಲಗಳಿಗೆ ವಿಸರ್ಜಿಸುವುದನ್ನು ನಿಷೇಧಿಸಿ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಆದೇಶ ಹೊರಡಿಸಿದೆ.

ಈ ಕುರಿತು ಮಾಹಿತಿ ಬಿಡುಗಡೆ ಮಾಡಿರುವ ಮಂಡಳಿಯ ಸ್ಥಳೀಯ ಪರಿಸರ ಅಧಿಕಾರಿಗಳು, ಮಂಡಳಿಯು 2016ರ ಜುಲೈ 20 ರಂದು ಹೊರಡಿಸಿರುವ ಅಧಿಸೂಚನೆಯಂತೆ ಜಲ ಮಾಲಿನ್ಯ (ತಡೆ ಮತ್ತು ನಿಯಂತ್ರಣ) ಕಾಯ್ದೆ-1974ರ ಪ್ರಕಾರ ಕಲಂ 33(ಅ) ನಲ್ಲಿ ತಿಳಿಸಿರುವ ಪ್ರದತ್ತ ಅಧಿಕಾರವನ್ನು ಚಲಾಯಿಸಿ ಈ ಆದೇಶ ಹೊರಡಿಸಲಾಗಿದ್ದು, ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಜಲ ಮಾಲಿನ್ಯ ತಡೆ ಮತ್ತು ನಿಯಂತ್ರಣ ಕಾಯ್ದೆ 1974ರ ಕಲಂ 45-ಎ ಅನ್ವಯ ರೂ.10,000 ದಂಡ ಮತ್ತು ಜೈಲುವಾಸ ವಿಧಿಸುವ ಅವಕಾಶವಿದೆ ಎಂದು ಎಚ್ಚರಿಸಿದ್ದಾರೆ.

2025ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಗಣೇಶ ವಿಗ್ರಹಗಳ ತಯಾರಿಕೆಗೆ ಪರಿಸರಕ್ಕೆ ಹಾನಿಯಾಗುವ ವಸ್ತುಗಳು ಮತ್ತು ಬಣ್ಣಗಳನ್ನು ಉಪಯೋಗಿಸಿ ನೀರಿನ ಮೂಲಗಳಿಗೆ ವಿಸರ್ಜಿಸುವುದರಿಂದ ನೀರು ಕಲುಷಿತಗೊಂಡು ಪರಿಸರದ ಮೇಲೆ ದುಷ್ಪರಿಣಾಮವಾಗುವ ಸಾಧ್ಯತೆ ಹೆಚ್ಚಾಗಿದೆ. ಹೀಗಾಗಿ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸಲು ಸಾರ್ವಜನಿಕರು ಹಲವು ಅಂಶಗಳನ್ನು ಪಾಲಿಸಿ ಸಹಕರಿಸಬೇಕೆಂದು ಅವರು ಕೋರಿದ್ದಾರೆ.

ಗೌರಿಗಣೇಶ ಹಬ್ಬದ ಸಂದರ್ಭದಲ್ಲಿ ಸಾರ್ವಜನಿಕರು ಬಣ್ಣರಹಿತ ಮಣ್ಣಿನ ಗಣೇಶ ಮೂರ್ತಿಗಳೊಂದಿಗೆ ಹಬ್ಬ ಆಚರಿಸಿ ತದನಂತರ ಸ್ಥಳೀಯ ಸಂಸ್ಥೆಗಳು ನಿಗಧಿಪಡಿಸಿದ ಸ್ಥಳಗಳಲ್ಲಿಯೇ ಮೂರ್ತಿಗಳನ್ನು ವಿಸರ್ಜಿಸುವುದು. ಮಣ್ಣಿನ ಗಣೇಶ ಮೂರ್ತಿಗಳ ವಿಸರ್ಜನೆ ಸಂದರ್ಭದಲ್ಲಿ ಮೊಬೈಲ್ ಟ್ಯಾಂಕ್‌ಗಳಲ್ಲಿ, ಕಲ್ಯಾಣಿಗಳ ಪಕ್ಕದಲ್ಲಿ ಹಸಿ ಕಸ (ಹೂವು, ಹಣ್ಣು, ಬಾಳೆಕಂಬ, ಮಾವಿನ ತೋರಣ, ಇತ್ಯಾದಿ) ಪ್ರತ್ಯೇಕಿಸಿ ಮೂರ್ತಿಗಳೊಂದಿಗೆ ನೀರಿಗೆ ವಿಸರ್ಜಿಸದೆ ಪ್ರತ್ಯೇಕವಾಗಿ ವಿಲೇವಾರಿ ಮಾಡಬೇಕು. ಗರಿಷ್ಠ 5 ಅಡಿ ಎತ್ತರದ ಮಣ್ಣಿನ ವಿಗ್ರಹಗಳನ್ನು ಮಾತ್ರ ತಯಾರಿಸುವುದು, ಪ್ರತಿಷ್ಠಾಪಿಸುವುದು ಸೂಕ್ತ ಎಂದು ಅವರು ಹೇಳಿದ್ದಾರೆ.

# ವರಮಹಾಲಕ್ಷ್ಮಿ ಪೂಜೆ ಸಂಕಷ್ಟಗಳ ನಿವಾರಣೆಗೆ ಸಹಕಾರಿ

**ಚಿಕ್ಕಮಗಳೂರು**-ಸಕಲ ಸಂಪತ್ತು ನೀಡುವ ವರಮಹಾಲಕ್ಷ್ಮಿಯನ್ನು ಶ್ರಾವಣ ಮಾಸದಲ್ಲಿ ಶುಕ್ರವಾರ ಪೂಜೆ ನೆರವೇರಿಸಿದರೆ ಎಲ್ಲಾ ಸಂಕಷ್ಟಗಳು ನಿವಾರಣೆಯಾಗುತ್ತವೆ ಎಂಬ ನಂಬಿಕೆ ಇದೆ ಎಂದು ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ಜಸಂತಾ ಅನಿಲ್‌ಕುಮಾರ್ ತಿಳಿಸಿದರು.

ಅವರು ಇಂದು ನಗರದ ಬಿಜೆಪಿ ಕಚೇರಿ ಪಾಂಚಜನ್ಯದಲ್ಲಿ ಏರ್ಪಡಿಸಲಾಗಿದ್ದ ವರಮಹಾಲಕ್ಷ್ಮಿ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಕಳೆದ 25 ವರ್ಷಗಳಿಂದ ಬಿಜೆಪಿ ಕಚೇರಿಯಲ್ಲಿ ವರಮಹಾಲಕ್ಷ್ಮಿ ಪೂಜೆಯನ್ನು ಆಚರಿಸುತ್ತಾ ಬರುತ್ತಿದ್ದು, ಸುಮಾರು 200 ಮಹಿಳೆಯರು ಈ ಪೂಜೆಯಲ್ಲಿ ಪಾಲ್ಗೊಂಡಿದ್ದಾರೆ. ತಾಯಿ ವರಮಹಾಲಕ್ಷ್ಮಿ ಎಲ್ಲರ ಜೀವನದಲ್ಲಿ ಸುಖ, ಶಾಂತಿ, ನೆಮ್ಮದಿ ನೀಡಲಿ ಎಂದು ಶುಭ ಹಾರೈಸಿದರು.



ಬಿಜೆಪಿಯಲ್ಲಿ ಧಾರ್ಮಿಕತೆಗೆ ಹೆಚ್ಚಿನ ಆದ್ಯತೆ ನೀಡುತ್ತಿರುವುದರಿಂದ ಮಹಿಳೆಯರು ನೂರಾರು ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಈ ಪೂಜೆಗೆ ವಿಶೇಷ ಪ್ರಾಧ್ಯಾನತೆ ನೀಡಿದ್ದಾರೆ ಎಂದು ಶ್ಲಾಘಿಸಿದರು.

ಪೂಜೆಯಲ್ಲಿ ಭಾಗವಹಿಸಿದ ಮಹಿಳೆಯರಿಗೆ ಹರಿಶಿನ-ಕುಂಕುಮ, ಹೂವು-ಬಳೆ ಫಲತಾಂಬಲವನ್ನು ನೀಡಿ ಗೌರವಿಸುತ್ತೇವೆ. ಜಿಲ್ಲೆಯ 9 ತಾಲ್ಲೂಕುಗಳ ಮಂಡಲ ಅಧ್ಯಕ್ಷರುಗಳಿಗೆ ಆಹ್ವಾನ ನೀಡಲಾಗಿದ್ದು, ಅದರಂತೆ ಎಲ್ಲಾ ಮಂಡಲ ಸಮಿತಿಯವರನ್ನು ಕರೆತಂದಿದ್ದಾರೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಚಿಕ್ಕಮಗಳೂರು ನಗರ ಮಂಡಲ ಅಧ್ಯಕ್ಷರಾದ ಪವಿತ್ರ, ಗ್ರಾಮಾಂತರ ಲೀಲಾಪರಮೇಶ್, ಕಡೂರು ಲತಾ, ತರೀಕೆರೆ ಶೃತಿ, ಶೃಂಗೇರಿ ಭಾಗ್ಯ, ಕೊಪ್ಪ ಅನುಸೂಯ, ಮೂಡಿಗೆರೆ ಕಾಮಾಕ್ಷಿ ಹಾಗೂ ಎನ್.ಆರ್ ಪುರ ಮಂಡಲದ ಅಧ್ಯಕ್ಷರು ಭಾಗವಹಿಸಿದ್ದಾರೆ ಎಂದರು.

ಪಲ್ಲವಿ ಸಿ.ಟಿ. ರವಿ ಮಾತನಾಡಿ, ಮಹಿಳಾ ಮೋರ್ಚಾದಿಂದ ಆಚರಿಸಿಕೊಂಡು ಬರುತ್ತಿರುವ ವರಮಹಾಲಕ್ಷ್ಮಿ ಪೂಜೆ ಯಶಸ್ವಿಯಾಗಿದ್ದು, ಎಲ್ಲರಿಗೂ ಸುಖ, ಶಾಂತಿ, ನೆಮ್ಮದಿ ಕರುಣಿಸಲಿ ಎಂದು ಹಾರೈಸಿದರು.

ಉಪಾಧ್ಯಕ್ಷೆ ವೀಣಾಶೆಟ್ಟಿ ಮಾತನಾಡಿ, ತಮ್ಮ ತಮ್ಮ ಮನೆಯಲ್ಲಿ ಚಿಕ್ಕದಾಗಿ ಆರಂಭಿಸಿದ ವರಮಹಾಲಕ್ಷ್ಮಿ ಪೂಜೆ ಇಂದು ದೊಡ್ಡಮಟ್ಟದಲ್ಲಿ ಆಚರಣೆ-ಯಾಗುತ್ತಿದೆ. ಈ ಸಂದರ್ಭದಲ್ಲಿ ಮಹಿಳೆಯರನ್ನು ಆಹ್ವಾನಿಸಿ ಬಾಗಿನ ಅರ್ಪಿಸಿರುವುದು ಧಾರ್ಮಿಕ ಭಾವನೆ ಬೆಳೆಯಲು ಪೂರಕವಾಗಿದೆ ಎಂದರು.

ಚಿಕ್ಕಮಗಳೂರಿನಲ್ಲಿ ಆರಂಭವಾದ ವರಮಹಾಲಕ್ಷ್ಮಿ ಪೂಜೆ ಬಿಜೆಪಿ ವತಿಯಿಂದ ರಾಜ್ಯದಾದ್ಯಂತ ಎಲ್ಲಾ ಜಿಲ್ಲೆಗಳಲ್ಲಿ ನಡೆಯುತ್ತಿರುವುದು ಸಂತಸ ತಂದಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಎಂ.ಆರ್. ದೇವರಾಜ್ ಶೆಟ್ಟಿ, ಖಜಾಂಚಿ ನಾರಾಯಣಗೌಡ, ಮುಖಂಡರಾದ ಸಿ.ಹೆಚ್. ಲೋಕೇಶ್, ಕೋಟೆ ರಂಗನಾಥ್, ಶೃತಿ, ರಾಜೇಶ್ವರಿ ಮತ್ತಿತರರು ಉಪಸ್ಥಿತರಿದ್ದರು.

## ಗೌರಿ-ಗಣೇಶ, ಈದ್ ಮಿಲಾದ್ ಬಂದೋಬಸ್ತ್‌ಗೆ ನಗರದಲ್ಲಿ ರೂಟ್‌ಮಾರ್ಚ್

**ಚಿಕ್ಕಮಗಳೂರು:** ಗೌರಿ-ಗಣೇಶ ಹಾಗೂ ಈದ್ ಮಿಲಾದ್ ಹಬ್ಬಗಳ ಬಂದೋಬಸ್ತ್ ಪ್ರಯುಕ್ತ ಮೆರವಣಿಗೆಗಳು ಸಾಗುವ ಪ್ರಮುಖ ಸ್ಥಳ, ಸೂಕ್ಷ್ಮ, ಅತಿಸೂಕ್ಷ್ಮ ಸ್ಥಳಗಳು ಹಾಗೂ ವಿವಿಧ ಪ್ರದೇಶಗಳಲ್ಲಿ ಪೊಲೀಸ್ ಇಲಾಖೆಯಿಂದ ರೂಟ್ ಮಾರ್ಚ್ ನಡೆಯಿತು.

ಜಿಲ್ಲೆಯಾದ್ಯಂತ ಮುಂಬರುವ ಗೌರಿ-ಗಣೇಶ ಮತ್ತು ಈದ್ ಮಿಲಾದ್ ಹಬ್ಬಗಳ ಬಂದೋಬಸ್ತ್ ಪ್ರಯುಕ್ತ ಎಲ್ಲಾ ಪೊಲೀಸ್ ಠಾಣೆಗಳ ವ್ಯಾಪ್ತಿಯ ಪ್ರಮುಖ ಸೂಕ್ಷ್ಮ, ಅತಿ ಸೂಕ್ಷ್ಮ ಸ್ಥಳ ಮತ್ತು ಪ್ರದೇಶಗಳಲ್ಲಿ ಮೆರವಣಿಗೆಗಳು ಸಾಗುವ ಸ್ಥಳ, ಮಾರ್ಗಗಳಲ್ಲಿ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಯವರು ಪರಿಶೀಲನೆ ನಡೆಸಿದ್ದು,




ಸಮಾಜದಲ್ಲಿ ಶಾಂತಿ, ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಸಾರ್ವಜನಿಕರ ಸುರಕ್ಷತೆ ಮತ್ತು ಭದ್ರತೆ ಹಿತದೃಷ್ಟಿಯಿಂದ ಕಾಲ್ನಡಿಗೆಯಲ್ಲಿ ರೂಟ್ ಮಾರ್ಚ್ ನಡೆಸಲಾಯಿತು.

ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿ ಡಾ. ವಿಕ್ರಂ ಅಮಟೆ ಅವರು ಜಿಲ್ಲೆಯಲ್ಲಿನ ಪೊಲೀಸ್ ಅಧಿಕಾರಿ ಸಿಬ್ಬಂದಿಯವರ ಜೊತೆ ಬಂದೋಬಸ್ತ್ ಸಂಬಂಧ ತೆಗೆದುಕೊಳ್ಳಬೇಕಾದ ಅಗತ್ಯ ಮುಂಜಾಗ್ರತಾ ಕ್ರಮಗಳ ಕುರಿತು ಸಮಾಲೋಚಿಸಿ ಸೂಕ್ತ ಸಲಹೆ, ಸೂಚನೆ ಮತ್ತು ತಿಳುವಳಿಕೆಗಳನ್ನು ನೀಡಿರುತ್ತಾ-ರೆ. ಜಿಲ್ಲೆಯಾದ್ಯಂತ ಪ್ರಮುಖ ಸೂಕ್ಷ್ಮ ಸ್ಥಳಗಳಲ್ಲಿ ರೂಟ್ ಮಾರ್ಚ್ ನಡೆಸಿ ಬಂದೋಬಸ್ತ್ ಸಂಬಂಧ ಸೂಕ್ತ ಕ್ರಮವಹಿಸಲಾಗುತ್ತಿದೆ.

# ಬೆಳವಾಡಿ ಕೆರೆ ಭರ್ತಿ, ರೈತರ ಮೊಗದಲ್ಲಿ ಮಂದಹಾಸ: ಜಿಲ್ಲಾ ಸಚಿವರಿಂದ ಬಾಗಿನ ಅರ್ಪಣೆ

**ಚಿಕ್ಕಮಗಳೂರು:** ಬಯಲು ಭಾಗದ ಬೆಳವಾಡಿ ಮತ್ತು ದೇವನೂರು ಕೆರೆಗಳು ತುಂಬಿರುವುದರಿಂದ ಈ ಭಾಗದ ರೈತರ ಮುಖದಲ್ಲಿ ಮಂದಹಾಸ ಕಾಣುತ್ತಿದ್ದೇವೆ. ಇದರ ಶ್ರೇಯ ಇಲ್ಲಿನ ಶಾಸಕರು ಮತ್ತು ಮುಖಂಡರಿಗೆ ಸೇರಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ಶ್ಲಾಘಿಸಿದರು.

ಅವರು ಇಂದು ಎತ್ತಿನ ಹೊಳೆ ಯೋಜನೆ ನೀರು ಹರಿದಿದ್ದರಿಂದ ಕೋಡಿಬಿದ್ದ ಬೆಳವಾಡಿ ಕೆರೆಗೆ ಬಾಗಿನ ಅರ್ಪಿಸಿ ಮಾತನಾಡಿದರು.

ಕೆರೆ ತುಂಬಿಸುವ ಯೋಜನೆಯನ್ನು ಯಾರೂ ಚಿಂತನೆ ಮಾಡಿರಲಿಲ್ಲ, ನಮ್ಮ ಸರಕಾರ ಅಧಿಕಾರಕ್ಕೆ ಬಂದಾಗ ಈ ಬಗ್ಗೆ ಯೋಜನೆಗೆ ಬಲ ಬಂದಿದೆ. ಇದರಿಂದ ರೈತರ ಬದುಕು ಹಸನಾಗಲಿದೆ ಎಂದು ಹೇಳಿದರು.

ಅಭಿವೃದ್ಧಿ ವಿಚಾರದಲ್ಲಿ ಶಾಸಕರು ಬೇಡಿಕೆ ಇಟ್ಟ ಕೆಲಸಗಳನ್ನು ಶೀಘ್ರದಲ್ಲಿ ಮಾಡುತ್ತಿದ್ದೇನೆ. ಜಿಲ್ಲೆಗೆ ಎಂಯುಎಸ್‌ಎಸ್ ಸಬ್‌ಸ್ಟೇಷನ್‌ಗಳ ಬೇಡಿಕೆ ಇಟ್ಟಿದ್ದಾರೆ ಅದನ್ನೂ ಈಡೇರಿಸಲಿದ್ದೇನೆ. ಯಾರೋ ಹೇಳಿದಂತೆ ನಾನು ಪ್ರಚಾರಕ್ಕಾಗಿ, ಬರಿ ಧ್ವಜ ಹಾರಿಸಲು ಈ ಜಿಲ್ಲೆಗೆ ಬರುವುದಿಲ್ಲ. ಅವರಿಗೆ ಮಾಹಿತಿ ಕೊರತೆ ಇದ್ದಂತೆ ಕಾಣುತ್ತದೆ. ನಾನು ಜಿಲ್ಲೆಯ ಅಭಿವೃದ್ಧಿ ದೃಷ್ಟಿಯಿಟ್ಟು ಕೆಲಸಮಾಡುತ್ತಿದ್ದೇನೆ ಎಂದು ಬಿಜೆಪಿ ಟೀಕೆಗೆ ಪ್ರತ್ಯುತ್ತರ ನೀಡಿದರು.

ಜಿಲ್ಲೆ ಸೇರಿದಂತೆ ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆ ಹೆಚ್ಚಳ ಮಾಡಲು ಥರ್ಮಲ್, ಸೌರವಿದ್ಯುತ್ ಸೇರಿದಂತೆ ಅನೇಕ ಯೋಜನೆಗಳಿಂದ ಬೇಡಿಕೆ ಇರುವ 15-16 ಸಾವಿರ ಮೆಗಾವ್ಯಾಟ್ ಸರಿದೂಗಿಸುತ್ತಿದ್ದೇವೆ. ಶರಾವತಿ ಪಂಪ್ ಸ್ಟೋರೇಜ್ ಯೋಜನೆಗೆ ಕೇಂದ್ರದಿಂದ ತಾತ್ವಿಕ ಅನುಮತಿ ದೊರೆತಿದೆ. ಪಾವಗಡದಲ್ಲಿ ಸೋಲಾರ್ ಮೂಲಕ ಇನ್ನೂ 2 ಸಾವಿರ ಮೆಗಾವ್ಯಾಟ್ ಉತ್ಪಾದನೆ ಮಾಡಲು ರೈತರು ಮುಂದೆ ಬಂದಿದ್ದಾರೆ ಎಂದರು.



ಶಾಸಕ ಎಚ್.ಡಿ.ತಮ್ಮಯ್ಯ ಮಾತನಾಡಿ, ಎತ್ತಿನ ಹೊಳೆ ಯೋಜನೆಯಿಂದ ಬೆಳವಾಡಿ ಮತ್ತು ದೇವನೂರು ಕೆರೆಗಳಿಗೆ ನೀರು ತುಂಬಿಸುತ್ತಿರುವುದು ತಾತ್ಕಾಲಿಕವಾಗಿದೆ, ಎತ್ತಿನ ಹೊಳೆಯಿಂದ ಹಳೇಬೀಡು ಕೆರೆಯನ್ನು ಮಾತ್ರ ಅಲೋಕೇಶನ್ ಮಾಡಿದ್ದಾರೆ. ಅದ್ಯಾಕೋ ಹಿಂದಿನವರು ಬೆಳವಾಡಿ ಮತ್ತು ದೇವನೂರು ಕೆರೆ ಸೇರಿಸಿಲ್ಲ. ಎತ್ತಿನಹೊಳೆ ಯೋಜನೆ ಇನ್ನೆರಡು ವರ್ಷದಲ್ಲಿ ಪೂರ್ಣಗೊಳ್ಳಲಿದೆ. ಅಷ್ಟರೊಳಗೆ ರಣಘಟ್ಟ ಯೋಜನೆಯನ್ನು ನಾವು ಪೂರ್ಣಗೊಳಿಸಿ ಈ ಭಾಗದ ಕೆರೆಗಳನ್ನು ತುಂಬಿಸುವ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು.

ಕಳೆದ 25 ವರ್ಷದಲ್ಲಿ ಒಮ್ಮೆ ಮಾತ್ರ ಬೆಳವಾಡಿ ಕೆರೆ ತುಂಬಿದೆ. ಬರಗಾಲದಲ್ಲಿ ಇಲ್ಲಿನ ಜನ ಊರು ತೊರೆದು ಬೆಂಗಳೂರು ಕಡೆ ಗುಳೆ ಹೋಗಿದ್ದಾರೆ. ಅನೇಕ ರೈತ ಮುಖಂಡರು ಈ ಭಾಗದ ಕೆರೆಗಳನ್ನು ತುಂಬಿಸುವ ಸಂಬಂಧ ಹೋರಾಟ ಮಾಡಿದ್ದಾರೆ. ಅವರ ಹೋರಾಟದ ಫಲ ಇಂದು ಬೆಳವಾಡಿ ಮತ್ತು ದೇವನೂರು ಕೆರೆಗಳಿಗೆ ನೀರು ಹರಿಯುತ್ತಿದೆ ಎಂದು ಹೇಳಿದರು.

ವಿಧಾನ ಪರಿಷತ್ ಮಾಜಿ ಸದಸ್ಯೆ ಗಾಯತ್ರಿ ಶಾಂತೇಗೌಡ ಮಾತನಾಡಿದರು.

ಭದ್ರಾ ಕಾಡ ಅಧ್ಯಕ್ಷ ಡಾ.ಅಂಶುಮಂತ್, ಆಹಾರ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷ ಬಿ.ಎಚ್. ಹರೀಶ್, ಎ.ಎನ್.ಮಹೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಹೆಚ್.ಪಿ ಮಂಜೇಗೌಡ, ಮಹಡಿಮನೆ ಸತೀಶ್, ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ ಶಿವಾನಂದಸ್ವಾಮಿ, ಡಿಸಿ ಸಿ. ಎನ್.ಮೀನಾನಾಗರಾಜ್, ಎಸ್ಪಿ ಡಾ. ವಿಕ್ರಂ ಅಮಟೆ ಉಪ ವಿಭಾಗಾಧಿಕಾರಿ ಬಿ.ಕೆ ಸುದರ್ಶನ್, ತಹಶೀಲ್ದಾರ್ ರೇಷ್ಮ ಮತ್ತಿತರೆ ಅಧಿಕಾರಿಗಳು, ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

ಬೆಳವಾಡಿ ಕೆರೆಗೆ ಬಾಗಿನ ಅರ್ಪಿಸುವ ಹಿನ್ನೆಲೆ ಇಡೀ ಊರನ್ನೇ ತಳಿರು ತೋರಣದಿಂದ ಸಿಂಗರಿಸಲಾಗಿತ್ತು. ಸುತ್ತಮುತ್ತ ಹತ್ತಾರು ಹಳ್ಳಿಯ ಸಹಸ್ರಾರು ಜನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**